ಸಂಪುಟ: ೦೭/ ಸಂಚಿಕೆ: ೧೯೦/ ಬುಧವಾರ ದಿನಾಂಕ : ೧೭-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 190/ WEDNESDAY Date : 17-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಭೂಸ್ವಾಧೀನ ಜಮೀನಿಗೆ ಪರಿಹಾರ ನಿಗದಿಗೊಳಿಸಿದ ರಾಜ್ಯ ಸರ್ಕಾರ

**ಬೆಂಗಳೂರು:** ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತದ ಕಾಮಗಾರಿಗಳಿಗಾಗಿ ಅವಶ್ಯ ಇರುವ ಜಮೀನಿಗೆ ಪರಿಹಾರ ದರ ನಿಗದಿಗೊಳಿಸಿ ರಾಜ್ಯ ಸರ್ಕಾರ ಮಹತ್ವದ ತೀರ್ಮಾನ ಕೈಗೊಂಡಿದೆ. ನೀರಾವರಿ ಭೂಮಿಗೆ ಪ್ರತಿ ಎಕರೆಗೆ 40 ಲಕ್ಷ ರೂ. ಹಾಗೂ ಒಣ ಭೂಮಿಗೆ ಪ್ರತಿ ಎಕರೆಗೆ 30 ಲಕ್ಷ ರೂ. ದರ ನಿಗದಿ ಮಾಡಿ ಸಚಿವ ಸಂಪುಟ ಸಭೆಯು ಇಂದು ನಿರ್ಣಯ ಕೈಗೊಂಡಿದೆ.

ವಿಧಾನಸೌಧದಲ್ಲಿ ಮಂಗಳವಾರ ಸಿಎಂ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಕೃಷ್ಣಾ ಮೇಲ್ದಂಡೆ (ಯುಕೆಪಿ) ಯೋಜನೆ ಕುರಿತು ಸುದೀರ್ಘ ಚರ್ಚೆ ನಡೆಸಿ ಈ ಮಹತ್ವದ ನಿರ್ಧಾರ ತೆಗೆದುಕೊಳ್ಳಲಾಗಿದೆ. ಕ್ಯಾಬಿನೆಟ್ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕಾಂಗ್ರೆಸ್ ಸರ್ಕಾರ ಎಂದೆಂದಿಗೂ ನುಡಿದಂತೆ ನಡೆಯುತ್ತದೆ. ಯುಕೆಪಿ ಹಂತ 3 ಯೋಜನೆಯ ತ್ವರಿತ ಅನುಷ್ಠಾನಕ್ಕೆ ಸರ್ಕಾರ ಆದ್ಯತೆ ನೀಡಿದ್ದು, ಈ ದಿಸೆಯಲ್ಲಿ ರಾಜ್ಯಕ್ಕೆ ಸಮೃದ್ಧಿ ತರಬಲ್ಲ ಐತಿಹಾಸಿಕ ತೀರ್ಮಾನವನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

**ಯುಕೆಪಿ ಹಂತ-3: ರೈತರ ಜೀವನಮಟ್ಟ ಸುಧಾರಣೆ** : ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಮತ್ತು ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು 519.6 ಮೀ. ನಿಂದ 524.256 ಮೀ. ಗೆ ಏರಿಸಲು ಅನುಮತಿ ನೀಡಲಾಗಿದೆ. ಜಲಾಶಯದ ಎತ್ತರವನ್ನು ಹೆಚ್ಚಿಸುವುದರಿಂದ ಆಲಮಟ್ಟಿಯ ಹಿನ್ನೀರಿನಿಂದ ಸುಮಾರು 75,000 ಎಕರೆಗೂ ಹೆಚ್ಚು ಜಮೀನು ಮುಳುಗಡೆಯಾಗುವ ಸಂಭವವಿದೆ. ಇನ್ನು 5.94 ಲಕ್ಷ ಹೆಕ್ಟೇರ್(ಸುಮಾರು 14 ರಿಂದ 15 ಲಕ್ಷ ಎಕರೆ) ಕ್ಕೂ ಹೆಚ್ಚು ಭೂಮಿಗೆ ನೀರಾವರಿ ಕಲ್ಪಿಸಬಹುದಾಗಿದೆ. ಯುಕೆಪಿ ಹಂತ 3 ಬೃಹತ್ ನೀರಾವರಿ ಯೋಜನೆಯಾಗಿದ್ದು, ಈ ಭಾಗದ ರೈತರ ಜಮೀನಿಗೆ ನೀರೊದಗಿಸುವುದರಿಂದ ಅವರ



ಜೀವನ ಮಟ್ಟದ ಸುಧಾರಣೆಯಾಗಲಿದೆ ಎಂದರು. ನೀರಾವರಿ ಜಮೀನಿಗೆ 40 ಲಕ್ಷ, ಒಣಭೂಮಿಗೆ 30 ಲಕ್ಷ ಪರಿಹಾರ: ಇಂದು ನಡೆದ ವಿಶೇಷ ಸಂಪುಟ ಸಭೆಯಲ್ಲಿ ಕೃಷ್ಣಾ ಯೋಜನೆಗೆ ಸಂಬಂಧಿಸಿದಂತೆ ರೈತರು, ರೈತ ಹೋರಾಟ ಸಂಘಗಳು, ಸಂಬಂಧಪಟ್ಟ ಶಾಸಕರು, ಸಚಿವರೊಂದಿಗೆ ಚರ್ಚೆ ನಡೆಸಿ ಪ್ರಮುಖ ತೀರ್ಮಾನಗಳನ್ನು ಕೈಗೊಳ್ಳಲಾಗಿದೆ. ಯೋಜನೆಗೆ ರೈತರಿಂದ ಸ್ವಾಧೀನಪಡಿಸಿಕೊಳ್ಳುವ ನೀರಾವರಿ ಜಮೀನಿಗೆ ಎಕರೆಯೊಂದಕ್ಕೆ 40 ಲಕ್ಷ ರೂ, ಖುಷ್ಕಿ ಒಣಭೂಮಿಗೆ 30 ಲಕ್ಷ ಪರಿಹಾರವನ್ನು ನೀಡಬೇಕು ಎಂದು ಸಚಿವ ಸಂಪುಟ ತೀರ್ಮಾನಿಸಿದೆ ಎಂದು ಹೇಳಿದರು. **ಕಾಲುವೆ ನಿರ್ಮಾಣ:** ಕಾಲುವೆ ತೋಡಲು ಸುಮಾರು 51,837 ಎಕರೆ ಬೇಕಾಗಿದ್ದು, ಇದರಲ್ಲಿ 23631 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆ ನಡೆಸಿ, ಕಾಮಗಾರಿ ಕೈಗೊಳ್ಳಲಾಗಿದೆ. ಕಾಲುವೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಭೂಮಿಗೆ ಸಂಬಂಧಿಸಿದಂತೆ ಒಣಭೂಮಿಯ ಎಕರೆಯೊಂದಕ್ಕೆ 25 ಲಕ್ಷ ಹಾಗೂ ನೀರಾವರಿ ಜಮೀನಿಗೆ ಎಕರೆಯೊಂದಕ್ಕೆ 30 ಲಕ್ಷ ಪರಿಹಾರ ಒದಗಿಸಲು ತೀರ್ಮಾನಿಸಲಾಗಿದೆ. ಕಾಲುವೆ ನಿರ್ಮಾಣದಲ್ಲಿ ಜಮೀನು ಕಳೆದುಕೊಂಡವರು ಯೋಜನೆಯ ಫಲಾನುಭವಿಗಳಾಗುತ್ತಾರೆ ಎಂದು ತಿಳಿಸಿದರು.

**ಮೂರು ಆರ್ಥಿಕ ವರ್ಷದೊಳಗೆ ಪರಿಹಾರ:** ಭೂಸ್ವಾಧೀನ ಪಡಿಸಿಕೊಂಡ ಜಮೀನುಗಳಿಗೆ ಪರಿಹಾರವನ್ನು ಮೂರು ಆರ್ಥಿಕ ವರ್ಷದೊಳಗೆ ನೀಡಲು ತೀರ್ಮಾನಿಸಲಾಗಿದೆ.

ಯೋಜನೆಗೆ ಭೂಸ್ವಾಧೀನಪಡಿಸಿಕೊಳ್ಳಲು ರೈತರ ಮನವೊಲಿಸುವುದಾಗಿ ಸಂಬಂಧಪಟ್ಟ ಸಚಿವರು, ಶಾಸಕರು, ರೈತಮುಖಂಡರು ತಿಳಿಸಿದ್ದಾರೆ. ರಾಜ್ಯದ ಜನರಿಗೆ ಒಳಿತು ಮಾಡುವ ಈ ಸಾರ್ಥಕ ಯೋಜನೆಗೆ ಭೂಮಿ ನೀಡಲು ರೈತರು ಸಮ್ಮತಿಸಬಹುದೆಂಬ ಭರವಸೆಯಿದೆ. ಇದೊಂದು ಐತಿಹಾಸಿಕ ತೀರ್ಮಾನ. 2023ರಲ್ಲಿ ಹಿಂದಿನ ಬಿಜೆಪಿ ಸರ್ಕಾರದಲ್ಲಿ ಪರಿಹಾರದ ಮೊತ್ತ ಕಡಿಮೆಯಿದ್ದುದ್ದರಿಂದ ಯಾವ ರೈತರೂ ಭೂಮಿ ನೀಡಲು ಒಪ್ಪಲಿಲ್ಲ ಹಾಗೂ ಯೋಜನೆಗೆ ಚಾಲನೆಯೂ ದೊರೆಯದೇ ನೆನೆಗುದಿಗೆ ಬಿದ್ದಿತ್ತು ಎಂದರು. ಈ ಸಂದರ್ಭದಲ್ಲಿ ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ ಹಾಗೂ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ್, ಜವಳಿ ಸಚಿವ ಶಿವಾನಂದ ಪಾಟೀಲ್ ಉಪಸ್ಥಿತರಿದ್ದರು.

### ಅಧಿಸೂಚನೆಗಾಗಿ ಕೇಂದ್ರಕ್ಕೆ ಒತ್ತಾಯ

ಈ ಹಿಂದೆ ಬೆಳಗಾವಿಯಲ್ಲಿ ಉತ್ತರ ಕರ್ನಾಟಕದ ಶಾಸಕರು, ರೈತಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಒಂದೇ ಬಾರಿಗೆ ಅಂಟಿಜಟಣ ಚಿತಿಚಿಡಿಜ ನೀಡುವ ಬಗ್ಗೆ ಪರಿಗಣಿಸಿದ್ದರೂ, ಪರಿಹಾರ ಧನ ನಿಗದಿಯಾಗಿರಲಿಲ್ಲ. ಕಾಂಗ್ರೆಸ್ ಸರ್ಕಾರ ಎಂದೆಂದಿಗೂ ನುಡಿದಂತೆ ನಡೆಯುವ ಸರ್ಕಾರ. ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಸರ್ಕಾರ ಆದ್ಯತೆ ನಿಡುತ್ತದೆ. ಆದರೆ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಇದುವರೆಗೂ ಅಧಿಸೂಚನೆ ಹೊರಡಿಸಿಲ್ಲ. ಯೋಜನೆಯ ತ್ವರಿತ ಅನುಷ್ಠಾನಕ್ಕೆ ಅನುಕೂಲವಾಗುವಂತೆ ಅಧಿಸೂಚನೆ ಹೊರಡಿಸಲು ಕೇಂದ್ರದವರನ್ನು ಹಲವು ಬಾರಿ ಭೇಟಿ ಮಾಡಿ ಅಧಿಸೂಚನೆ ಹೊರಡಿಸುವಂತೆ ಒತ್ತಾಯಿಸಲಾಗಿದೆ ಎಂದು ಸಿಎಂ ತಿಳಿಸಿದರು.

## ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ಸಚಿವಾಲಯ



**ಬೆಂಗಳೂರು:** ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ವಿಶೇಷ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದರು.ವಿಧಾನಸೌಧದಲ್ಲಿ ಮಂಗಳವಾರ ಸಿಎಂ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಅವರು ಮಾಹಿತಿ ನೀಡಿದರು.

ಬೀದರ್, ಕಲಬುರಗಿ, ರಾಯಚೂರು, ಬಳ್ಳಾರಿ, ವಿಜಯನಗರ, ಯಾದಗಿರಿ ಸೇರಿದಂತೆ ಏಳು ಜಿಲ್ಲೆಗಳೂ ಒಳಗೊಂಡಂತೆ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದರು. ಭೂಸ್ವಾಧೀನ, ಪುನಶ್ಚೇತನ ಹಾಗೂ ಪರಿಹಾರ ಪ್ರಾಧಿಕಾರ: ಇದೇ ವೇಳೆ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ 3ರ ಭೂಸ್ವಾಧೀನ ಪ್ರಕ್ರಿಯೆ ತ್ವರಿತಗೊಳಿಸಲು ಇಂದು ಕರೆಯಲಾಗಿದ್ದ ವಿಶೇಷ ಸಚಿವ ಸಂಪುಟ ಸಭೆ ನಡೆದ ಬಳಿಕ ಸುದ್ದಿಗೋಷ್ಠಿಯಲ್ಲಿ ಜಲಸಂಪನ್ಮೂಲ ಸಚಿವರೂ ಆಗಿರುವ ಡಿ.ಕೆ. ಶಿವಕುಮಾರ್ ಮಾತನಾಡಿದರು.

ಪುನಶ್ಚೇತನ ಕಾರ್ಯಕ್ಕೆ ಸಂಬಂಧಿಸಿದಂತೆ ಪ್ರಮುಖ ಪ್ರಕರಣಗಳಿರುವ ಕಾರಣ, ನಾವು ಈ ವಿಚಾರದಲ್ಲಿ ಹೊಸ ನೀತಿ ರೂಪಿಸಲು ತೀರ್ಮಾನಿಸಿದ್ದೇವೆ. ಈ ವಿಚಾರವಾಗಿ ಸ್ಥಳೀಯ ನಾಯಕರು, ರೈತರ ಅಭಿಪ್ರಾಯ ಪಡೆಯಲಾಗುವುದು. ನ್ಯಾಯಯುತ ಪರಿಹಾರ, ಭೂಸ್ವಾಧೀನ ಪಾರದರ್ಶಕತೆ ಹಕ್ಕು ಕಾಯ್ದೆಯ ಸೆಕ್ಷನ್ 51ರ ಅಡಿಯಲ್ಲಿ ಭೂಸ್ವಾಧೀನ, ಪುನಶ್ಚೇತನ ಹಾಗೂ ಪರಿಹಾರ ಪ್ರಾಧಿಕಾರ ರಚಿಸಲು ಅವಕಾಶವಿದೆ. ಹೀಗಾಗಿ ರಾಜ್ಯ ಸರ್ಕಾರ ಮೊದಲ ಬಾರಿಗೆ ಈ ಪ್ರಾಧಿಕಾರವನ್ನು ರಚಿಸಲಿದೆ. ಮುಖ್ಯನ್ಯಾಯಮೂರ್ತಿಗಳು ನೇಮಕ ಮಾಡುವ ನ್ಯಾಯಾಧೀಶರ ನೇತೃತ್ವದಲ್ಲಿ ಈ ಪ್ರಾಧಿಕಾರವನ್ನು ರಚಿಸಲಾಗುವುದು ಎಂದು ತಿಳಿಸಿದರು.

## ಧರ್ಮಸ್ಥಳ ಪ್ರಕರಣ ದೂರುದಾರ ಚಿನ್ನಯ್ಯನ ಜಾಮೀನು ಅರ್ಜಿ ವಜಾ

**ಮಂಗಳೂರು:** ಕಳೆದ ಎರಡು ದಶಕಗಳಲ್ಲಿ ಧರ್ಮಸ್ಥಳದಲ್ಲಿ ಹಲವಾರು ಕೊಲೆ ಮತ್ತು ಅತ್ಯಾಚಾರಗಳು ನಡೆದಿದ್ದು, ನಾನೇ ಆ ಶವಗಳನ್ನು ಹೂತು ಹಾಕಿರುವುದಾಗಿ ಹೇಳಿ, ಈಗ ಜೈಲು ಪಾಲಾಗಿರುವ ಸಿ ಎನ್ ಚಿನ್ನಯ್ಯನ ಜಾಮೀನು ಅರ್ಜಿಯನ್ನು ಬೆಳ್ತಂಗಡಿ ನ್ಯಾಯಾಲಯ ಮಂಗಳವಾರ ವಜಾಗೊಳಿಸಿದೆ.

ಶಿವಮೊಗ್ಗ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿರುವ ಚಿನ್ನಯ್ಯನನ್ನು ಇಂದು ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು. ಅನಾರೋಗ್ಯ ಮತ್ತು ಕೌಟುಂಬಿಕ ಜವಾಬ್ದಾರಿಗಳ ಆಧಾರದ ಮೇಲೆ ಜಾಮೀನು ಕೋರಿ ಚಿನ್ನಯ್ಯ ಅರ್ಜಿ ಸಲ್ಲಿಸಿದ್ದರು. ಆದರೆ ಜಾಮೀನು ನೀಡದಂತೆ ಎಸ್‌ಐಟಿ ಪರ ವಕೀಲರು ಆಕ್ಷೇಪಣೆ ಸಲ್ಲಿಕೆ ಮಾಡಿದ್ದರು.

ಎರಡು ಕಡೆಯ ವಾದ-ಪ್ರತಿವಾದ ಆಲಿಸಿದ ಬೆಳ್ತಂಗಡಿ ನ್ಯಾಯಾಲಯದ ನ್ಯಾಯಾಧೀಶ ವಿಜಯೇಂದ್ರ ಅವರು ಚಿನ್ನಯ್ಯನ ಜಾಮೀನು ಅರ್ಜಿ ವಜಾ ಮಾಡಿ ಇಂದು ಆದೇಶ ಹೊರಡಿಸಿದ್ದಾರೆ.

## ಇಂದು ರಾಜ್ಯಾದ್ಯಂತ 500 ನಂದಿನಿ ಮಾರಾಟ ಮಳಿಗೆಗಳ ಉದ್ಘಾಟನೆ

**ಬೆಂಗಳೂರು:** ರಾಜ್ಯಾದ್ಯಂತ ಹೊಸದಾಗಿ 500 ನಂದಿನಿ ಮಾರಾಟ ಮಳಿಗೆ, ಪಾರ್ಲರ್‌ಗಳನ್ನು ಸ್ಥಾಪನೆ ಮಾಡಲಾಗಿದ್ದು, ಇಂದು ಕಲಬುರಗಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಳಿಗೆಗಳಿಗೆ ಚಾಲನೆ ನೀಡಲಿದ್ದಾರೆ ಎಂದು ಕರ್ನಾಟಕ ಹಾಲು ಮಹಾ ಮಂಡಳಿಯ (ಕೆಎಂಎಫ್) ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ಹೇಳಿದ್ದಾರೆ. ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ 2,598 ನಂದಿನಿ ಮಳಿಗೆ, ಪಾರ್ಲರ್‌ಗಳು ಈಗಾಗಲೇ ಕಾರ್ಯಾಚರಿಸುತ್ತಿದೆ.

ಈ ಎಲ್ಲ ಮಳಿಗೆಗಳ ಮುಖಾಂತರ ಗ್ರಾಹಕರಿಗೆ ಕೈಗೆಟುಕುವ ಬೆಲೆಗಳಲ್ಲಿ ಸಕಾಲದಲ್ಲಿ ದೊರೆಯುವಂತೆ ಮಾಡಲಾಗಿದೆ. ಇದಕ್ಕೆ ಹೊಸದಾಗಿ 500 ಸಂಖ್ಯೆ ನಂದಿನಿ ಪಾರ್ಲರ್ ಗಳು ಸೇರ್ಪಡೆಯಾಗಲಿದೆ ಎಂದು ತಿಳಿಸಿದರು. ಕಲ್ಯಾಣ ಕರ್ನಾಟಕ ಭಾಗದ ಬಳ್ಳಾರಿ, ಕೊಪ್ಪಳ, ರಾಯಚೂರು, ವಿಜಯನಗರ, ಕಲಬುರಗಿ, ಬೀದರ್ ಮತ್ತು ಯಾದಗಿರಿ ಪ್ರದೇಶಗಳಲ್ಲಿ ಒಟ್ಟು 68 ಹೊಸ ನಂದಿನಿ ಪಾರ್ಲರ್ ಗಳನ್ನು ಪ್ರಾರಂಭಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಕೆಎಂಎಫ್ ಐದು ದಶಕಗಳಿಂದ ನಂದಿನಿ ಬ್ರ್ಯಾಂಡ್‌ನಲ್ಲಿ ಪರಿಶುದ್ಧ ಹಾಗೂ ರುಚಿಕರ ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ದೇಶದಾದ್ಯಂತ ಮಾರಾಟ ಮಾಡುತ್ತಿದೆ. 2024-25ನೇ ಸಾಲಿನಲ್ಲಿ ಕೆಎಂಎಫ್‌ನ ವಹಿವಾಟು 24,928 ಕೋಟಿ ರೂ.ಗೆ ತಲುಪಿದ್ದು, ಶೇ.16.5ರಷ್ಟು ವಾರ್ಷಿಕ ಪ್ರಗತಿಯನ್ನು ಸಾಧಿಸಿದೆ. 2025-26ನೇ ಸಾಲಿಗೆ ರೂ. 28,444 ಕೋಟಿ ತಲುಪುವ ಗುರಿಯನ್ನು ಸಂಸ್ಥೆಯು ಹೊಂದಿದೆ ಎಂದು ಬಿ. ಶಿವಸ್ವಾಮಿ ತಿಳಿಸಿದರು.

## ಭೂ ಸ್ವಾಧೀನ ಪ್ರಕ್ರಿಯೆ ಅಕ್ರಮ, ಕೂಡಲೇ ಕೈಬಿಡಿ

**ಬೆಂಗಳೂರು:** ರಾಮನಗರ ಜಿಲ್ಲೆಯ ಬಿಡದಿ, ಬೈರಮಂಗಲ ಮತ್ತು ಕಂಚುಗಾರನಹಳ್ಳಿಯಲ್ಲಿ ಭೂ ಸ್ವಾಧೀನ ಮಾಡುತ್ತಿರುವುದು ಅಕ್ರಮವಾಗಿದೆ. ಇದನ್ನು ರಾಜ್ಯ ಸರಕಾರ ಕೂಡಲೇ ಕೈಬಿಡಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದರು.

ಮಂಗಳವಾರ ರೈತರ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಹೆಸರಲ್ಲಿ ಕಾಂಗ್ರೆಸ್ ಸರಕಾರ ಬಿಡದಿ, ಬೈರಮಂಗಲ ಮತ್ತು ಕಂಚುಗಾರನಹಳ್ಳಿಯಲ್ಲಿ 9,600 ಎಕರೆ ಜಮೀನನ್ನು ಸ್ವಾಧೀನ ಮಾಡುತ್ತಿದೆ. ಈ ಪೈಕಿ 6,500 ಎಕರೆ ಕೃಷಿ ಭೂಮಿ ಇದೆ. ಇಲ್ಲಿ 10 ಲಕ್ಷಕ್ಕೂ ಅಧಿಕ ತೆಂಗು ಹಾಗೂ ಮಾವಿನ ಮರಗಳಿವೆ ಎಂದರು.

ಪ್ರತಿದಿನ 6 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗಿ ಕೆಎಂಎಫ್‌ಗೆ ತಲುಪುತ್ತಿದೆ. 3 ಸಾವಿರಕ್ಕೂ ಅಧಿಕ ರೈತರು ಹಾಗೂ ಕಾರ್ಮಿಕರು ಕೃಷಿಯನ್ನು ನಂಬಿಕೊಂಡಿದ್ದಾರೆ. ಇಷ್ಟು ಫಲವತ್ತಾದ ಜಮೀನುಗಳನ್ನು ಸ್ವಾಧೀನ ಮಾಡಿಕೊಂಡು ನಿವೇಶನಗಳನ್ನು ನೀಡಲಾಗುತ್ತಿದೆ. ಹೌಸಿಂಗ್ ಬೋರ್ಡ್‌ನಿಂದ 560 ಎಕರೆ ಜಮೀನು ಸ್ವಾಧೀನಕ್ಕೆ ಪಡೆದು ಸೈಟುಗಳನ್ನು ನಿರ್ಮಿಸಿದೆ. ಆದರೂ ಇಲ್ಲಿ ಯಾರೂ ಮನೆಗಳನ್ನು ನಿರ್ಮಿಸಿಲ್ಲ ಎಂದರು.



ಕೆಂಪೇಗೌಡ ಬಡಾವಣೆ, ಶಿವರಾಮ ಕಾರಂತ ಬಡಾವಣೆಗಳಲ್ಲೇ ಖಾಲಿ ಇದೆ. ಇಷ್ಟು ಖಾಲಿ ಇರುವಾಗ ಫಲವತ್ತಾದ ಭೂಮಿಯನ್ನು ಸ್ವಾಧೀನ ಮಾಡಿಕೊಂಡರೆ ಅದು ರೈತರಿಗೆ ಮಾಡುವ ವಂಚನೆ. ಈ ಹಿಂದೆ ಎಚ್.ಡಿ.ಕುಮಾರಸ್ವಾಮಿ ಸಿಎಂ ಆಗಿದ್ದಾಗ ಸ್ವಾಧೀನ ಬೇಡವೆಂದು ರೈತರಿಗೆ ಜಮೀನು ಬಿಟ್ಟಿದ್ದರು. ಈಗ ಕಾಂಗ್ರೆಸ್ ಸರಕಾರ ಕುತಂತ್ರ ಮಾಡಿ ಜಮೀನು ಲೂಟಿ ಮಾಡಿ ರಿಯಲ್ ಎಸ್ಟೇಟ್‌ನಿಂದ ಹಣ ಹೊಡೆಯಲು ಪ್ಲಾನ್ ಮಾಡಿದೆ. ರಾಮನಗರದಲ್ಲಿ ಸೈಟು ಬೇಕೆಂದು ಯಾರು ಕೇಳಿದ್ದಾರೆ ಮಾಡಿರುವ ಸೈಟುಗಳೇ ಖಾಲಿ ಇದೆ. ಇದು ಅಕ್ರಮ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಬಾನಂಗಳದಲ್ಲಿ ಬಣ್ಣ ಬಣ್ಣದ ಚಿತ್ತಾರದ ಮಧ್ಯ ನಡೆದ ರಥೋತ್ಸವ

## ಶ್ರೀ ಕಾಡಸಿದ್ಧೇಶ್ವರ ಮಹಾರಾಜ ಕೀ ಜೈ ಘೋಷ

**ರಬಕವಿ-ಬನಹಟ್ಟಿ:** ದಿನಂಪ್ರತಿ ಮಗ್ಗಗಳ ಸಪ್ಪಳದಿಂದ ಕೂಡುವ ಬನಹಟ್ಟಿ ಪಟ್ಟಣ ಮಂಗಳವಾರದಂದು ಶ್ರೀ ಕಾಡಸಿದ್ಧೇಶ್ವರ ದೇವರ ರಥೋತ್ಸವ ನಿಮಿತ್ತ ಸಂಜೆ 4 ಗಂಟೆಯಿಂದ 12 ಗಂಟೆವರೆಗೆ ಇಡೀ ರಸ್ತೆ ತುಂಬೆಲ್ಲಾ ಪಟಾಕಿಗಳ ಸದ್ದಿನಿಂದ ಕೂಡಿದ್ದರೆ, ಬಾನಂಗಳದಲ್ಲಿ ಬಣ್ಣ ಬಣ್ಣದ ಚಿತ್ತಾರದ ಮೂಲಕ ಜಾತ್ರೆಯ ಮೆರಗಿಗೆ ಸಾಕ್ಷಿಯಾಯಿತು.

ಪ್ರತಿ ವರ್ಷ ಜಾತ್ರಾ ಮಹೋತ್ಸವ ನಿಮಿತ್ತ ಪರಂಪರೆಯಂತೆ ಬಾನಂಗಳಕ್ಕೆ ಚಿಮ್ಮಿದ ಪಟಾಕಿಗಳು ಚಿತ್ತಾರ ಮೂಡಿಸಿ ರಂಜಿಸಿದವು. ಆರಾಧ್ಯ ದೈವ ಶ್ರೀ ಕಾಡಸಿದ್ಧೇಶ್ವರ ರಥೋತ್ಸವ ಕಾರ್ಯಕ್ರಮವು ರಾತ್ರಿ 8 ಕ್ಕೆ ಸಂಭ್ರಮದಿಂದ ಜರುಗಿತು.

ಬೆಳಿಗ್ಗಿನಿಂದಲೇ ಪಟ್ಟಣದ ಸಾವಿರಾರು ಕುಟುಂಬಗಳು ರಥಕ್ಕೆ ಕಂಠಮಾಲೆ, ಹೂವಿನ ಹಾರ ಹಾಕುವ ಮೂಲಕ ಭಕ್ತಿ ಮೆರೆದರು. ಕೆಲವರು ನಾಣ್ಯಗಳನ್ನು ಕಂಠಮಾಲೆ ರೂಪದಲ್ಲಿ ಒದಗಿಸಿದ್ದು ವಿಶೇಷವಾಗಿತ್ತು. ಈ ಬಾರಿ ಹೂವಿನ ಹಾರಗಳದ್ದೇ ಕಾರುಬಾರು ಸುಮಾರು ಎರಡು ಮೂರು ಟ್ರಕ್‌ಗಳಷ್ಟು ಹೂವಿನ ಹಾರಗಳು ರಥದ ಬೀದಿ ತುಂಬೆಲ್ಲಾ ಇಡೀ ರಸ್ತೆಯೇ ಹೂವಿನಿಂದ ತುಂಬಿ ಕಂಗೊಳಿಸುತ್ತಿತ್ತು. ಅನೇಕ ಕಡೆಗಳಿಂದ ಪಾದಯಾತ್ರೆ ಮೂಲಕ ಆಗಮಿಸಿದ ಭಕ್ತರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸುವಲ್ಲಿ ಕಮಿಟಿ ಯಶಸ್ವಿಯಾಯಿತು.

**ಮಂಗಳಾರುತಿ:** ಸಂಜೆ 5:30 ಕ್ಕೆ ಮಹಾಮಂಗಳಾರುತಿಯೊಂದಿಗೆ ರಥೋತ್ಸವಕ್ಕೆ



ಚಾಲನೆ ನೀಡಲಾಯಿತು.

ದ್ರುವ ಜತ್ತಿ, ಸಿದ್ದು ಕೊಣ್ಣೂರ, ಆನಂದ ನ್ಯಾಮಗೌಡ, ವಿದ್ಯಾಧರ ಸವದಿ, ಡಾ. ಎ.ಆರ್. ಬೆಳಗಲಿ, ಮಂಗಳವಾರ ಪೇಟೆ ದೈವ ಮಂಡಳಿ ಚೇರಮನ್ ಶ್ರೀಶೈಲ ದಭಾಡಿ, ಡಾ.ಎಂ. ಎಸ್. ದಡ್ಡೇನವರ, ಚಂದ್ರಶೇಖರ ಶಿವಪೂಜಿ, ಮಲ್ಲಿಕಾರ್ಜುನ ಬಾಣಕಾರ, ಜಿ.ಎಂ. ಪಾಟೀಲ, ನಗರಾಧ್ಯಕ್ಷೆ ವಿದ್ಯಾ ಪ್ರವೀಣ ದಭಾಡಿ, ಶ್ರೀಶೈಲ ಬೀಳಗಿ, ಸುರೇಶ ಚಿಂಡಕ, ಭೀಮಶಿ ಮಗದುಮ್, ದಾನಪ್ಪ ಹುಲಜತ್ತಿ, ಸಿದ್ಧನಗೌಡ ಪಾಟೀಲ, ರಾಜು ಭದ್ರನ್ನವರ, ಪ್ರಭಾಕರ ಮೊಳೇದ, ನಂದು ಕುಳ್ಳಿ, ಮಲ್ಲಣ್ಣ ಬಾವಲತ್ತಿ, ಕಿರಣ ಆಳಗಿ, ಮಲ್ಲಪ್ಪ ಜನವಾಡ ಸೇರಿದಂತೆ ಅನೇಕ ಹಿರಿಯರು ಉಪಸ್ಥಿತರಿದ್ದರು.

## ನಕಲಿ ಮಾರ್ಕ್ಸ್ ಕಾರ್ಡ್, ಆಧಾರ್ ಕಾರ್ಡ್ ಮುದ್ರಣ: ಆರೋಪಿಗಳು ವಶಕ್ಕೆ

**ಬೆಂಗಳೂರು:** ಪದವಿ ಮತ್ತು ಮತ್ತು ಸ್ನಾತಕೋತ್ತರ ಪದವಿಯ ನಕಲಿ ಮಾರ್ಕ್ಸ್ ಕಾರ್ಡ್ ಮತ್ತು ಓಯೋ ರೂಮ್‌ಗಳಿಗಾಗಿ ನಕಲಿ ಆಧಾರ್ ಕಾರ್ಡ್ ಸಿದ್ಧಪಡಿಸಿ ಹಣಕ್ಕಾಗಿ ಮಾರಾಟ ಮಾಡುತ್ತಿದ್ದ ಖತರ್ನಾಕ್ ಗುಂಪೊಂದು ಪೊಲೀಸರ ಬಲೆಗೆ ಬಿದ್ದಿದೆ.

ಸೈಬರ್ ಸೆಂಟರ್ ಹೆಸರಿನಲ್ಲಿ ನಕಲಿ ದಾಖಲೆ ಸೃಷ್ಟಿಸುತ್ತಿದ್ದ ಇಬ್ಬರನ್ನು ಹೆಬ್ಬಗೋಡಿಯಲ್ಲಿ ಪೊಲೀಸರು ಬಂಧಿಸಿದ್ದಾರೆ. ಬಂಧಿತರನ್ನು ಯಶವಂತ್, ರಘುವೀರ್ ಎಂದು ಗುರುತಿಸಲಾಗಿದೆ. ನಕಲಿ ಮಾರ್ಕ್ಸ್ ಕಾರ್ಡ್ ರೇಟ್ ಫಿಕ್ಸ್: ಆರೋಪಿಗಳು ಹೆಬ್ಬಗೋಡಿಯಲ್ಲಿ ಗುರುದತ್ತ ಸೈಬರ್ ಸೆಂಟರ್ ಹೆಸರಲ್ಲಿ ಈ ನಕಲಿ ದಂಧೆ ನಡೆಸುತ್ತಿದ್ದರು. ಒಂದೊಂದು ಮಾರ್ಕ್ಸ್ ಕಾರ್ಡ್‌ಗಳಿಗೂ ಒಂದೊಂದು ರೇಟ್ ಫಿಕ್ಸ್ ಮಾಡಿದ್ದರು ಎನ್ನಲಾಗಿದೆ.

ಓಯೋ ರೂಮ್‌ಗಳಿಗಾಗಿ ನಕಲಿ ಆಧಾರ್ ಕಾರ್ಡ್: ಅಷ್ಟೇ ಅಲ್ಲದೆ ಆರೋಪಿಗಳು ಓಯೋ ರೂಮ್‌ಗಳಿಗೆ ಹೋಗುವವರಿಗೆ ನಕಲಿ ಆಧಾರ್ ಕಾರ್ಡ್?ಗಳನ್ನು ನೀಡುತ್ತಿದ್ದರು. ಯಾವುದೇ ವಿಶ್ವವಿದ್ಯಾಲಯದ ಮಾರ್ಕ್ಸ್ ಕಾರ್ಡ್ ಬೇಕಿದ್ದರೂ ಗ್ಯಾಂಗ್ ಮಾಡಿಕೊಡುತ್ತಿತ್ತು. ಆದರೆ, ಒಂದೊಂದಕ್ಕೆ ಒಂದೊಂದು ರೇಟ್ ಫಿಕ್ಸ್ ಮಾಡಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

**ವಿವಿಗಳ ಸೀಲು, ನಕಲಿ ಅಂಕಪಟ್ಟಿ ವಶಕ್ಕೆ:** ಆರೋಪಿಗಳ ಬಳಿ ಕರ್ನಾಟಕ ಸೇರಿದಂತೆ ವಿವಿಧ ರಾಜ್ಯದ ಪ್ರಸಿದ್ಧ ವಿಶ್ವವಿದ್ಯಾಲಯ ಹಾಗೂ ಕರ್ನಾಟಕ ಪ್ರೌಢ ಶಿಕ್ಷಣ ಪರೀಕಾ ಮಂಡಳಿ ಸೇರಿದಂತೆ ಅನೇಕ ಸರ್ಕಾರಿ ಸೀಲುಗಳು ಪತ್ತೆಯಾಗಿವೆ. ಜೊತೆಗೆ ಎಂಟು ನಕಲಿ ಮಾರ್ಕ್ಸ್ ಕಾರ್ಡ್, ಏಳು ನಕಲಿ ಆಧಾರ್




ಕಾರ್ಡ್‌ಗಳು, ಕಂಪ್ಯೂಟರ್ ಸೇರಿದಂತೆ ಕೆಲ ವಸ್ತುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ನಕಲಿ ಮಾರ್ಕ್ಸ್ ಕಾರ್ಡ್, ಆಧಾರ್ ಕಾರ್ಡ್ ಮಾಡುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ಮಾಡಿದರು. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹೆಬ್ಬುಗೋಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ಯಾರಿಗೆಲ್ಲ ನಕಲಿ ದಾಖಲೆಗಳನ್ನು ನೀಡಿದ್ದಾರೆ ಎಂದು ವಿಚಾರಣೆ ನಡೆಯುತ್ತಿದೆ.

ಇನ್ನು ಪ್ರತ್ಯೇಕ ಘಟನೆಯಲ್ಲಿ ನಕಲಿ ದಾಖಲೆ ಸೃಷ್ಟಿಸಿಕೊಂಡು ಜಮೀನಿಗೆ ಅಕ್ರಮವಾಗಿ ಪ್ರವೇಶ ಮಾಡಿದಲ್ಲದೇ, ಅವಾಚ್ಯ ಶಬ್ದಗಳಿಂದ ನಿಂದಿಸಿ ಧಮ್ಕಿ ಹಾಕಿದ ಆರೋಪಕ್ಕೆ ಸಂಬಂಧಿಸಿದಂತೆ ಸ್ಯಾಂಡಲ್ ವುಡ್ ನಿರ್ಮಾಪಕನ ವಿರುದ್ಧ ಬೆಳ್ಳಂದೂರು ಠಾಣೆಯಲ್ಲಿ ದೂರು ದಾಖಲಾಗಿದೆ.

ನಕಲಿ ದಾಖಲೆ ಸೃಷ್ಟಿಸಿ ಜಮೀನು ಕಬಳಿಸಲು ಯತ್ನಿಸಿದ್ದಾರೆ ಎಂದು ರೈತರೊಬ್ಬರು ದೂರಿ, ದಿಯಾ ಸಿನಿಮಾ ನಿರ್ಮಾಪಕ ಕೃಷ್ಣಚೈತನ್ಯ ಹಾಗೂ ಅವರ ಸಹಚರರ ವಿರುದ್ಧ ಬೆಳ್ಳಂದೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ.

### ಮತಾಂತರ ನಿಷೇಧ ಕಾನೂನುಗಳಿಗೆ ತಡೆಯಾಜ್ಞೆ

## ರಾಜ್ಯಗಳಿಗೆ ಸುಪ್ರೀಂ ನೋಟಿಸ್

**ಹೊಸದಿಲ್ಲಿ:** ರಾಜ್ಯಗಳ ಮತಾಂತರ ನಿಷೇಧ ಕಾನೂನುಗಳಿಗೆ ತಡೆಯಾಜ್ಞೆ ನೀಡಬೇಕೆಂದು ಕೋರಿ ಸಲ್ಲಿಸಲಾಗಿರುವ ಅರ್ಜಿಗಳನ್ನು ವಿಚಾರಣೆಗೆ ಎತ್ತಿಕೊಂಡಿರುವ ಸುಪ್ರೀಂ ಕೋರ್ಟ್ ಮಂಗಳವಾರ, ಈ ವಿಷಯದಲ್ಲಿ ಸಂಬಂಧಪಟ್ಟ ರಾಜ್ಯಗಳ ನಿಲುವುಗಳನ್ನು ಕೋರಿ ನೋಟಿಸ್ ಜಾರಿಗೊಳಿಸಿದೆ. ರಾಜ್ಯಗಳು ತಮ್ಮ ನಿಲುವುಗಳನ್ನು ತಿಳಿಸಿದ ಬಳಿಕ, ಅರ್ಜಿಗಳ ವಿಚಾರಣೆ ನಡೆಸಲಾಗುವುದು ಎಂದು ಮುಖ್ಯ ನ್ಯಾಯಾಧೀಶ ಬಿ.ಆರ್. ಗವಾಯಿ ಮತ್ತು ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಅವರನ್ನೊಳಗೊಂಡ ನ್ಯಾಯಪೀಠವೊಂದು ಹೇಳಿತು.



ಉತ್ತರಗಳನ್ನು ಸಲ್ಲಿಸಲು ರಾಜ್ಯಗಳಿಗೆ ನ್ಯಾಯಾಲಯವು ನಾಲ್ಕು ವಾರಗಳ ಸಮಯಾವಕಾಶವನ್ನು ನೀಡಿತು ಮತ್ತು ಆ ಉತ್ತರಗಳಿಗೆ ಪ್ರತಿಕ್ರಿಯೆ ಸಲ್ಲಿಸಲು ಅರ್ಜಿದಾರರಿಗೆ ಎರಡು ವಾರಗಳ ಸಮಯಾವಕಾಶವನ್ನು ನೀಡಿತು. ಮುಂದಿನ ವಿಚಾರಣೆಯನ್ನು ಆರು ವಾರಗಳ ಅವಧಿಗೆ ಮುಂದೂಡಿತು.ಈ ನಡುವೆ, ಉತ್ತರಪ್ರದೇಶ ಮುಂತಾದ ರಾಜ್ಯಗಳು ಹಾಲಿ ಮತಾಂತರ ನಿಷೇಧ ಕಾನೂನುಗಳಿಗೆ "ಮತ್ತಷ್ಟು ಕಠೋರ" ಬದಲಾವಣೆಗಳನ್ನು ತಂದಿರುವುದನ್ನು ಗಮನದಲ್ಲಿರಿಸಿಕೊಂಡು, ಅರ್ಜಿಯಲ್ಲಿ ಸೂಕ್ತ ಬದಲಾವಣೆಗಳನ್ನು ಮಾಡಲು ಅರ್ಜಿದಾರರೊಬ್ಬರ ಪರವಾಗಿ ಹಾಜರಾಗಿರುವ ಹಿರಿಯ ವಕೀಲ ಸಿ.ಯು. ಸಿಂಗ್ ರಿಗೆ ನ್ಯಾಯಾಲಯ ಅನುಮತಿ ನೀಡಿತು. ಉತ್ತರಪ್ರದೇಶ, ಮಧ್ಯಪ್ರದೇಶ, ಹಿಮಾಚಲಪ್ರದೇಶ, ಉತ್ತರಾಖಂಡ, ಛತ್ತೀಸ್‌ಗಢ, ಗುಜರಾತ್, ಹರ್ಯಾಣ, ಜಾರ್ಖಂಡ್ ಮತ್ತು ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳು ಮತಾಂತರ ನಿಷೇಧ ಕಾನೂನುಗಳನ್ನು ಜಾರಿಗೆ ತಂದಿವೆ. ಈ ಕಾನೂನುಗಳ ಸಾಂವಿಧಾನಿಕ ಮಾನ್ಯತೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಹಲವಾರು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನಡೆಸುತ್ತಿದೆ. ಪ್ರಕರಣದ ತುರ್ತು ವಿಚಾರಣೆಗೆ ಒತ್ತು ನೀಡಿದ ವಕೀಲ ಸಿಂಗ್, ಯಾರಾದರೂ ಅಂತರ್ ಧರ್ಮೀಯ ವಿವಾಹವಾದರೆ ಅವರಿಗೆ ಜಾಮೀನು ಸಿಗುವುದು ಅಸಂಭವ ಎಂದು ಹೇಳಿದರು.

## ಪೊಲೀಸರ ಆರೋಗ್ಯ ತಪಾಸಣೆ

### ಸಮಗ್ರ ಯೋಜನೆ ಜಾರಿಗೆ ಕೋರಿದ್ದ ಪಿಐಎಲ್ ಇತ್ಯರ್ಥ

**ಬೆಂಗಳೂರು:** ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲ ಪೊಲೀಸರ ಆರೋಗ್ಯ ತಪಾಸಣೆಗೆ ಸಮಗ್ರ ಯೋಜನೆ ಜಾರಿಗೊಳಿಸಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ಇತ್ಯರ್ಥಪಡಿಸಿದೆ.

ಬೆಂಗಳೂರಿನ ಬಸವೇಶ್ವರನಗರದ ನಿವಾಸಿ ಎನ್. ಲೀಲಾವತಿ ಎಂಬುವವರು ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಜೋಶಿ ಅವರಿದ್ದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು.

ಕೆಲ ಕಾಲ ಅರ್ಜಿದಾರರ ಪರ ವಕೀಲರ ವಾದ ಆಲಿಸಿದ ನ್ಯಾಯಪೀಠ, ಅರ್ಜಿಯಲ್ಲಿ ಪ್ರಸ್ತಾಪಿಸಲಾಗಿರುವ ವಿಷಯ ಹಾಗೂ ಮನವಿಗಳು ಗಂಭೀರವಾಗಿದೆ. ಈ ಕುರಿತು ಸರ್ಕಾರದ ಸಂಬಂಧಪಟ್ಟ ಇಲಾಖೆಗಳು/ ಪ್ರಾಧಿಕಾರಗಳು ಗಮನಿಸಬೇಕು. ಅದಕ್ಕಾಗಿ ನ್ಯಾಯಾಲಯ ಪ್ರತ್ಯೇಕ ಆದೇಶ ಹೊರಡಿಸುವ ಅಗತ್ಯವಿಲ್ಲ. ಒಂದೊಮ್ಮೆ ಅರ್ಜಿದಾರರ ಮನವಿಗಳ ಬಗ್ಗೆ ಸಂಬಂಧಪಟ್ಟ ಇಲಾಖೆ/ಪ್ರಾಧಿಕಾರಗಳು ಗಮನ ಹರಿಸದಿದ್ದರೆ, ನಂತರ ಈ ಕುರಿತು ಮನವಿ ಸರ್ಕಾರ ಪರಿಗಣಿಸಬಹುದು ಎಂದು ಅಭಿಪ್ರಾಯಪಟ್ಟು ಅರ್ಜಿ ಇತ್ಯರ್ಥಪಡಿಸಿದೆ.

ರಾಜ್ಯದಲ್ಲಿ ಶೇ.80 ಪೊಲೀಸರು ಬೊಜ್ಜು ಹಾಗೂ ಶೇ.87 ಪೊಲೀಸರು ಕಡಿಮೆ ತೂಕದ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಬಹುತೇಕ ಪೊಲೀಸರು ಮಾನಸಿಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಆದ್ದರಿಂದ, ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲ ಪೊಲೀಸರ ದೈಹಿಕ ಹಾಗೂ ಮಾನಸಿಕ ಕ್ಷಮತೆ ಕುರಿತು ತಪಾಸಣೆ ನಡೆಸಲು ಸಮಗ್ರ ಯೋಜನೆ ಜಾರಿಗೆ ತರಬೇಕು. ಆ ಯೋಜನೆಯಡಿ ವರ್ಷಕ್ಕೊಮ್ಮೆ ಕಡ್ಡಾಯವಾಗಿ ತಜ್ಞ ವೈದ್ಯರು ಪೊಲೀಸರ ಆರೋಗ್ಯ ತಪಾಸಣೆ ನಡೆಸಬೇಕು. ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧದ ಇಲಾಖಾ ವಿಚಾರಣೆ, ಭ್ರಷ್ಟಾಚಾರ ಆರೋಪಗಳ ಪಟ್ಟಿಯನ್ನು ಪ್ರತಿ ತಿಂಗಳು ಪ್ರಕಟಿಸಬೇಕು ಎಂದು ಅರ್ಜಿದಾರರು ಕೋರಿದ್ದರು.

# ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ಹೆಚ್ಚಿನ ಲಾಭ



**ಕಾರವಾರ:** ಕೃಷಿಕರು ತಮ್ಮ ಉತ್ಪನ್ನಗಳನ್ನು ಸೂಕ್ತ ರೀತಿಯಲ್ಲಿ ಸಂಸ್ಕರಿಸಿ ಮೌಲ್ಯ ವರ್ಧನೆ ಮಾಡುವ ಮೂಲಕ ಹೆಚ್ಚಿನ ಪ್ರಮಾಣದಲ್ಲಿ ಆರ್ಥಿಕ ಲಾಭ ಪಡೆಯಲು ಸಾಧ್ಯವಾಗಲಿದ್ದು, ಈ ಬಗ್ಗೆ ಅಗತ್ಯವಿರುವ ಎಲ್ಲಾ ರೀತಿಯ ಮಾಹಿತಿ, ನೆರವು ಮತ್ತು ತರಬೇತಿಯನ್ನು ಕೃಷಿ ಇಲಾಖೆಯ ಮೂಲಕ ನೀಡಲಾಗುತ್ತಿದ್ದು, ಜಿಲ್ಲೆಯ ರೈತರು ಇದರ ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಉತ್ತರ ಕನ್ನಡ ಜಿಲ್ಲೆ ಮತ್ತು ಕೆಪೆಕ್ ಸಂಸ್ಥೆ ಬೆಂಗಳೂರು ಅವರ ಸಹಯೋಗದಲ್ಲಿ ನಡೆದ, ಪ್ರಧಾನಮಂತ್ರಿಗಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯ ಕುರಿತ ಜಿಲ್ಲಾ ಮಟ್ಟದ ಅರಿವು ಮೂಡಿಸುವ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಕೃಷಿಕರು ತಮ್ಮ ಉತ್ಪನ್ನಗಳನ್ನು ಸೂಕ್ತ ರೀತಿಯಲ್ಲಿ ಮೌಲ್ಯವರ್ಧನೆ ಮಾಡುವ ವಿಧಾನಗಳನ್ನು ತಿಳಿಯದೇ ಇರುವ ಕಾರಣ ನಷ್ಟ ಅನುಭವಿಸುತ್ತಿದ್ದಾರೆ, ಪಶ್ಚಿಮಘಟ್ಟ ಪ್ರದೇಶವನ್ನು ಹೊಂದಿರುವ ನಮ್ಮ ಜಿಲ್ಲೆಯಲ್ಲಿ ಬೆಳೆಯುವ ಹಲವು ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ವಿಶೇಷ ಬೇಡಿಕೆ ಇದೆ. ರೈತರು ತಮ್ಮ ಉತ್ಪನ್ನಗಳನ್ನು ಸಂಸ್ಕರಿಸಿ ಮೌಲ್ಯ ವರ್ಧನೆ ಮಾಡಲು ಅಗತ್ಯವಿರುವ ತರಬೇತಿ, ಅಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಆರ್ಥಿಕ ನೆರವು ಮತ್ತು ಸಂಸ್ಕರಿಸಿದ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯ ಒದಗಿಸುವ ಬಗ್ಗೆ ಕೂಡಾ ಕೃಷಿ ಇಲಾಖೆಯ ಅಧಿಕಾರಿಗಳು ಸಂಪೂರ್ಣ ಸಹಕಾರ ನೀಡಲಿದ್ದು ರೈತರು ಇದರ ಸಂಪೂರ್ಣ ಪ್ರಯೋಜನ ಪಡೆಯಬೇಕು ಎಂದರು.

ಜಿಲ್ಲೆಯಲ್ಲಿನ ಕಿರು ಆಹಾರ ಸಂಸ್ಕರಣಾ ಘಟಕಗಳನ್ನು ಆರಂಭಿಸಲು ಆರ್ಥಿಕ ನೆರವು ಕೋರಿ ಬ್ಯಾಂಕ್‌ಗಳಿಗೆ ಅರ್ಜಿ ಸಲ್ಲಿಸುವ ರೈತರ ಅರ್ಜಿಗಳನ್ನು, ಸಣ್ಣಪುಟ್ಟ ಕಾರಣಗಳಿಗೆ ತಿರಸ್ಕರಿಸದೇ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಪುರಸ್ಕರಿಸುವಂತೆ ಲೀಡ್ ಬ್ಯಾಂಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆಪೆಕ್ ಸಂಸ್ಥೆಯ ಎಡಿಎಂ ಚಂದ್ರಕುಮಾರ ಪ್ರಸ್ತಾವಿಕವಾಗಿ ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯು ಕಿರು ಆಹಾರ ಸಂಸ್ಕರಣಾ ಘಟಕಗಳಿಗೆ ಹಣಕಾಸು, ತಾಂತ್ರಿಕ ಮತ್ತು ವ್ಯವಹಾರ ಬೆಂಬಲ ಸಂಸ್ಕರಣೆ ಮತ್ತು ರಫ್ತು, ಆಮದು ಮಾಡಲು ಸಹಕಾರ, ರೈತರು ಉತ್ಪಾದಿಸಿದ ಪದಾರ್ಥಗಳಿಗೆ ಉತ್ತಮ ಮೌಲ್ಯವನ್ನು ಒದಗಿಸುವುದು, ಗ್ರಾಮೀಣ ಭಾಗದ ಜನರಿಗೆ ಉದ್ಯೋಗ ಸೃಷ್ಠಿ, ಸಣ್ಣ ಪ್ರಮಾಣದ ಉದ್ಯಮ ಪ್ರಾರಂಭಿಸಲು ಅವಕಾಶ ಕಲ್ಪಿಸಲಾಗಿದ್ದು, ಈ ಯೋಜನೆಯು ವಿಶ್ವಾಸರ್ಹ ಯೋಜನೆಯಾಗಿದ್ದು, ಶೇ.50% ರಷ್ಟು ಸಬ್ಸಿಡಿ ನೀಡಲಾಗುತ್ತಿದೆ ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಪಶುಪಾಲನಾ ಇಲಾಖೆ ಉಪ ನಿರ್ದೇಶಕ ಡಾ. ಮೋಹನ್ ಕುಮಾರ್ , ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಡಾ. ಸತೀಶ್ ಬಿ.ಪಿ. , ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಪ್ರತೀಕ್, ನಬಾರ್ಡ್‌ನ ಡಿಡಿಎಂ ಸುಶೀಲ, ಲೀಡ್ ಬ್ಯಾಂಕ್ ವ್ಯವಸ್ಥಾಪಕ ರಾಜಪ್ಪ ಗೌಳಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು, ರೈತರು ಉಪಸ್ಥಿತರಿದ್ದರು.

ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕ ಶಿವಪ್ರಸಾದ ಗಾವಂಕರ ಸ್ವಾಗತಿಸಿದರು. ನಟರಾಜ್ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಪಿಎಂಎಫ್‌ಎಂಇ ಯೋಜನೆಯು ಕಿರು ಆಹಾರ ಸಂಸ್ಕರಣಾ ಘಟಕಗಳು ಮೌಲ್ಯವರ್ಧನೆ ಮಾಡಿರುವ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಆಯೋಜಿಸಲಾಗಿತ್ತು ಹಾಗೂ ಪಿಎಂಎಫ್‌ಎಂಇ ಯೋಜನೆಯ ಕುರಿತಂತೆ ರೈತರಿಗೆ ಸಮಗ್ರ ಮಾಹಿತಿ ನೀಡಲಾಯಿತು.



## ವಿವಿಧ ಗ್ರಾ.ಪಂ.ಗಳಿಗೆ ಸಿಇಓ ಭೇಟಿ

**ಕಾರವಾರ:** ಕಾರವಾರ ತಾಲೂಕಿನ ಅಮದಳ್ಳಿ, ಅಂಕೋಲಾ ತಾಲೂಕಿನ ಹಟ್ಟಿಕೇರಿ, ಬಬ್ರುವಾಡ ಗ್ರಾಮ ಪಂಚಾಯಿತಿಗೆ ಮಂಗಳವಾರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ದಿಲೀಷ್ ಶಶಿ ಭೇಟಿ ನೀಡಿ ಪರಿಶೀಲಿಸಿದರು.

ಘನ ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಿಲೂಲು, ಸ್ವಸಹಾಯ ಸಂಘದ ಮಹಿಳಾ ಚಾಲಕಿಯರು ಹಾಗೂ ವಿಭಜಕರೊಂದಿಗೆ ಸಂವಾದವನ್ನು ಏರ್ಪಡಿಸಿ ಸದರಿ ಕಾರ್ಯ ಚಟುವಟಿಕೆಯ ಬಗ್ಗೆ ಪರಿಶೀಲಿಸಿ ಅಗತ್ಯ ಮಾಹಿತಿ ಹಾಗೂ ಸಲಹೆಯನ್ನು ನೀಡಿದರು ಹಾಗೂ ಹಟ್ಟಿಕೇರಿ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಚಟುವಟಿಕೆ ಬಗ್ಗೆ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ ಆಡಳಿತ ಅಲ್ಲಾಬಕಾಷ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ, ಗ್ರಾಮ ಪಂಚಾಯತ್ ಅಧ್ಯಕ್ಷರು ಅಭಿವೃದ್ಧಿ ಅಧಿಕಾರಿಗಳು, SBMG, HRD ಸಮಾಲೋಚಕರು NRLM, ಸಮಾಲೋಚಕರು ಹಾಗೂ ಸಿಬ್ಬಂದಿಗಳು ಹಾಜರಿದ್ದರು.



## ಸರ್ ಎಂ. ವಿಶ್ವೇಶ್ವರಯ್ಯನವರ ಜನ್ಮದಿನಾಚರಣೆ

**ಬೆಳಗಾವಿ:** ದಿ. ಇನ್‌ಸ್ಟಿಟ್ಯೂಷನ್ ಆಫ್ ಇಂಜಿನೀಯರ್ಸ ಸ್ಥಾನಿಕ ಸಂಸ್ಥೆ, ಬೆಳಗಾವಿಯಲ್ಲಿ ಸರ್ ಎಂ.ವ್ಹಿ.ಅವರ 165 ನೇಯ ಜನ್ಮ ದಿನಾಚರಣೆಯ ಅಂಗವಾಗಿ 58 ನೇಯ "ಇಂಜಿನೀಯರುಗಳ ದಿನ"ವನ್ನು ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀ. ರಾಜೇಂದ್ರ ಬೆಳಗಾಂಕರ, ಚೇರಮನ್ ಕೆ.ಎಲ್.ಎಸ್, ಜಿ.ಐ.ಟಿ. ಇವರು, ಭಾರತವು ಮೂರನೆಯ ಆರ್ಥಿಕ ಬಲಿಷ್ಠ ರಾಷ್ಟ್ರವಾಗುವಲ್ಲಿ ಸಾಗುತ್ತಿರುವ ಕುರಿತು ಮಾತನಾಡಿದರು. ವಿಶೇಷ ಉಪನ್ಯಾಸಕರಾಗಿ ಆಗಮಿಸದ್ದ ಧಾರವಾಡ ಐ.ಐ.ಟಿ.ಯ ಪ್ರಾಧ್ಯಾಪಕರಾದ ಡಾ.ಆರ್.ಪ್ರಭು ಇವರು ನಿಗದಿತ ವಿಷಯ "ಡೀಪ್ ಟೆಕ್ ಮತ್ತು ಇಂಜಿನೀಯರಿಂಗ್ ಎಕ್ಸಲೆನ್ಸ್–ಡ್ರೈವಿಂಗ್ ಇಂಡಿಯಾಸ್ ಟೆಕೆಡ್" ವಿಷಯದ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ವಿಶೇಷ ಸಾಧನಗೈದ ಇಂಜಿನೀಯರುಗಳಾದ ಡಾ.ರಘುರಾಜ ಕೆ.ರಾವ್, ಎಂ.ಡಿ. ಅಕ್ವಾಟೆಕ್ ಹಾಗೂ ಶ್ರೀ ಸಂಜೀವಕುಮಾರ ಹಲಕಾಯಿ ಅಧೀಕ್ಷಕ ಅಭಿಯಂತರರು ಲೋಕೋಪಯೋಗಿ ಇಲಾಖೆ, ಬೆಳಗಾವಿ ಇವರನ್ನು ಸನ್ಮಾನಿಸಲಾಯಿತು.

ನಿವೃತ್ತ ಮು.ಇಂ.ಶ್ರೀ.ಎಸ್.ಎಸ್.ಖಣಗಾವಿ ಇವರು ಅಧ್ಯಕ್ಷತೆ ವಹಿಸಿದ್ದರು.

ಡಾ. ಬಿ. ವೆಂಕಟೇಶ ಗೌರವ ಕಾರ್ಯದರ್ಶಿಗಳು ಸ್ವಾಗತಿಸಿದರು. ಬಿ.ಜಿ.ಧರೆಣ್ಣಿ, . ಸಿ.ಬಿ.ಹಿರೇಮಠ ಅತಿಥಿ ಪರಿಚಯ ಮಾಡಿದರು. ಪೂರ್ಣಿಮಾ ಚರಂತಿಮಠ ಸರ್. ಎಂ.ವ್ಹಿ. ಬಗೆಗೆ ಮಾತನಾಡಿದರು. ಪ್ರೋ. ಮಂಜುನಾಥ ವಂಧನಾರ್ಪಣೆ ಸಲ್ಲಿಸದರು. ಶ್ರೀ ವಿಲಾಸ ಬದಾಮಿ, ಎಚ್.ಸುರೇಶ, ಎಸ್. ಎಸ್.ಸಬರದ, ಎಸ್.ಎಮ್.ಮೇಟಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಉಚಿತ ಟೈಲರಿಂಗ್ ತರಬೇತಿ

**ಕಾರವಾರ:** ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಸೆ.22 ರಿಂದ 31 ದಿನಗಳ ಕಾಲ ನಿರುದ್ಯೋಗಿ ಮಹಿಳೆಯರಿಗೆ ಉಚಿತ ಟೈಲರಿಂಗ್ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದಾಗಿದೆ. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು. ಅಭ್ಯರ್ಥಿಗಳು ಸ್ಥಳಿಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು. ಆಸಕ್ತಿಯುಳ್ಳ ಅಭ್ಯರ್ಥಿಗಳು ಸೆ.22 ರಂದು ಬೆಳಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ(ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ತರಬೇತಿಗೆ ನೇರವಾಗಿ ವಿದ್ಯಾರ್ಹತೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ಈ ಕೆಳಕಂಡ ದೂರವಾಣಿ ಸಂಖ್ಯೆ 8970476050, 9591514154, 9686248369, 8970446644, 9505894247 ಗಳಿಗೆ ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಲ್ಮೀಕಿ ಜಯಂತಿ ಅರ್ಥಪೂರ್ಣವಾಗಿ ಆಚರಿಸಿ



**ಕಾರವಾರ:** ಜಿಲ್ಲೆಯಲ್ಲಿ ಅಕ್ಟೋಬರ್ 7 ರಂದು ನಡೆಯುವ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ನಿರ್ದೇಶನ ನೀಡಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿ ವರ್ಷದಂತೆ ಈ ಬಾರಿಯೂ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಗುವುದು. ವಾಲ್ಮೀಕಿ ಅವರ ಭಾವಚಿತ್ರವನ್ನು, ವಿವಿಧ ಕಲಾತಂಡಗಳೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸುವ ಮೂಲಕ ಕಾರ್ಯಕ್ರಮವನ್ನು ಶಿಷ್ಠಾಚಾರದಂತೆ ಆಚರಣೆ ಮಾಡಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ವಿವಿಧ ಇಲಾಖೆಗಳು ಈ ಕಾರ್ಯಕ್ರಮಕ್ಕೆ ಅಗತ್ಯ ಸಮನ್ವಯ ವಹಿಸುವಂತೆ ಹಾಗೂ ಪ.ಪಂಗಡದ ವಿವಿಧ ಸಂಘಟನೆಗಳು, ಮುಖಂಡರು ಕಾರ್ಯಕ್ರಮ ಯಶಸ್ವಿಗೆ ಅಗತ್ಯ ಸಹಕಾರ ನೀಡುವಂತೆ ತಿಳಿಸಿದ ಅವರು, ಕಾರ್ಯಕ್ರಮದ ದಿನದಂದು ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ತಪ್ಪದೇ ಹಾಜರಾಗುವಂತೆ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಐ.ಎ.ಎಸ್ ಪ್ರೊಬೇಷನರಿ ಅಧಿಕಾರಿ ಝುಪಿಶಾನ ಹಕ್, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಪ್ರಕಾಶ ಹಾಲಮ್ಮನವರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಉಮೇಶ ವೈ. ಕೆ, ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ವಿವಿಧ ಸಂಘಟನೆಯ ಮುಖಂಡರು ಉಪಸ್ಥಿತರಿದ್ದರು.

## ಸಾರ್ವಜನಿಕ ಸಮ್ಮುಖ ಉತ್ಕನನ ಮಾಡಲು ಆಗ್ರಹ

**ಮುದ್ದೇಬಿಹಾಳ:** ತಾಲೂಕಿನ ಕೋಳೂರು, ತಂಗಡಗಿ ಭಾಗದ ವಿಜಯನಗರ ಕಾಲದ ಐತಿಹಾಸಿಕ ದೇವಸ್ಥಾನಗಳನ್ನು ಪುನರುಜ್ಜೀವನ ಮಾಡಲು ಪ್ರವಾಸೋದ್ಯಮ ಇಲಾಖೆ ಸಿದ್ಧತೆ ನಡೆಸಿದ್ದು ಜಿಲ್ಲಾ, ತಾಲೂಕ ಅಧಿಕಾರಿ ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಉತ್ಖನನ ಕಾರ್ಯ ನಡೆಸಬೇಕು ಎಂದು ಸಂಗೊಳ್ಳಿ ರಾಯಣ್ಣ ಯುವ ವೇದಿಕೆಯ ಸಂಚಾಲಕ, ನ್ಯಾಯವಾದಿ ಪರಮೇಶ ಮಾತಿನ ರಾಜ್ಯ ಸರಕಾರವನ್ನು ಆಗ್ರಹ ಮಾಡಿದ್ದಾರೆ.

ಈ ಕುರಿತು ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಐತಿಹಾಸಿಕ ತ್ರಿಕೋಟೇಶ್ವರ ದೇವಾಲಯ, ತಾಳಿಕೋಟಿ ಯುದ್ಧದ ಕೋಳೂರು ಗ್ರಾಮದ ಕೊಟ್ಟೂರು ಬಸವೇಶ್ವರ ದೇವಸ್ಥಾನ, ಅಳಿಯ ರಾಮರಾಯನ ಗದ್ದುಗೆ, ರಣರಂಗದ ಕುರುಹುಗಳು ಹಾಗೂ ಶಾಸನಗಳು ಸೇರಿದಂತೆ ಹಲವು ಐತಿಹಾಸಿಕ ಸ್ಮಾರಕಗಳನ್ನು ಅಭಿವೃದ್ಧಿಪಡಿಸಿ ಪ್ರವಾಸೋದ್ಯಮ ಬೆಳೆಸುವ ಜೀರ್ಣೋದ್ಧಾರ ಯೋಜನೆ ಪ್ರಕಟಿಸಿರುವ ಪ್ರವಾಸೋದ್ಯಮ ಇಲಾಖೆಯ ಎಚ್ ಕೆ ಪಾಟೀಲ್ ಹಾಗೂ ಶಾಸಕ ಸಿ ಎಸ್ ನಾಡಗೌಡ ಅವರ ಕ್ರಮವನ್ನು ನಾವು ಸ್ವಾಗತಿಸುತ್ತೇವೆ. ಆದರೆ ಈ ಐತಿಹಾಸಿಕ ಸ್ಥಳಗಳು ಅತ್ಯಂತ ಸೂಕ್ಷ್ಮತೆ ಹಾಗೂ ಸಂಪತ್ತಿನ ಕುರಿತು ಬಹಳಷ್ಟು ಚರ್ಚೆಗಳು ಇದ್ದು



ಅದು ಸರಕಾರಕ್ಕೆ ಸೇರಬೇಕು ಹೀಗಾಗಿ ಉತ್ಕನನ ಕಾರ್ಯ ಪಾರದರ್ಶಕವಾಗಿ ಮಾಡಬೇಕು ಎಂದು ತಮ್ಮ ಕೋರಿದ್ದಾರೆ.

ನ್ಯಾಯವಾದಿ ಪ್ರಭುಗೌಡ ಗೌಡರ ಮಾತನಾಡಿ, ಈ ಪ್ರದೇಶದಲ್ಲಿ ಐತಿಹಾಸಿಕ ಕುರುಹುಗಳು, ಶಿಲಾಶಾಸನ, ಸಮಾಧಿ ಹಾಗೂ ಸಂಪತ್ತಿನ ಕುರಿತು ಊಹಾಪೋಹಗಳಿದ್ದು ಪುರಾತನ ದೇಗುಲಗಳನ್ನು ರಕ್ಷಿಸುವುದರ ಜೊತೆಗೆ ವಿಷಯದ ಸೂಕ್ಷ್ಮತೆ ಎಲ್ಲರಿಗೂ ತಿಳಿಯುವಂತೆ ಮಾಡಲು ಪ್ರಯತ್ನ ಮಾಡಬೇಕು. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತಂಡವನ್ನು ಮಾಡಿ ಅವರ ಸಮಕ್ಷಮದಲ್ಲಿ ಉತ್ಕನನ ಕಾರ್ಯ ನಡೆಯಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಮುಖಂಡರಾದ ಬಿ ಎ ಪಾಟೀಲ್. ಎಸ್ ಜಿ ಅಂಗಡಿ. ಶರಣಗೌಡ ಒನಕ್ಯಾಳ ಸೇರಿದಂತೆ ಉಪಸ್ಥಿತರಿದ್ದರು.

## ಕಾರವಾರ: ವಿದ್ಯುತ್ ವ್ಯತ್ಯಯ

**ಕಾರವಾರ:** ಕಾರವಾರ ಉಪ ವಿಭಾಗದಲ್ಲಿ ತುರ್ತು ಲೈನ್ ನಿರ್ವಹಣಾ ಕೆಲಸ ಇರುವುದರಿಂದ ಸೆ.17 ರಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ತೇಲಂಗರೋಡ, ಕೆ.ಎಚ್.ಬಿ ಫೀಡರಿಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಗ್ರಾಹಕರು ಸಹಕರಿಸುವಂತೆ ವಿದ್ಯುತ್ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವನಿಧಿ ಫಲಾನುಭವಿಗಳಿಗೆ ವಿಶೇಷ ಸೂಚನೆ

**ಬೆಳಗಾವಿ:** ಯುವನಿಧಿ ಯೋಜನೆಯಡಿ ನೋಂದಾಯಿಸಿಕೊಂಡು ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಯುವಕ/ಯುವತಿಯರಿಗೆ ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತೆ ತರಬೇತಿಯನ್ನು ಜಿಲ್ಲೆಯ ಜಿ.ಟಿ.ಟಿ.ಸಿ, ಸಿಡಾಕ್ ಹಾಗೂ ಸರ್ಕಾರಿ ಐ.ಟಿ.ಐ ಗಳ ಮುಖಾಂತರ ನೀಡಲಾಗುತ್ತಿದೆ.

ಫಲಾನುಭವಿಗಳು ತರಬೇತಿಯನ್ನು ಪಡೆಯಲು https://www.kaushalkar.com/ ಪೋರ್ಟಲ್ ನಲ್ಲಿ ಕಡ್ಡಾಯವಾಗಿ ತಮ್ಮ ಹೆಸರನ್ನು ನೋಂದಾಯಿಸಬೇಕು. ಒಂದು ವೇಳೆ ತರಬೇತಿಯನ್ನು ಪಡೆಯಲು ನೋದಾಯಿಸದೆ ಇದ್ದಲ್ಲಿ ಅಂತಹ ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆಯನ್ನು ಸ್ಥಗಿತಗೊಳಿಸಲಾಗುವುದು.

ಪ್ರಸ್ತುತ ಯುವನಿಧಿ ಫಲಾನುಭವಿಗಳು ಯುವನಿಧಿ ಪ್ಲಸ್ ಕಾರ್ಯಕ್ರಮದಡಿ ತರಬೇತಿಯನ್ನು ಪಡೆದರೂ ಸರ್ಕಾರವು ನಿಗದಿಪಡಿಸಿರುವ ಅವಧಿಯವರೆಗೆ ನಿರುದ್ಯೋಗ ಭತ್ಯೆಯನ್ನು ಪಡೆಯಲು ಯಾವುದೇ ತೊಂದರೆಗಳು ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಭಿವೃದ್ಧಿ ಅಧಿಕಾರಿಗಳ ಕಛೇರಿಗೆ ಅಥವಾ ಜಿಲ್ಲಾ ಕೌಶಲ್ಯಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## 'ಕಟ್ಟೀಮನಿ ಕಥಿ ಹೇಳೂಣು' ಸ್ಪರ್ಧೆ

**ಬೆಳಗಾವಿ:** ಕರ್ನಾಟಕ ಸರ್ಕಾರದ ಬಸವರಾಜ ಕಟ್ಟೀಮನಿ ಪ್ರತಿಷ್ಠಾನವು ಬೆಳಗಾವಿ ಜಿಲ್ಲೆಯ ಪದವಿ ಮಹಾವಿದ್ಯಾಲಯಗಳ ಮತ್ತು ಶಿಕ್ಷಣ ಮಹಾವಿದ್ಯಾಲಯ(ಬಿ.ಇಡಿ)ಗಳ ವಿದ್ಯಾರ್ಥಿಗಳಿಗಾಗಿ "ಕಟ್ಟೀಮನಿ ಕಥಿ ಹೇಳೂಣು" ಎನ್ನುವ ಬಸವರಾಜ ಕಟ್ಟೀಮನಿ ಅವರು ಬರೆದಿರುವ ಕಥೆಗಳನ್ನು ಹೇಳುವ, ವಿನೂತನ ಸ್ಪರ್ಧೆಯನ್ನು ಅಕ್ಟೋಬರ್ ತಿಂಗಳ ಮೊದಲೆರಡು ವಾರಗಳಲ್ಲಿ ಆಯೋಜಿಸಲಾಗುವುದು.

ಈ ವಾರದಲ್ಲಿ ಮೊದಲ ಹಂತದಲ್ಲಿ ಆಯಾ ಕಾಲೇಜಿನವರು ತಮ್ಮ ಕಾಲೇಜುಗಳ ಮಟ್ಟದಲ್ಲಿ "ಕಟ್ಟೀಮನಿ ಕಥಿ ಹೇಳೂಣು" ಸ್ಪರ್ಧೆಯನ್ನು ಏರ್ಪಡಿಸುವುದು. ಕಟ್ಟೀಮನಿಯವರು ಬರೆದಿರುವ ಮೌಲಿಕ ಕಥೆಗಳನ್ನು ವಿದ್ಯಾರ್ಥಿಗಳಿಂದ ಅವರದೇ ಶೈಲಿಯಲ್ಲಿ ಹೇಳಿಸುವುದು. ಅಲ್ಲಿ ಆಯ್ಕೆಯಾದ ಮೂರು ಜನ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತಿಯ ಮತ್ತು ತೃತಿಯ ಸ್ಥಾನಗಳನ್ನು ಘೋಷಿಸುವುದು.

ಕಾಲೇಜು ಹಂತದ ಈ ಸ್ಪರ್ಧೆಯಲ್ಲಿ ಆಯ್ಕೆಯಾದ ಮೂವರು ವಿದ್ಯಾರ್ಥಿಗಳಿಗೆ "ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ವತಿಯಿಂದ ಪ್ರಮಾಣ ಪತ್ರ ಮತ್ತು ಪುಸ್ತಕ ಬಹುಮಾನ ನೀಡಲಾಗುತ್ತದೆ. ಅದಕ್ಕಾಗಿ ಆಯಾ ಕಾಲೇಜಿನವರು ಸ್ಪರ್ಧೆ ಏರ್ಪಡಿಸಿದ ಸೂಚನಾ ಪತ್ರ, ಸ್ಪರ್ಧೆ ನಡೆಸಿದ ಎರಡು ಮೂರು ಛಾಯಾಚಿತ್ರ (ಫೋಟೋ) ದೊಂದಿಗೆ, ಪ್ರಾಂಶುಪಾಲರಿಂದ ದೃಢೀಕರಿಸಿದ ಪತ್ರವನ್ನು ಕಳುಹಿಸಬೇಕಾಗುತ್ತದೆ.

ನಂತರ ಎರಡನೇ ಹಂತದಲ್ಲಿ, ಕಾಲೇಜುಗಳಲ್ಲಿ ಆಯ್ಕೆಯಾದ ಒಂದು ಕಾಲೇಜಿನ ಮೂವರು ವಿದ್ಯಾರ್ಥಿಗಳು ಮಾತ್ರ ಬೆಳಗಾವಿಯಲ್ಲಿ ಪ್ರತಿಷ್ಠಾನವು ಏರ್ಪಡಿಸುವ ಜಿಲ್ಲಾ ಮಟ್ಟದ "ಕಟ್ಟೀಮನಿ ಕಥಿ ಹೇಳೂಣು" ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಈ ಸ್ಪರ್ಧೆಯಲ್ಲಿ ವಿಜೇತರಾದ ಮೂರುಜನ ವಿದ್ಯಾರ್ಥಿಗಳಿಗೆ ಪ್ರಥಮ ರೂ. 5,000, ದ್ವಿತಿಯ ರೂ. 3,000 ಮತ್ತು ತೃತಿಯ ರೂ. 2,000 ನಗದು ಬಹುಮಾನ, ಪ್ರಶಸ್ತಿ ಪತ್ರ ಮತ್ತು ನೆನಪಿನ ಕಾಣಿಕೆ ನೀಡಲಾಗುವುದು ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಲಾಗುವುದು.

ಕಾಲೇಜು ಹಂತದಲ್ಲಿ ಸ್ಪರ್ಧೆಏರ್ಪಡಿಸುವ ಎಲ್ಲ ಮಹಾವಿದ್ಯಾಲಯಗಳು ದಿನಾಂಕ :30–09–2025 ರ ಒಳಗಾಗಿ ಸಂಚಾಲನಾ ಸಮಿತಿಯವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಹಾಗೂ ಪ್ರತಿಷ್ಠಾನದ ವಿಳಾಸಕ್ಕೆ ಪತ್ರ ಬರೆದು ನೋಂದಣಿ ಮಾಡಿಸಬೇಕು ಮತ್ತು ಸದರಿ ಸ್ಪರ್ಧೆಯನ್ನು ಅಕ್ಟೋಬರ್ 15 ರೊಳಗಾಗಿ ಮುಗಿಸತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ಕಟ್ಟೀಮನಿ ಕಥಿ ಹೇಳೂಣು ಸಂಚಾಲನಾ ಸಮಿತಿ ಅವರ ದೂರವಾಣಿ ಸಂಖ್ಯೆ : 92422 90846, 98400 55147, 99002 21367 ಗೆ ಸಂಪರ್ಕಿಸಬಹುದಾಗಿದೆ ಎಂದು ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರ, ಮಕ್ಕಳ ಅಭಿವೃದ್ಧಿಯೆ ನಮ್ಮ ಧ್ಯೇಯ



**ಬೆಳಗಾವಿ:** ಮಹಿಳೆಯರ, ಮಕ್ಕಳ ಮತ್ತು ವಿಕಲಚೇತನರ ಎಲ್ಲ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ ನಗದರದ ಗಾಂಧಿ ಭವನದಲ್ಲಿ ಪೋಷಣೆ ಮಾಸಾಚರಣೆ, ಅನ್ನಪ್ರಾಶನ, ಅಕ್ಷರ ಆಭ್ಯಾಸ, ಗರ್ಭಿಣಿಯರಿಗೆ ಸೀಮಂತ, ಮಕ್ಕಳಿಗೆ ಪೌಷ್ಟಿಕ ಕಿಟ್ ವಿತರಣೆ ಹಾಗೂ ವಿಕಲಚೇತನ ಫಲಾನುಭವಿಗಳಿಗೆ ಯಂತ್ರಚಾಲಿತ ವಾಹನ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯರು ಎಲ್ಲ ತೆರನಾಗಿ ಅಭಿವೃದ್ಧಿ ಹೊಂದಿ ಸಮಾಜದಲ್ಲಿ ಬೆಳೆದು ನಿಲ್ಲುವದರ ಜೊತೆಗೆ ಸ್ವಾವಲಂಭಿಯನ್ನಾಗಿಸಲು ಸರಕಾರ ಸದಾ ಬದ್ಧವಾಗಿದೆ ಎಂದರು. ಪೋಷಣ್ ಮಾಸಾಚರಣೆ ಹಾಗೂ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಆಯೋಜಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.

ಅಂಗನವಾಡಿ ಕಾರ್ಯಕರ್ತೆಯರನ್ನು ಬಿ.ಎಲ್.ಓ ಕೆಲಸ ನಿರ್ವಹಿಸಬೇಕೆಂಬುದಿತ್ತು, ಅವರು ನಮಗೆ ಈ ಕಾರ್ಯವನ್ನು ನಿಲ್ಲಿಸಬೇಕು ಎಂಬ ಬೇಡಿಕೆಯನ್ನು ಈಡೇರಿಸಲಾಗಿದೆ. ಸರ್ಕಾರದ ಯೋಜನೆಗಳು ಜನರನ್ನು ತಲುಪುವಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಪಾತ್ರ ಮುಖ್ಯವಾಗಿದೆ. ಅಂಗನವಾಡಿ ಕಾರ್ಯಕರ್ತರಿಗೆ ಒಂದು ಬಾರಿ ಬಡ್ತಿ ನೀಡಲು ಸರ್ಕಾರಕ್ಕೆ ಪ್ರಸ್ತಾಪನೆ ಕಳುಹಿಸಲಾಗಿದೆ ಎಂದು ತಿಳಿಸಿದರು.

ಆರೋಗ್ಯವಂತ ಸಮಾಜ ನಿರ್ಮಿಸಿ ಸದೃಢ ದೇಶ ನಿರ್ಮಾಣ ಮಾಡುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ. ಅಪೌಷ್ಟಿಕತೆಯ ಮಕ್ಕಳಿಗೆ ಪೌಷ್ಟಿಕಾಹಾರ ನೀಡುವುದರ ಮೂಲಕ ಅವರನ್ನು ಸದೃಢರನ್ನಾಗಿಸಲು ಕಾರ್ಯಕ್ರಮ ವಹಿಸಲಾಗುತ್ತಿದೆ. ನಮ್ಮ ಸರಕಾರದ ವತಿಯಿಂದ ಮಹಿಳೆಯರ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಸಾಕಷ್ಟು ಅನುದಾನ ನೀಡಲಾಗಿತ್ತಿದೆ ಎಂದರು.

ಮಹಿಳೆಯರ ಮೇಲೆ ನಡೆಯುವಂತಹ ದೌರ್ಜನ್ಯಗಳನ್ನು ತಡೆದು, ಬಾಲ್ಯ ವಿವಾಹದಂತಹ ಅನಿಷ್ಠ ಪಿಡುಗನ್ನು ತಡೆಯುವದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯತಿಗೆ 25 ಸಾವಿರ ರೂಗಳ ನಗದನ್ನು ಘೋಷಣೆ ಮಾಡಲಾಗಿದೆ ಎಂದು ಸಚಿವರಾದ ಲಕ್ಷ್ಮೀ ಹೆಬ್ಬಾಳಕರ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ಪ್ರೊಬೆಷನರಿ ಐ.ಎ.ಎಸ್ ಅಧಿಕಾರಿ ಅಭಿನವ್ ಜೈನ್, ಮಹಿಳಾ ಮತ್ತು ಮಕ್ಕಳ ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಚೇತನಕುಮಾರ್ ಎಂ.ಎನ್, ಇಲಾಖೆಯ ನಿರೂಪಣಾಕಾಧಿಕಾರಿ ಅನಿಲಕುಮಾರ ಹೆಗಡೆ, ಡಿಸಿಪಿಓ ಪರ್ವಿನ್ ಕೌಸರ್, ಮಹಿಳಾ ಕಲ್ಯಾಣ ಅಧಿಕಾರಿ ಕಾಂಚನಾ ಅಮರೆ, ನಾಮದೇವ ಬೀಲ್ಕರ್, ಎಲ್ಲ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಬಾಲವಿಕಾಸ ಸಲಹಾ ಸದಸ್ಯರು, ಅಂಗವಾಡಿಯ ಕಾರ್ಯಕರ್ತೆಯರು, ಸಹಾಯಕಿಯರು, ವಿಕಲಚೇತನ ಫಲಾನುಭವಿಗಳು, ಗರ್ಭಿಣಿಯರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಅನ್ನಪ್ರಾಶನ, ಅಕ್ಷರ ಅಭ್ಯಾಸ, ಗರ್ಭಿಣಿಯರಿಗೆ ಸೀಮಂತ, ಮಕ್ಕಳಿಗೆ ಪೌಷ್ಟಿಕ ಆಹಾರ ಕಿಟ್ ವಿತರಣೆ ಮತ್ತು ವಿಕಲಚೇತನ ಫಲಾನುಭವಿಗಳಿಗೆ ಯಂತ್ರಚಾಲಿತ ವಾಹನಗಳನ್ನು ವಿತರಣೆ ಮಾಡಲಾಯಿತು.

## ಹಾಡಿರೆ ರಾಗ ತೂಗಿರೆ ದೀಪಗಳ ಸಾಂಸ್ಕೃತಿಕ ಕಾರ್ಯಕ್ರಮ

**ಬೆಳಗಾವಿ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಳಗಾವಿ ಹಾಗೂ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮಜಲಟ್ಟಿ ತಾ: ಚಿಕ್ಕೋಡಿ ಇವರ ಸಂಯುಕ್ತ ಆಶ್ರಯದಲ್ಲಿ ವಿಶೇಷ ಘಟಕ ಯೋಜನೆಯಡಿ ಗುರುವಾರ (ಸೆ.18) ಮಧ್ಯಾಹ್ನ 3 ಗಂಟೆಗೆ "ಹಾಡಿರೆ ರಾಗ ತೂಗಿರೆ ದೀಪಗಳ" ಸಾಂಸ್ಕೃತಿಕ ಕಾರ್ಯಕ್ರಮ ಸಾಂಸ್ಕೃತಿಕ ಭವನ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮಜಲಟ್ಟಿಯಲ್ಲಿ ಜರುಗಲಿದೆ.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ರಾಯಬಾಗ ವಿಧಾನ ಸಭೆ ಶಾಸಕ ದುರ್ಯೋಧನ ಮ. ಐಹೊಳೆ ಅವರು ಅಧ್ಯಕ್ಷತೆ ವಹಿಸಲಿದ್ದು, ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ. ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.



## 'ಮಹಾ' ಮಾಜಿ ಮುಖ್ಯಮಂತ್ರಿಗೆ ವೀರಭದ್ರೇಶ್ವರ ಪ್ರಶಸ್ತಿ

**ಬೆಳಗಾವಿ:** ನವದೆಹಲಿಯ ಭಾರತ ಮಂಡಪಮನಲ್ಲಿ ನಡೆದ ಶ್ರೀ ವೀರಭದ್ರೇಶ್ವರ ಜಯಂತ್ಯೋತ್ಸವದಲ್ಲಿ ಇಂದು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿಗಳಾದ ಅಶೋಕ ಶಂಕರರಾವ ಚವಾಣ ರವರಿಗೆ ಈ ವರ್ಷದ/2025 ಸಾಲಿನ ಶ್ರೀ ವೀರಭದ್ರೇಶ್ವರ ಪ್ರಶಸ್ತಿಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಕೇದಾರ ಜಗದ್ಗುರುಗಳಾದ ಶ್ರೀ ಶ್ರೀ 1008 ಭೀಮಾಶಂಕರ ಶಿವಾಚಾರ್ಯ ಮಹಾಸ್ವಾಮೀಜಿಗಳು, ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಬೆಳಗಾವಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾದ ಮಹಾಂತೇಶ ವಕ್ಕುಂದ, ವೀರಶೈವ ಲಿಂಗಾಯತ ವೇದಿಕೆಯ ರಾಷ್ಟ್ರೀಯ ಅಧ್ಯಕ್ಷರಾದ ಪ್ರದೀಪ ಕಂಕಣವಾಡಿ, ಮಾಜಿ ಸಂಸದ ಭಗವಂತ ಖೂಬಾ, ಬಿಜೆಪಿ ಮುಖಂಡ ರಮೇಶ ಖೇತಗೌಡರ ಸೇರಿದಂತೆ ನೂರಾರು ಗಣ್ಯರು, ಸಮಾಜ ಪ್ರಮುಖರು ಉಪಸ್ಥಿತರಿದ್ದರು.

## ಇಂದು ವಿಶ್ವಕರ್ಮ ಜಯಂತಿ ಉತ್ಸವ

**ಬೆಳಗಾವಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ (ಸ.17) ಬೆಳಿಗ್ಗೆ. 11 ಗಂಟೆಗೆ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ವಿಶ್ವಕರ್ಮ ಜಯಂತಿ ಉತ್ಸವ ಕಾರ್ಯಕ್ರಮ ಜರುಗಲಿದೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದು, ಕಿತ್ತೂರು ವಿಶ್ವಕರ್ಮ ಏಕದಂಡಗಿ ಶ್ರೀ ಮಠ ಶ್ರೀ ಸರಸ್ವತಿ ಪೀಠಾಧೀಶ ಆರ್. ಪ್ರಮೋದ ಮಹಾಸ್ವಾಮಿ ಅವರು ವಿಶೇಷ ಉಪನ್ಯಾಸ ಮಾಡಲಿದ್ದಾರೆ. ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

## ಇಂದು ಪಟ್ಟರಾಜರ 15ನೇ ಪುಣ್ಯಾರಾಧನೆ

**ಗದಗ:** ಗಾನ ಗಂಧರ್ವ ಕಲಾ ಟ್ರಸ್ಟ್ (ರಿ). ಗದಗ– ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು ಸಹಕಾರದೊಂದಿಗೆ ಸೆ .17 ರಂದು ಸಂಜೆ 6 ಗಂಟೆಗೆ ವಿವೇಕಾನಂದ ಬಡಾವಣೆಯ ನಾದಶ್ರೀ ಸಂಗೀತ ಪಾಠಶಾಲೆ ಆವರಣದಲ್ಲಿ ನಡೆಯಲಿದೆ.

ಪೂಜ್ಯ. ಪುಟ್ಟರಾಜ ಗವಾಯಿಗಳವರ 15ನೇ ಪುಣ್ಯಾರಾಧನೆ ಹಾಗೂ ನಾದಶ್ರೀ ಸಂಗೀತ ಪಾಠಶಾಲೆಯ 2ನೇ ವಾರ್ಷಿಕೋತ್ಸವದ ದಿವ್ಯ ಸಾನಿಧ್ಯವನ್ನು .ಮ. ನಿ. ಪ್ರ. ಅಭಿನವ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹಠಯೋಗಿ ಕೊಟ್ಟೂರೇಶ್ವರ ಮಠ, ಸುಕ್ಷೇತ್ರ ಹರ್ಲಾಪುರ ನಡೆಯಲಿದೆ.ಮುಂಡರಗಿ ಬ್ರಹನ್ಮಠದ ಡಾ. ವೀರೇಶ್ವರ ಶರಣರ ಸಮ್ಮುಖದಲ್ಲಿ ಗಾನಗಂಧರ್ವ ಕಲಾ ಟ್ರಸ್ಟ್ ಬಿ. ಎಂ. ಪಂಚಾಕ್ಷರಿ ಅಧ್ಯಕ್ಷ ಇವರ ಅಧ್ಯಕ್ಷತೆ ವಹಿಸುವರು.ರಾಜೀವ ಗಾಂಧಿ ನಗರ ಪೊಲೀಸ್ ಠಾಣೆಯ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಪಿಎಸ್ಐ. ಮಾರುತಿ. ಎಸ್. ಜೋಗದಂಡಕರ ಕಾರ್ಯಕ್ರಮ ಉದ್ಘಾಟನೆ ಮಾಡಲ್ಲಿದ್ದಾರೆ. ಕಾರ್ಯಕ್ರಮದ ಅತಿಥಿಗಗಳಾಗಿ ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ, ಡಾ. ಬಸವರಾಜ ಬಳ್ಳಾರಿ.ಗಣ್ಯ ವರ್ತಕ ಶರಣಪ್ಪ, ಸಂಗಪ್ಪ ಗುಡಿಮನಿ, ನವರತ್ನ ಜ್ಯೂವೆಲರ್ಸ್ ಮಾಲೀಕ ಸಿದ್ದಲಿಂಗೇಶ ಮುರಶಿಳ್ಳಿನ ಆಗಮಿಸುವರು.ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಉಮೇಶ ಸಿ. ಕಪ್ಪತ್ತನವರ, ಶ ದ್ರುವಕುಮಾರ ಬಸಪ್ಪ ಮೆಣಸಿನಕಾಯಿ, ಅಂಬಾದಾಸ ಜಮಾದಾರರಿಗೆ ಸನ್ಮಾನ ನಡೆಯಲಿದೆ. ಹೊಸಪೇಟೆ ಗುಂಡಿಭಾರತ ಗಾಯನ,ಪುಟ್ಟರಾಜೇಶ ಗುತ್ತರಗಿ. ಪುಣೆಯವರಿಂದ ತಬಲಾ ಹಾಗೂ ಹಾರ್ಮೋನಿಯಂ ಸೇವೆ, ಗದಗ ಹರ್ಷತ್ ಕುಮಾರ್ ಸ್ವರನಮನ ಕಾರ್ಯಕ್ರಮ ನಡೆಸಿಕೊಡುವರು. ಗದಗ ಹರ್ಷತ್ ಕುಮಾರ್ ಎಂ. ಕಲಕಂಬಿ ಭರತನಾಟ್ಯ, ನಾದಶ್ರೀ ಸಂಗೀತ ಪಾಠಶಾಲೆ ಮಕ್ಕಳಿಂದ ಹಾಡು – ನೃತ್ಯಗಳ ಪ್ರದರ್ಶನ ನಡೆಯಲಿದೆ ಎಂದು ಗಾನಗಂಧರ್ವ ಕಲಾಟ್ರಸ್ಟ್ ಕಾರ್ಯದರ್ಶಿ ಸಿದ್ದಲಿಂಗಯ್ಯ ಶಾಸ್ತ್ರಿ ಎಸ್. ಗಡ್ಡದಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಜ್ವಲ್ ರಾಷ್ಟ್ರೀಯ ಸ್ಪರ್ಧೆಗೆ ಆಯ್ಕೆ



**ಮಹಾಲಿಂಗಪುರ:** ಸಮೀಪದ ಕೆಸರಗೊಪ್ಪ ಗ್ರಾಮದ ದೈಹಿಕ ಶಿಕ್ಷಕ, ಕ್ರೀಡಾ ತರಬೇತಿದಾರ ಧರೆಪ್ಪ ಬ್ಯಾಕೋಡ ಅವರ ಪುತ್ರ ಅಕ್ಷರ ಪಪೂ ಕಾಲೇಜ್ ವಿದ್ಯಾರ್ಥಿ, ಪ್ರಜ್ವಲ ಬ್ಯಾಕೋಡ ದಕ್ಷಿಣ ವಲಯ ಮೆಡ್ಲಿ ರಿಲೇ ರಾಷ್ಟ್ರೀಯ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಆಂಧ್ರಪ್ರದೇಶದ ಸೆ.23ರಿಂದ 25ರವರೆಗೆ ಗುಂಟೂರಿನ ಆಚಾರ್ಯ ನಾಗಾರ್ಜುನ ವಿದ್ಯಾಲಯದಲ್ಲಿ ನಡೆಯಲಿರುವ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ. ಪ್ರಜ್ವಲ್‌ಗೆ ತಂದೆಯೇ ತರಬೇತಿ ಮಾರ್ಗದರ್ಶನ ಮಾಡಿದ್ದರು.

### ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ, ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಿ.ಎನ್.ಶ್ರೀಧರ್ ಸೂಚನೆ

# ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಪರಿಹಾರ ನೀಡಿ

**ಗದಗ:** ಜಿಲ್ಲೆಯಲ್ಲಿ ಪ್ರಭುವಿನೆಡೆಗೆ ಪ್ರಭುತ್ವ ಎಂಬ ವಿನೂತನ ಕಾರ್ಯಕ್ರಮವನ್ನು ಅಗಸ್ಟ 15 ರಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ಚಾಲನೆ ನೀಡಿದ್ದಾರೆ. ಪ್ರಭುವಿನೆಡೆಗೆ ಪ್ರಭುತ್ವದಲ್ಲಿ ಬರುವ ಸಾರ್ವಜನಿಕರ ಸಮಸ್ಯೆಗಳಿಗೆ ಅಧಿಕಾರಿಗಳು ಶೀಘ್ರ ಸ್ಪಂದಿಸಿ ಪರಿಹಾರ ನೀಡುವಂತೆ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸೋಮವಾರ ಜರುಗಿದ ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ವಿಶಿಷ್ಟ ವಿನೂತನ ಕಾರ್ಯಕ್ರಮ ಪ್ರಭುವಿನೆಡೆಗೆ ಕಾರ್ಯಕ್ರಮವಾಗಿದೆ. ಜಿಲ್ಲಾ ಕ್ರೀಡಾಂಗಣ ಸೇರಿದಂತೆ ನಗರದಲ್ಲಿ ಮೂರು ಕಡೆ ಪ್ರ.ಪ್ರ. ಯಂತ್ರ ಅಳವಡಿಸಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಈ ಯಂತ್ರದ ಮೂಲಕ ಬಟನ್ ಒತ್ತಿ ಹೇಳಿಕೊಳ್ಳುವ ಮೂಲಕ ಶೀಘ್ರ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಲಿದೆ ಎಂದರು.

ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಮೇಲ್ವಿಚಾರಣೆಗಾಗಿ ಈಗಾಗಲೇ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎ.ಎ.ಕಂಬಾಳಿಮಠ ಅವರನ್ನು ಕಾರ್ಯಕ್ರಮದ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಿಲಾಗಿದ್ದು ಅವರು



ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮದ ಮೇಲುಸ್ತುವಾರಿ ಮಾಡಲಿದ್ದಾರೆ. ಎಲ್ಲ ಇಲಾಖೆ ಅಧಿಕಾರಿಗಳು ಪ್ರ.ಪ್ರ ದಲ್ಲಿ ದಾಖಲಾದ ದೂರುಗಳಿಗೆ ಪರಿಹಾರ ನೀಡಿ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ ದಾಖಲೆಗಳೊಂದಿಗೆ ವರದಿ ಸಲ್ಲಿಸಬೇಕು ಎಂದು ತಿಳಿಸಿದರು.

ಪ್ರಭುವಿನೆಡೆಗೆ ಪ್ರಭುತ್ವ ಕಾರ್ಯಕ್ರಮ ಆರಂಭಿಕವಾಗಿ 10 ಅಂಶಗಳನ್ನು ಒಳಗೊಂಡಂತೆ ಸಾರ್ವಜನಿಕರು ದೂರುಗಳನ್ನು ಸಲ್ಲಿಸಲು ಅವಕಾಶ ಒದಗಿಸಲಾಗಿದೆ. ಮಹಿಳಾ ಮತ್ತು ಮಕ್ಕಳ ಸುರಕ್ಷತೆ, ಹಿರಿಯ ನಾಗರಿಕರ ಸಹಾಯ, ತುರ್ತು ವೈದ್ಯಕೀಯ ಸೇವೆ, ಅಕ್ರಮ ಮದ್ಯ ಮಾರಾಟ, ರಸ್ತೆ ಸುರಕ್ಷತೆ ಕ್ರಮ, ಕಾನೂನು ಬಾಹಿರ ಹಾಗೂ ಸಾಮಾಜಿಕ ವಿದ್ರೋಹ ಚಟುವಟಿಕೆ ವಿರುದ್ಧ ಕ್ರಮ, ಜಮೀನು ಹಕ್ಕು ಪತ್ರ, ಪಿಂಚಣಿ ವಿಷಯಗಳಿಗೆ ಸಂಬಂಧಿಸಿದಂತೆ ಮತ್ತು ಪಂಚಾಯತಿಗಳ ಕೆಲ ಸಮಸ್ಯೆಗಳ ಬಗ್ಗೆ ದೂರು ಸಲ್ಲಿಸಬಹುದಾಗಿದೆ. ಸಂಬಂಧಿತ ಇಲಾಖಾಧಿಕಾರಿಗಳು ದೂರು ಅಥವಾ ಸಮಸ್ಯೆ ದಾಖಲಾದ ತಕ್ಷಣ ಅದರ ಪರಿಹಾರಕ್ಕೆ ಕಾರ್ಯ ಪವೃತ್ತರಾಗಬೇಕು. ಯಾವುದೇ ಕಾರಣಕ್ಕೂ ವಿಳಂಬಕ್ಕೆ ಆಸ್ಪದ ಇಲ್ಲ. ಬೇಜವಾಬ್ದಾರಿ ತೋರುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಅನಿವಾರ್ಯ ಎಂದು ಜಿಲ್ಲಾಧಿಕಾರಿ ಶ್ರೀಧರ್ ಅವರು ಎಚ್ಚರಿಸಿದರು.

ಸಾರ್ವಜನಿಕರಿಂದ ಪ್ರ.ಪ್ರ. ಯಂತ್ರಗಳ ಮೂಲಕ ಸ್ವೀಕೃತವಾದ ಸಮಸ್ಯೆ/ ದೂರುಗಳನ್ನು ಪರಿಶಿಲಿಸಿ 7 ದಿನಗಳೊಳಗಾಗಿ ಪರಿಹಾರ ಸೂಚಿಸಬೇಕು. ದೂರುದಾರರಿಗೆ ಸ್ಪಷ್ಟ ಉತ್ತರ ನೀಡಬೇಕು. ಹಾರಿಕೆ ಉತ್ತರಕ್ಕೆ ಅವಕಾಶವಿಲ್ಲ. ದೂರಿಗೆ ಪರಿಹಾರ ಇಲ್ಲದಿದ್ದಲ್ಲಿ ಸಕಾರಣದೊಂದಿಗೆ ಉತ್ತರ ನೀಡುವುದು. ಮುಂದಿನ ದಿನಮಾನಗಳಲ್ಲಿ ಮಾಸಿಕವಾಗಿ ಪ್ರಗತಿ ನಡೆಸಲಾಗುವುದು. ಇಲಾಖಾ ಮುಖ್ಯಸ್ಥರೇ ಸಭೆಗೆ ಹಾಜರಾಗಬೇಕು. ಜೊತೆಗೆ ಜಿಲ್ಲಾ ನೋಡಲ್ ಅಧಿಕಾರಿಗೆ ಪ್ರಗತಿ ವರದಿಯನ್ನು ಸಭೆಗೂ ಮುಂಚಿತವಾಗಿ ಸಲ್ಲಿಸಬೇಕು.

ಈ ಎಲ್ಲ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಪ್ರ.ಪ್ರ. ಪರಿಣಾಮಕಾರಿ ಅನುಷ್ಠಾನಕ್ಕೆ ಸೂಚಿಸಿದರು.ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅವರ ಮಹಾತ್ವಾಕಾಂಕ್ಷಿ ಕಾರ್ಯಕ್ರಮ ಇದಾಗಿದ್ದು ಆಡಳಿತ ವ್ಯವಸ್ಥೆ ಚುರುಕುಗೊಳಿಸಲು ಹಾಗೂ ಸಾರ್ವಜನಿಕರಿಗೆ ತ್ವರಿತವಾಗಿ ಸಮಸ್ಯೆಗೆ ಪರಿಹಾರ ಒದಗಿಸಲು ಪ್ರ.ಪ್ರ. ಜಾರಿಗೊಳಿಸಲಾಗಿದೆ. ಇದರ ಯಶಸ್ಸಿಗೆ ಅಧಿಕಾರಿ ವರ್ಗ ಶ್ರಮ ವಹಿಸಿ ಕಾರ್ಯನಿರ್ವಹಿಸಬೇಕು, ನಿರ್ಲಕ್ಷ್ಯ, ವಿಳಂಬ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ಅನಿವಾರ್ಯ ಎಂಬ ಸೂಚನೆಯನ್ನು ಜಿಲ್ಲಾಧಿಕಾರಿಗಳ ಸಭೆಯಲ್ಲಿ ಸ್ಪಷ್ಟಪಡಿಸಿದರು. ಜಿಲ್ಲಾ ನೋಡಲ್ ಅಧಿಕಾರಿ ಎ.ಎ.ಕಂಬಾಳಿಮಠ ಮಾತನಾಡಿ ಪ್ರ.ಪ್ರ. ಕಾರ್ಯಕ್ರಮ ಜಾರಿ ಆರಂಭದಿಂದ ಈವರೆಗೆ ಒಟ್ಟು 13 ಸಮಸ್ಯೆ/ ದೂರು ದಾಖಲಾಗಿದ್ದು ಸಂಬಂಧಿತ ಇಲಾಖೆಗಳಿಗೆ ಪರಿಹಾರಕ್ಕೆ ಸೂಚಿಸಲಾಗಿದೆ. ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ, ನಗರಸಭೆ, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಾರ್ವಜನಿಕರು ಸಮಸ್ಯೆಗಳನ್ನು ತಿಳಿಸಿದ್ದು ಶೀಘ್ರ ಪರಿಹಾರ ದೊರಕಿಸಿ ವರದಿ ನೀಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೋಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಆಹಾರ ಇಲಾಖೆ ಉಪನಿರ್ದೇಶಕ ರಮೇಶ, ಡಿಡಿಎಲ್ ಆರ್ ರುದ್ರಣ್ಣಗೌಡ,ಜಿ.ಜೆ, ಡಿಡಿಪಿಐ ಆರ್.ಎಸ್.ಬುರುಡಿ, ಕ್ರೀಡಾ ಇಲಾಖೆಯ ಅಧಿಕಾರಿ ಶರಣು ಗೋಗೇರಿ , ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ವಸ್ತ್ರದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಹಕಾರ ಮನೋಭಾವನೆಯಿಂದ ಸಂಘಗಳ ಬೆಳವಣಿಗೆ

**ತಾಳಿಕೋಟೆ:** ಸಹಕಾರ ಸಂಘಗಳು ಬೆಳವಣಿಗೆ ಯಾಗಬೇಕಾದರೆ ಗ್ರಾಹಕರ ಪ್ರೀತಿ ವಿಶ್ವಾಸಗಳಿಸಬೇಕು ಅದರ ಜೊತೆಗೆ ಆಡಳಿತ ಮಂಡಳಿ ಮತ್ತು ಸಿಬ್ಬಂದಿಗಳು ಒಂದೇ ನಾಣ್ಯದ ಎರಡು ಮುಖಗಳಂತೆ ಜೊತೆಯಾಗಿ ಕಾರ್ಯನಿರ್ವಹಿಸಬೇಕು ಅಂದಾಗ ಮಾತ್ರ ಸಹಕಾರಿ ಕ್ಷೇತ್ರ ಬೆಳವಣಿಗೆಯಾಗಲು ಸಾದ್ಯವೆಂದು ತಾಲೂಕಾ ತಹಶಿಲ್ದಾರರಾದ ಶ್ರೀಮತಿ ಡಾ.ವಿನಯಾ ಹೂಗಾರ ಅವರು ಹೇಳಿದರು.

ರವಿವಾರರಂದು ಪಟ್ಟಣದ ಶ್ರೀ ಅಲ್ಲಂಪ್ರಭು ಪತ್ತಿನ ಸಹಕಾರಿ ಸಂಘ ನಿ.ದ ಸಭಾ ಭವನದಲ್ಲಿ ಶ್ರೀ ಅಲ್ಲಂಪ್ರಭು ಪತ್ತಿನ ಸಹಕಾರಿ ಸಂಘ ನಿ.ದ 15ನೇ ವಾರ್ಷಿಕ ಸರ್ವ ಸಾಧಾರಣಾ ಸಭೆಯನ್ನು ದೀಪ ಬೆಳಗಿಸುವದರೊಂದಿಗೆ ಉದ್ಘಾಟಿಸಿ ಮಾತನಾಡುತ್ತಿದ್ದ ಅವರು ಸಹಕಾರಿ ಕ್ಷೇತ್ರದಿಂದ ಇಡೀ ದೇಶದ ಬೆಳವಣಿಗೆ ನಿಂತಿದ್ದು ಸಹಕಾರಿ ಸಂಘಗಳಲ್ಲಿ ಸಾಲಪಡೆದುಕೊಂಡ ಸಾಲಗಾರರು ಸಮಯಕ್ಕೆ ಸರಿಯಾಗಿ ಸಾಲವನ್ನು ಮರುಪಾವತಿ ಮಾಡಿ ಸಂಘದ ಬೆಳವಣಿಗೆಗೆ ಸಹಕರಿಸಬೇಕೆಂದ ಅವರು ಶ್ರೀ ಅಲ್ಲಂಪ್ರಭು ಪತ್ತಿನ ಸಹಕಾರಿ ಸಂಘ ನಿ,ವು ಅಲ್ಪ ಅವಧಿಯಲ್ಲಿ ಒಳ್ಳೆಯ ಲಾಭಾಂಶದಿಂದ ಮುನ್ನಡೆದಿರುವದು ಇದಕ್ಕೆ ಆಡಳಿತ ಮಂಡಳಿಯವರು ಮತ್ತು ಸಿಬ್ಬಂದಿಯವರು ಗ್ರಾಹಕರೊಂದಿಗೆ



ಹೊಂದಿರುವ ಪ್ರೀತಿ ವಾತ್ಸಲ್ಯದ ಉತ್ತಮ ಬಾಂದವ್ಯವೇ ಕಾರಣವಾಗಿದೆ ಎಂದರು.

ಇನ್ನೋರ್ವ ಅತಿಥಿ ಪ್ರವಾಸೋಧ್ಯಮ ಇಲಾಖೆಯ ಉಪನಿರ್ದೇಶಕರಾದ ಅರವಿಂದ ಹೂಗಾರ ಅವರು ಮಾತನಾಡಿ ಸಹಕಾರಿ ಸಂಘಗಳು ಜನರ ಪ್ರೀತಿ ವಿಶ್ವಾಸದ ಮೇಲೆ ನಿಂತಿರುತ್ತವೆ ಶ್ರೀ ಅಲ್ಲಮಪ್ರಭು ಪತ್ತಿನ ಸಹಕಾರಿ ಸಂಘ ನಿ,ವು ಅಲ್ಪ ಅವಧಿಯಲ್ಲಿ ಉತ್ತಮ ಬೆಳವಣಿಗೆಹೊಂದುವದರೊಂದಿಗೆ ಸಹಕಾರಿ ಸಂಘಗಳ ಸಾಲಿನಲ್ಲಿಯೇ ಉತ್ತಮ ಸಹಕಾರಿ ಎಂದು ಹೆಸರು ಗಳಿಸಿರುವದು ಆಡಳಿತ ಮಂಡಳಿಯವರು ಮತ್ತು ಸಿಬ್ಬಂದಿಗಳು ಗ್ರಾಹಕರೊಂದಿಗೆ ಹೊಂದಿರುವ ಉತ್ತಮ ಬಾಂದವ್ಯವೇ ಕಾರಣವಾಗಿದೆ ಎಂದರು.ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ಅಲ್ಲಂಪ್ರಭು ಪತ್ತಿನ ಸಹಕಾರಿ ಸಂಘ ನಿ,ದ ಅಧ್ಯಕ್ಷರಾದ ಭೋಗಣ್ಣ ಹೂಗಾರ ಅವರು ಮಾತನಾಡಿದರು. ಶ್ರೀನಿವಾಸ ಕುಲಕರ್ಣಿ ಸಂಘದ ವಾರ್ಷಿಕ ವರಧಿ ವಾಚಿಸಿದರು.

ಈ ಸಮಯದಲ್ಲಿ ಸಂಘದ ನಿರ್ದೇಶಕರು ಗಳಾದ ಸಿದ್ದಣ್ಣ ಹೂಗಾರ, ರಾಮಣ್ಣ ಪೂಜಾರಿ, ಮಹಾಂತೇಶ ಹೂಗಾರ, ಪ್ರಶಾಂತ ಹೂಗಾರ, ಈಶ್ವರ ಹೂಗಾರ, ಸುಭಾಸ ಹೂಗಾರ, ರಮೇಶ ಹೂಗಾರ, ಶಾಂತಾ ಪೂಜಾರಿ, ಶಾರದಾ ಹೂಗಾರ, ಸರೋಜನಿ ಚಲವಾದಿ, ಮೊದಲಾದವರು ಉಪಸ್ಥಿತರಿದ್ದರು

## ಮಾಜಿ ದೇವದಾಸಿಯವರ ಮರು ಸಮೀಕ್ಷೆ

**ಬೆಳಗಾವಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬೆಳಗಾವಿ ಹಾಗೂ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಟ್ರಾನ್ಸ್‌ಜೆಂಡರ ಸಮುದಾಯದವರಿಗೆ ಪ್ರಥಮ ಬಾರಿ ರಾಜ್ಯಾದ್ಯಂತ ಸರ್ಕಾರದ ಆದೇಶದನ್ವಯ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಮಟ್ಟದ ಸಮೀಕ್ಷೆಯನ್ನು ಏರ್ಪಡಿಸಲಾಗಿದೆ. ಅದರಂತೆ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ನಡೆಸುವಂತೆ ಸರ್ಕಾರದಿಂದ ಆದೇಶವಾಗಿರುತ್ತದೆ. ಸದರಿ ಎರಡು ಸಮೀಕ್ಷೆಗಳು ಸೆಪ್ಟೆಂಬರ್ 15 ರಿಂದ 45 ದಿನಗಳ ಕಾಲ ನಡೆಸಲು ದಿನಾಂಕ ನಿಗದಿಯಾಗಿರುತ್ತದೆ. ಟ್ರಾನ್ಸ ಜೆಂಡರ್ಸ್ ಸಮೀಕ್ಷೆಯನ್ನು ಜಿಲ್ಲೆಯ ಎಲ್ಲಾ ಜಿಲ್ಲಾ ಆಸ್ಪತ್ರೆ ಹಾಗೂ ಸರ್ಕಾರಿ ತಾಲೂಕಾ ಆಸ್ಪತ್ರೆಗಳಲ್ಲಿ ನಡೆಸಲಾಗುತ್ತಿದ್ದು, ಮಾಜಿ ದೇವದಾಸಿಯರ ಮರು ಸಮೀಕ್ಷೆಯು ತಾಲೂಕಿನ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯದಲ್ಲಿ ನಡೆಸಲಾಗುತ್ತಿದೆ. ಹೆಚ್ಚಿನ ಸಂಖ್ಯೆಯಲ್ಲಿ ಟ್ರಾನ್ಸ ಜೆಂಡರ್ಸ್ ಸಮುದಾಯದವರು ಮೂಲ ಹಂತದ ಸರ್ವೆಯಲ್ಲಿ ಭಾಗವಹಿಸುವಂತೆ ಬೆಳಗಾವಿ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ನಾಳೆ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಭೆ

**ಬೆಳಗಾವಿ:** ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ., ಬೆಳಗಾವಿಯ 2024–25 ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯನ್ನು ಗುರುವಾರ (ಸೆ, 18) ಮಧ್ಯಾಹ್ನ 2 ಗಂಟೆಗೆ ಒಕ್ಕೂಟದ ಅಧ್ಯಕ್ಷರಾದ ಬಾಲಚಂದ್ರ. ಲ. ಜಾರಕಿಹೊಳಿ ಅವರ ಅಧ್ಯಕ್ಷತೆಯಲಿ ಗಾಂಧಿ ಭವನ, ಸನ್ಮಾನ ಹೋಟೆಲ್ ಹಿಂಭಾಗ, ಕಾಲೇಜ್ ರಸ್ತೆ, ಬೆಳಗಾವಿ ಇಲ್ಲಿ ಜರುಗಲಿದೆ ಎಂದು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜರಾಜೇಶ್ವರಿ ಸೊಸಾಯಿಟಿಯ ವಾರ್ಷಿಕ ಸಭೆ



**ಯರಗಟ್ಟಿ:** ಶ್ರೀ ರಾಜರಾಜೇಶ್ವರಿ ಕೋ–ಆಪ್ ಕ್ರೆಡಿಟ್ ಸೊಸಾಯಿಟಿಯ ವಾರ್ಷಿಕ ಸಭೆ ಸ್ಥಳೀಯ ಶ್ರೀ ರಾಜರಾಜೇಶ್ವರ ಆಶ್ರಮದಲ್ಲಿ ನಡೆಯಿತು.

ವರದಿ ಸಾಲಿನಲ್ಲಿ ಸಂಘವು ಒಟ್ಟು 509 ಸದಸ್ಯರನ್ನು ಹೊಂದಿದೆ, ಶೇರ ಬಂಡವಾಳ 13,63,400, ಕಾಯ್ದಿಟ್ಟ & ಇತರ ನಿಧಿಗಳು 58,613, ಠೇವುಗಳು 53,52,986, ಸಾಲಗಳ ವಿವರ 47, 48, 644 ಸಾಲವನ್ನು ವಿತರಿಸಲಾಗಿದೆ, ದುಡಿಯುವ ಬಂಡವಾಳ 67,75,299, 2,651 ರೂ. ನಿವ್ವಳ ಲಾಭ ಗಳಿಸಿದ್ದು, ಒಟ್ಟು ಸೋಸಾಯಿಟಿ ವ್ಯವಹಾರವು 2,44,20,976 ಮತ್ತು ಶೇ. 5 ಡಿವಿಡೆಂಡ್ ನೀಡಲಾಯಿತು. ಎಂದು ಸಂಘದ ಅಧ್ಯಕ್ಷ ರಾಜೇಂದ್ರ ಶೆಟ್ಟಿ ಅಧ್ಯಕ್ಷತೆ ವಹಿಸಿ ಹೇಳಿದರು.

ಈ ವೇಳೆ ಪೂಜ್ಯ ಶ್ರೀ ಗಣಪತಿ ಮಹಾರಾಜರು ಸಾನಿಧ್ಯ ವಹಿಸಿದ್ದರು, ಎಮ್. ಎಫ್. ಮದ್ದಾಣಿ, ವಿಠ್ಠಲಗೌಡ ದೇವರಡ್ಡಿ, ಚಂದ್ರಶೇಖರ ಹಾದಿಮನಿ, ಎಸ್. ಆರ್. ರೆಬ್ಬಣ್ಣವರ, ಸಂತೋಷ ಹಾದಿಮನಿ, ಡಾ. ವಿಶ್ವನಾಥ ತಾವಂಶಿ, ರಾಜೇಂದ್ರ ವಾಲಿ, ಸೋಸಾಯಿಟಿ ಉಪಾಧ್ಯಕ್ಷ ಸೋಮನಗೌಡ ದ್ಯಾಮನಗೌಡ್ರ, ಸೋಸಾಯಿಟಿ ಸದಸ್ಯರಾದ ಕಾಳಪ್ಪ ಪತ್ತಾರ, ರೇವಪ್ಪ ಚಿಕ್ಕನ್ನವರ, ಜದೀಶ ಬಡಿಗೇರ, ಯಶವಂ ಕದಂ. ಬಾಸ್ಕರ ಹಿರೇಮೆತ್ರಿ, ಫಕ್ಕೀರಪ್ಪ ನಾಯ್ಕರ, ಶ್ರೀಮತಿ ಜಯಶ್ರೀ ತುಬಚಿ, ಶ್ರೀಮತಿಸುನೀತಾ ತಟಮಟಿ, ಕುಮಾರಿ ವಿಧ್ಯಾವತಿ ಬಡಿಗೇರಿ, ವ್ಯವಸ್ಥಾಪಕರಾದ್ ಬಾಳಪ್ಪ ಬಡಿಗೇರ, ಮಾರುತಿ ಕದಂ, ಜಯಶ್ರೀ ಹಿರೇಮಠ, ಸುಜಾತಾ ಸಿದ್ದನ್ನವಗೌಡ್ರ, ಮೈತ್ರಾ ಹೊಂಗಲ, ಫಕ್ಕೀರಪ್ಪ ಕಿಲಾರಿ ಸೇರಿದಂತೆ ಬ್ಯಾಂಕ್ ಶೇರುದಾರರು, ಗ್ರಾಹರು, ಆಶ್ರಮದ ಭಕ್ತವೃಂದ ಇತ್ತರರು ಇದ್ದರು.

## ಪಂಚ ಪೀಠಾಧಿಪತಿಗಳ ಸಾನಿಧ್ಯದಲ್ಲಿ ಬೃಹತ್ ಧರ್ಮಸಭೆ

**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿಯ ಶ್ರೀ ಚಕ್ರಪುರವಾಸಿನಿ ಚಕ್ರೇಶ್ವರಿ ಜ್ಯೋತಿರ್ವಿಜ್ಞಾನ ಸಂಶೋಧನಾ ಕೇಂದ್ರ ಪುಣ್ಯಕೋಟಿ ಸಿದ್ಧಾಶ್ರಮದ ವತಿಯಿಂದ ನವರಾತ್ರಿ ಉತ್ಸವ ನಿಮಿತ್ತ ಸೆ.18ರ ಸಂಜೆ 6.30ಕ್ಕೆ ರಂಭಾಪುರಿ, ಉಜ್ಜಯಿನಿ, ಶ್ರೀಶೈಲ, ಕಾಶಿ ಪೀಠದ ಜಗದ್ಗುರುಗಳ ಸಾನಿಧ್ಯದಲ್ಲಿ 30ಕ್ಕೂ ಹೆಚ್ಚು ವಿವಿಧ ಮಠಾಧೀಶರ ಸಮ್ಮುಖದಲ್ಲಿ ಬೃಹತ್ ಧರ್ಮಸಭೆ ನಡೆಯಲಿದೆ ಎಂದು ಡಾ. ರಮೇಶಕುಮಾರ ಶಾಸ್ತ್ರಿ ತಿಳಿಸಿದರು.

ಸ್ಥಳೀಯ ಜಿಎಲ್‌ಬಿಸಿ ಸಭಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಪ್ರತಿ ವರ್ಷದಂತೆ ಈ ಬಾರಿಯೂ ನಾಡಹಬ್ಬ ದಸರಾ ಮತ್ತು ನವರಾತ್ರಿ ಉತ್ಸವದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸೆ.18 ಗುರುವಾರ ಬೆಳಗ್ಗೆ 7.30ಕ್ಕೆ ನಿಡಸೋಸಿ ಶ್ರೀಗಳಿಂದ ಆದಿಶಕ್ತಿ ಭುವನೇಶ್ವರಿ ದೇವಿ ಮೂರ್ತಿಗೆ ಪ್ರಾಣ ಪ್ರತಿಷ್ಠಾಪನೆ, 8.30 ಕ್ಕೆ ಮಹರ್ಷಿ ಡಾ. ಆನಂದ್ ಗುರೂಜಿ ಅವರಿಂದ ಮಹಾ ಚಂಡಿಕಾ ಯಾಗ, ಮಧ್ಯಾಹ್ನ 3ಕ್ಕೆ ಪಂಚಪೀಠಾಧೀಶ್ವರರ ದಿವ್ಯ ಸಾನಿಧ್ಯದಲ್ಲಿ ಬೃಹತ್ ಕುಂಭಮೇಳ ಹಾಗೂ 5008 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯ, ಸಂಜೆ 6ಕ್ಕೆ ಕಾಶಿಯ ನುರಿತ ಪಂಡಿತರಿಂದ ಶಾಂಭವಿ ಸರೋವರಕ್ಕೆ ಮಹಾಗಂಗಾರತಿ, 6.30ಕ್ಕೆ ಪಂಚ ಪೀಠಾಧೀಶ್ವರರ ಸಾನಿಧ್ಯದಲ್ಲಿ ಬೃಹತ್ ಧರ್ಮ ಸಭೆ, ಆಶೀರ್ವಚನ, ಮಹಾಪ್ರಸಾದ ಮರುದಿನ ಸೆ. 19ರ ಬೆಳಗ್ಗೆಯಿಂದ ನಾನಾ ಮಠಾಧೀಶರ ಭೇಟಿ ಹಾಗೂ ಸಂಜೆ 7.30ಕ್ಕೆ ರಾಜ್ಯದ ಮತ್ತು ಉತ್ತರ ಕರ್ನಾಟಕದ ಹೆಸರಾಂತ ಕಲಾವಿದರಿಂದ ಅದ್ದೂರಿ ಹಾಸ್ಯ ಮತ್ತು ಸಂಗೀತ ರಸಮಂಜರಿ ಜರುಗುವುದಾಗಿ ತಿಳಿಸಿದರು.



## ಬಸವೇಶ್ವರ ಸೊಸಾಯಿಟಿಗೆ 5.05 ಕೋಟಿ ಲಾಭ



**ಮೂಡಲಗಿ :** ಸಂಘವು ಮಾರ್ಚ ಅಂತ್ಯಕ್ಕೆ 6ಕೋಟಿ 41 ಲಕ್ಷರೂ. ಶೇರು ಬಂಡವಾಳ, ಸಾರ್ವಜನಿಕ ವಲಯದಿಂದ 241 ಕೋಟಿ ರೂ.ಠೇವು ಸಂಗ್ರ, ತನ್ನ ಸದಸ್ಯರಿಗೆ 184 ಕೋಟಿರೂ.ವಿವಿಧ ಸಾಲ ವಿತರಿಸಿದೆ. ಠೇವಣಿ ಭದ್ರತೆಗಾಗಿ ರಾಷ್ಟ್ರೀಕೃತ ಬ್ಯಾಂಕಗಳಲ್ಲಿ 71 ಕೋಟಿರೂ. ಠೇವಣೆ ಇಡಲಾಗಿದೆ. ಮಾರ್ಚ ಅಂತ್ಯಕ್ಕೆ 282 ಕೋಟಿ ರೂ ದುಡಿಯುವ ಬಂಡವಾಳ &ಒಟ್ಟು 11236 ಸದಸ್ಯರನ್ನು ಹೊಂದಿ ಮಾರ್ಚ ಅಂತ್ಯಕ್ಕೆ 5ಕೋಟಿ 05 ಲಕ್ಷರೂ.ಲಾಭಗಳಸಿ ಪ್ರಗತಿ ಪಥದತ್ತ ಸಾಗಿದೆ ಎಂದು ಸೊಸಾಯಿಟಿಯ ಅಧ್ಯಕ್ಷ ಮಲ್ಲಿಕಾರ್ಜುನ ಡವಳೇಶ್ವರ ಹೇಳಿದರು.

ಸೋಮವಾರ ನಡೆದ ಬಸವೇಶ್ವರ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸಾಟಿಯ 30 ನೇ ವಾರ್ಷಿಕ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಒಟ್ಟು 15 ಶಾಖೆಗಳು ಪ್ರಗತಿಯಲ್ಲಿದ್ದು ಮುಂಬರುವ ದಿನದಲ್ಲಿ ಇನ್ನು ನಾಲ್ಕು ಶಾಖೆಗಳನ್ನು ಪ್ರಾರಂಭಿಸುವ ಉದ್ದೇಶ ಹೊಂದಲಾಗಿದೆ ಎಂದರು,

ಸಾಹಿತಿ ಬಾಲಶೇಖರ ಬಂದಿ ಉಪನ್ಯಾಸ ನೀಡಿ ಮಾತನಾಡಿ.ಲೇಖ ಪರಿಶೋಧಕರು ಯಾವದೇ ತಪ್ಪು ಮಾಡಿದ ಉದಾಹರಣೆಗಳು ಇಲ್ಲ. ಕಾರಣ ಅವರ ಪ್ರಾಮಾಣಿಕತೆ ಇಂದ ಸಂಘ ಸಂಸ್ಥೆಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ.ಎಲ್ಲ ಸಮುದಾಯದವರ ಏಳ್ಗೆಗಾಗಿ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸುವ ಸಂಘವು ಬಸವೇಶ್ವರ ಹೆಸರನ್ನು ಹೊಂದಿದ್ದು ಮುಂದಿನ ದಿನದಲ್ಲಿ ಇನ್ನು ಎತ್ತರಕ್ಕೆ ಬೆಳೆಯಲಿ ಎಂದರು. ವೇದಿಕೆಯ ಮೇಲೆ ಉಪಾಧ್ಯಕ್ಷ ರವೀಂದ್ರ ಭಾಗೋಜಿ.ಲೇಖ ಪರಿಶೋಧಕ ಧರ್ಮರಾಜ ಪೂಳ.ಶಾಖಾ ಸಲಹಾ ಸಮಿತಿ ಅಧ್ಯಕ್ಷರಾದ ಅಶೋಕ ಗಾಣಿಗೇರ. ಮಲ್ಲಪ್ಪ ಗೌಡನವರ. ಮೋಹನ ಹಾದಿಮನಿ.ಶಿವಪ್ಪ ಮಲಘಾಣ.ಲಕ್ಷ್ಮಣ ಗೊಲಬಾಂವಿ.ಷಣ್ಮುಖ ತೇರದಾಳ.ಶಿವಪ್ಪ ಹಳ್ಳೂರ.ತಾನಾಜೀ ಮುರುಮಕರ್. ಶಿವಾನಂದ ಜೀನಗಿ.ಈರಣ್ಣ ಪಾಟೀಲ.ನಿರ್ವಾಣಿ ಕತ್ತಿ. ಅರ್ಜುನ ಕೊಡಗ. ಚಂದ್ರಶೇಖರ ಬಾಳಿ, ಶಿವಾನಂದ ಪಾಟೀಲ ನ್ಯಾಯವಾದಿ ಇದ್ದರು. ನಿರ್ದೇಶಕರಾದ ಬಸವರಾಜ ಮ ತೇಲಿ, ಗಿರೀಶ ಸು ಢವಳೇಶ್ವರ,ಚನ್ನಬಸು ಭೀ, ಬಡ್ಡಿ, ಶ್ರೀಕಾಂತ ಶಿ ಹಿರೇಮಠ, ಶ್ರೀಶೈಲ ಯ ಮದಗಣ್ಣವರ,ದೇವಪ್ಪ ಫ ಕೌಜಲಗಿ, ಕುಸುಮಾ ಆ ತೇಲಿ ಸುಮಿತ್ರಾ ಪ್ರ ಶೇಡಬಾಳ, ಮಹಾದೇವಿ ಶಂ ಹಿರೇಮಠ ಮತ್ತು ಲಕ್ಷ್ಮಣ ಬ ತೆಳಗಡೆ, ರಾಘವೇಂದ್ರ ಸಿ ಕೇಸಪನಟ್ಟಿ ಉಪಸ್ಥಿತರಿದ್ದರು.

# ಮಹಿಳೆಯರನ್ನು ಹಗುರವಾಗಿ ಪರಿಗಣಿಸಿದರೆ ಸಹಿಸಲ್ಲ

**ಬೆಳಗಾವಿ:** ಅತ್ಯಂತ ಸ್ವಾಭಿಮಾನದ ಜೀವನ ನಡೆಸುವ ಮಹಿಳೆಯರಿಗೆ ಯಾರೂ ಮೋಸ, ಅನ್ಯಾಯ. ಮಾಡಲು ಹೋಗಬಾರದು. ಮಹಿಳೆಯರನ್ನು ಹಗುರವಾಗಿ ಪರಿಗಣಿಸುವವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಎಚ್ಚರಿಕೆ ನೀಡಿದರು.

ಬೆಳಗಾವಿಯ ಪಶು ಸಂಗೋಪನೆ ಇಲಾಖೆಯ ಸಭಾಭವನದಲ್ಲಿ ನಡೆದ ವಾರ್ಷಿಕ ಮಹಾಸಭೆ, ಪ್ರಮಾಣ ಪತ್ರಗಳ ವಿತರಣೆ ಹಾಗೂ ಧಾರವಾಡದಲ್ಲಿ ನಡೆಯಲಿರುವ ಕೃಷಿ ಮೇಳ 2025 ರ ಕಾರ್ಯಕ್ರಮಕ್ಕೆ ತೆರಳುತ್ತಿರುವ ಗ್ರಾಮ ಪಂಚಾಯತ್ ಮಟ್ಟದ ಸಂಜೀವಿನಿ ಮಹಿಳಾ ಒಕ್ಕೂಟಕ್ಕೆ ಹಸಿರು ನಿಶಾನೆ ತೋರಿ ಮಾತನಾಡಿದ ಸಚಿವರು, ಇತ್ತೀಚೆಗೆ ಮೈಕ್ರೋ ಫೈನಾನ್ಸ್ ನವರು ಮಹಿಳೆಯರಿಗೆ ಮೋಸ ಮಾಡುತ್ತಿರುವ ಪ್ರಕರಣಗಳು ಬೆಳಕಿಗೆ ಬರುತ್ತಿವೆ. ಜೊತೆಗೆ ಕೆಲವು ಅಧಿಕಾರಿಗಳೂ ಮಹಿಳೆಯರನ್ನು ಹಗುರವಾಗಿ ಪರಿಗಣಿಸುವುದನ್ನು ಕಾಣುತ್ತಿದ್ದೇವೆ. ಇಂತವುಗಳನ್ನು ಸಹಿಸಲು ಸಾಧ್ಯವಿಲ್ಲ ಎಂದ ಅವರು, ಯಾರಿಂದಲೂ ಮೋಸಕ್ಕೊಳಗಾಗಬೇಡಿ. ಎಚ್ಚರಿಕೆಯಿಂದಿರಿ ಎಂದು ಮಹಿಳೆಯರಿಗೆ ಕರೆ ನೀಡಿದರು.

ಮಹಿಳೆ ಎಂದರೆ ಸಂಕಷ್ಟ, ಕೆಲಸ ಮಾಡಿ




ಸ್ವಾಭಿಮಾನದ ಬದುಕಿಗಾಗಿ ಸಂಘ ಕಟ್ಟಿದ್ದೀರಿ. ಮಹಿಳೆ ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಹುದು ಎಂದು ಸಾಧನೆ ಮಾಡಿ ತೋರಿಸಿದ್ದೀರಿ, ಮಹಿಳೆಯರ ಸಾಧನೆಯನ್ನು ಗುರುತಿಸುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಸಚಿವರು ಹೇಳಿದರು.

ಕಾಂಗ್ರೆಸ್ ಸರ್ಕಾರ ಬಂದಾಗಲೆಲ್ಲಾ ಮಹಿಳೆಯರಿಗೆ ಅನುಕೂಲಕರ ಯೋಜನೆಗಳನ್ನು ರೂಪಿಸಿದೆ. ನರೇಗಾ ಮಾಡಿದ್ದು ಕಾಂಗ್ರೆಸ್, ಸ್ಥಳೀಯ ಸಂಸ್ಥೆಗಳಲ್ಲಿ 50% ಮೀಸಲಾತಿ, ಬಿಸಿಯೂಟ ಯೋಜನೆ, ಆಶಾ ಕಾರ್ಯಕರ್ತೆರ ನೇಮಕ, ಗೃಹಲಕ್ಷ್ಮೀ ಯೋಜನೆ ಇವೆಲ್ಲವೂ ಕಾಂಗ್ರೆಸ್‌ನ ಯೋಜನೆಗಳು. ಮನೆ ಬೆಳಗುವುದೂ ಮಹಿಳೆಯರಿಂದಲೇ, ಆದ್ದರಿಂದ ಮಹಿಳೆಯ ಕೈಗೆ ಸ್ವಾಭಿಮಾನದ ಅಧಿಕಾರ ಕೊಡಬೇಕು ಎಂದರು.

ಬ್ರಿಟೀಷರು ಭಾರತ ಬಿಟ್ಟು ಹೋಗುವಾಗ ನಮಗೆ ಊಟ ಮಾಡಲು ಗತಿ ಇರಲಿಲ್ಲ. ಇಂದು ಸ್ವಾಭಿಮಾನದ ಸ್ಥಿತಿಗೆ ಬಂದಿದೆ. ಇದು ಕಾಂಗ್ರೆಸ್ ಸಾಧನೆ, ಖಾಸಗಿ ಫೈನಾನ್ಸ್ ಹಾವಳಿಗೆ ಮೋಸಕ್ಕೆ ಬಲಿಯಾಗಬೇಡಿ, ಸಂಜೀವಿನಿ ಸಂಘದವರು ಮಹಿಳೆಯರಿಗೆ ಸಹಾಯ ಮಾಡಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮಹಿಳೆಯರಿಗೆ ನ್ಯಾಯ ಕೊಡಬೇಕು, ಸಹಕಾರ ಕೊಡಬೇಕು, ಮಹಿಳೆಯರನ್ನು ಯಾರೂ ಹಗುರವಾಗಿ ಪರಿಗಣಿಸಬೇಡಿ. ಮಹಿಳೆ ಅಬಲೆಯಲ್ಲ ಸಬಲೆ ಎಂದು ನಿರೂಪಿಸುತ್ತಿದ್ದಾರೆ ಎಂದು ಸಚಿವರು ಹೇಳಿದರು.

ಈ ವೇಳೆ ನಿರ್ಮಲಾ ತಿಗಡಿ, ಮಲ್ಲಿಕಾರ್ಜುನ ಕೆಳಕರ್, ಡಾ.ಆನಂದ ಪಾಟೀಲ, ಡಾ.ರವಿ ಸಾಲಿಗೌಡರ್, ಪ್ರದೀಪ್ ಸಾವಂತ, ಮಹಾದೇವ್ ಪಟಗುಂದಿ, ಮಹೇಶ ಭಜಂತ್ರಿ, ಸಂಘದ ಸದಸ್ಯೆಯರು, ಪಶು ಸಖಿಯರು, ಕೃಷಿ ಸಖಿಯರು ಮುಂತಾದವರು ಉಪಸ್ಥಿತರಿದ್ದರು.

## ನೇರ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ:** 2025–26ನೇ ಸಾಲಿನ ಶೈಕ್ಷಣಿಕ ವರ್ಷಕ್ಕಾಗಿ ಕೋಥಳಿ ಜವಾಹರ ನವೋದಯ ವಿದ್ಯಾಲಯದ 11 ನೇ ತರಗತಿಯಲ್ಲಿ ಖಾಲಿ ಇರುವ ಸೀಟುಗಳ ನೇರ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು 2024–25ನೇ ಶೈಕ್ಷಣಿಕ ವರ್ಷದಲ್ಲಿ 10ನೇ ತರಗತಿಯಲ್ಲಿ ತೇರ್ಗಡೆ ಹೊಂದಿದ್ದು, ವಿಜ್ಞಾನ ಮತ್ತು ಗಣಿತ ವಿಷಯದಲ್ಲಿ 60% ಅಂಕಗಳನ್ನು ಹೊಂದಿರಬೇಕು.

ವಿದ್ಯಾರ್ಥಿಗಳ ಆಯ್ಕೆಯನ್ನು ಅವರು ಪಡೆದ ಅಂಕಗಳ ಉನ್ನತ ಶ್ರೇಣಿಯ ಆಧಾರದ ಮೇಲೆ ನಿರ್ಧರಿಸಲಾಗುವುದು. ಅಭ್ಯರ್ಥಿಗಳು 10ನೇ ತರಗತಿಯಲ್ಲಿ ತೇರ್ಗಡೆ ಪಡೆದ ಅಂಕಪಟ್ಟಿ ಮತ್ತು ಜಾತಿ ಪ್ರಮಾಣಪತ್ರ ಹಾಗೂ ಅಭ್ಯರ್ಥಿಯ ಭಾವಚಿತ್ರಗಳೊಂದಿಗೆ ನೇರವಾಗಿ ಕೋಥಳಿ ಜವಾಹರ ನವೋದಯ ವಿದ್ಯಾಲಯಕ್ಕೆ ಸೆಪ್ಟಂಬರ್, 23, 2025 ರ ಒಳಗಾಗಿ ಆಗಮಿಸಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8904651847, 6361298224, 9972892950, 7353623295 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಕೋಥಳಿ ಜವಾಹರ ನವೋದಯ ವಿದ್ಯಾಲಯದ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ಲೋಕ ಅದಾಲತ್

**ಬೆಳಗಾವಿ:** ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಟಿ. ಎನ್. ಇನವಳ್ಳಿ, , ಬೆಳಗಾವಿ ಇವರ ಮಾರ್ಗದರ್ಶನದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಶನಿವಾರದಂದು ರಾಷ್ಟ್ರೀಯ ಲೋಕ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿತ್ತು.

ಸದರಿ ಲೋಕ ಅದಾಲತ್‌ನಲ್ಲಿ ಬೆಳಗಾವಿ ಜಿಲ್ಲೆಯ ನ್ಯಾಯಾಯಗಳಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಕ್ರಿಮಿನಲ್ ಕಂಪೌಂಡೆಬಲ್– 40, ಚೆಕ್ ಬೌನ್ಸ ಪ್ರಕರಣಗಳು–298, ಬ್ಯಾಂಕ್ ಹಾಗೂ ಹಣ ವಸೂಲಾತಿ ಪ್ರಕರಣಗಳು– 52, ಎಮ್. ವಿ.ಸಿ. ಪ್ರಕರಣಗಳು 186, ವಿಧ್ಯುಚ್ಛಕ್ತಿ ಪ್ರಕರಣಗಳು41, ವೈವಾಹಿಕ ಪ್ರಕರಣಗಳು 26, ಅಸಲು ಧಾವೆ ಪ್ರಕರಣಗಳು 1355 ಹಾಗೂ ಇತರೆ ಪ್ರಕರಣಗಳು ಕೂಡಿ ಒಟ್ಟು 14,508 ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಮೂಲಕ ಒಟ್ಟು 1,51,89,10,910 ರೂ. ಗಳ ಪರಿಹಾರ ಒದಗಿಸುವುದರ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ.

ವಿಶೇಷವಾಗಿ ಬೆಳಗಾವಿ ಜಿಲ್ಲೆಯಲ್ಲಿ 27 ಪ್ರಕರಣಗಳಲ್ಲಿ ಪತಿ–ಪತ್ನಿಯರು ಒಂದಾಗಿರುತ್ತಾರೆಂದು ಹಾಗೂ ಎಮ್.ವಿ.ಸಿ ಪ್ರಕರಣಗಳು 186 ರಲ್ಲಿ 11,85,33,500 ಪರಿಹಾರವನ್ನು ಒದಗಿಸಿದ್ದಾರೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ಯೋಜನೆಗಳಿಗಾಗಿ ಅರ್ಜಿ ಆಹ್ವಾನ

**ಬೆಳಗಾವಿ:** ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಚರ್ಮ ಕುಶಲಕರ್ಮಿ ಕುಟುಂಬಗಳ ಯುವ ಜನರಿಗೆ ಹೊಸ ತಂತ್ರಜ್ಞಾನ, ಚರ್ಮಕಾರರ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ನೇರ ಸಾಲ ಯೋಜನೆ, ಚರ್ಮಕಾರರ ವಸತಿ ಯೋಜನೆಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅಕ್ಟೋಬರ್, 08, 2025 ರ ಒಳಗಾಗಿ https://sevasindhu.karnataka.gov.in ಹಾಗೂ https://sevasindhuservices.karnataka.gov.in ಪೋರ್ಟಲ್ ಮೂಲಕ ಮತ್ತು ಕರ್ನಾಟಕ ಒನ್ ಮತ್ತು ಗ್ರಾಮ ಒನ್ ಕೇಂದ್ರಗಳಲಿ ಅರ್ಜಿ ಸಲ್ಲಿಸಬಹುದಾಗಿದೆ. ಈ ಹಿಂದಿನ ಸಾಲಿನಲ್ಲಿ ಆನಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಲ್ಯಾಣ ಮಿತ್ರ ಎಕೀಕೃತ ಎಸ್.ಸಿ/ಎಸ್.ಟಿ ಸಹಾಯವಾಣಿ ಸಂಖ್ಯೆ: 9482300400 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಡಾ॥ ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ದಿ ನಿಗಮ ನಿಯಮಿತ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಡಿಯಾ ಸ್ಕಿಲ್ಸ್ ಕಾಂಪಿಟೇಷನ್

**ಬೆಳಗಾವಿ:** 2026 ನೇ ಸಾಲಿನ ವರ್ಲ್ಡ್ ಸ್ಕಿಲ್ ಕಾಂಪಿಟೇಷನ್ ಚೇನಾದ ಶಾಂಘೈನಲ್ಲಿ ನಡೆಯಲಿದ್ದು ಈ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯದ ಯುವ ಜನತೆಯ ಜ್ಞಾನಾರ್ಜನೆಗೆ ಸೂಕ್ತ ವೇದಿಕೆ ಕಲ್ಪಿಸಲು ಹಾಗೂ ಮಾದರಿ ಕೌಶಲ್ಯಭರಿತ ರಾಜ್ಯವನ್ನಾಗಿಸಲು 2025–26 ನೇ ಸಾಲಿನಲ್ಲಿ ಇಂಡಿಯಾ ಸ್ಕಿಲ್ಸ್ ಕಾಂಪಿಟೇಷನ್ ಕರ್ನಾಟಕ–2025 ಸ್ಪರ್ಧಾ ಕಾರ್ಯಕ್ರಮವನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಏರ್ಪಡಿಸುತ್ತಿದೆ. ಜಾಗತಿಕ ವೇದಿಕೆಯಲ್ಲಿ ಭಾರತವನ್ನು ಪ್ರತಿನಿಧಿಸಿ ಸ್ಕಿಲ್ ಚಾಂಪಿಯನ್ ಆಗಲು ಇದೊಂದು ಸುವರ್ಣಾವಕಾಶವಾಗಿದ್ದು ಸದರಿ ಸ್ಪರ್ಧೆಯಲ್ಲಿ ಭಾವಹಿಸಲು ಯಾವುದೇ ವಿದ್ಯಾರ್ಹತೆಯ ಮಿತಿಗಳಿರುವುದಿಲ್ಲ. ಅಭ್ಯರ್ಥಿಗಳ ಕೌಶಲ್ಯವೇ ಪ್ರಮುಖ ಮಾನದಂಡವಾಗಿದ್ದು ಸ್ಪರ್ಧೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು 16 ರಿಂದ 25 ವಯೋಮಾನದಲ್ಲಿರಬೇಕು.

ಸದರಿ ಸ್ಪರ್ಧೆಯಲ್ಲಿ ನೋದಾಯಿಸಲು 30 ನೇ ಸೆಪ್ಟಂಬರ್ 2025 ಅಂತಿಮ ದಿನಾಂಕವಾಗಿದ್ದು, ಆಸಕ್ತರು https://www.skillindiadigital.gov.in ವೆಬ್ ಸೈಟ್‌ಗೆ ಭೇಟಿ ನೀಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿಯ ಜಿಲ್ಲಾ ಕೌಶಲ್ಯಾಭಿವೃದಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಜಾಪ್ರಭುತ್ವ ಎಂದರೆ ಚುನಾವಣೆಯಲ್ಲಿ ಮತ ಹಾಕುವುದಲ್ಲ

**ಜಮಖಂಡಿ:** ಪ್ರಜಾಪ್ರಭುತ್ವ ಮಾನವ ಸಮಾಜದ ಅತ್ಯುತ್ತಮ ಆಡಳಿತ ವ್ಯವಸ್ಥೆಯಾಗಿ ಪರಿಗಣಿಸಲ್ಪಡುತ್ತದೆ. ಜನರ ಇಚ್ಛೆ, ಹಕ್ಕು, ಜನರ ನಿರ್ಣಯಗಳಿಗೆ ಮೌಲ್ಯ ಕೊಡುವ ವ್ಯವಸ್ಥೆ ಪ್ರಜಾಪ್ರಭುತ್ವವಾಗಿದೆ ಎಂದು ರಾಜ್ಯಶಾಸ್ತ್ರ ಸಹಪ್ರಾಧ್ಯಪಕ ಬಂದೇನವಾಜ ಕೊರಬು ಹೇಳಿದರು.

ನಗರದ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜ ಮತ್ತು ಸ್ನಾತಕೋತ್ತರ ಕೇಂದ್ರ ಸಭಾಭವನದಲ್ಲಿ ಸೋಮವಾರ ರಾಜ್ಯಶಾಸ್ತ್ರ ವಿಭಾಗ ಮತ್ತು ಐ.ಕ್ಯೂ.ಎ.ಸಿ.ಸಹಯೋಗದಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಶ್ವದಲ್ಲಿ ಪ್ರಜಾಪ್ರಭುತ್ವದ ಮಹತ್ವ ಹೆಚ್ಚಿಸಲು ಅದರ ಮೂಲ್ಯಗಳನ್ನು ಜನತೆಗೆ ತಲುಪಿಸಲು ಪ್ರತಿವರ್ಷ ಸೆಪ್ಟೆಂಬರ್ 15 ರಂದು ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಆಚರಿಸಲಾಗುತ್ತದೆ. ಈ ದಿನದಂದು ನಾಗರಿಕರಿಗೆ ತಮ್ಮ ಹಕ್ಕುಗಳ ಅರಿವು ಮೂಡುತ್ತದೆ. ಜವಾಬ್ದಾರಿದಿಂದ ಪಾಲ್ಗೊಳ್ಳುವ ಮನೋಭಾವ ಉಂಟಾಗುತ್ತದೆ.



ಪ್ರಜಾಪ್ರಭುತ್ವ ಎಂದರೆ ಕೇವಲ ಚುನಾವಣೆಯಲ್ಲಿ ಮತ ಹಾಕುವುದಲ್ಲ. ಅದು ಸಮಾನತೆ, ನ್ಯಾಯ, ಸ್ವಾತಂತ್ರ್ಯ ಮತ್ತು ಬಾಂಧವ್ಯದ ಸಂಕೇತವಾಗಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದಂದು ವಿಶ್ವದ ದೇಶಗಳು ತಮ್ಮ ಪ್ರಜಾಪ್ರಭುತ್ವ ಮೌಲ್ಯ ಕಾಪಾಡಿಕೊಳ್ಳುವ ಪ್ರತಿಜ್ಞೆ ಮಾಡುತ್ತವೆ. ಇಂದು ಜಗತ್ತಿನಲ್ಲಿ ಹಲವೆಡೆ ಹಿಂಸೆ, ಅಸಮಾನತೆ, ಭ್ರಷ್ಟಾಚಾರ ಹಾಗೂ ಅಧಿಕಾರದ ದುರುಪಯೋಗದಿಂದ ಪ್ರಜಾಪ್ರಭುತ್ವಕ್ಕೆ ಸವಾಲುಗಳು ಎದುರಾಗುತ್ತಿವೆ ಎಂದರು.4 ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಸುನಂದಾ ಎಸ್. ಶಿರೂರ ಮಾತನಾಡಿ, ವಿಶ್ವಸಂಸ್ಥೆ 2007ರಲ್ಲಿ ಸಾಮಾನ್ಯ ಸಭೆಯಲ್ಲಿ ಅಧಿಕೃತವಾಗಿ ಘೋಷಿಸುವ ಮೂಲಕ 2008ರ ಸೆಪ್ಟೆಂಬರ್ 15 ರಂದು ವಿಶ್ವದಾದ್ಯಂತ ಆಚರಿಸಲಾಯಿತು. ಜಗತ್ತಿನ 74 ದೇಶಗಳಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಅಸ್ತಿತ್ವದಲ್ಲಿದೆ. ಪ್ರಜಾಪ್ರಭುತ್ವದ ಮಹತ್ವವನ್ನು ಎಲ್ಲ ದೇಶಗಳಿಗೆ ನೆನಪಿಸಲು ಪ್ರಾರಂಭಿಸಲಾಯಿತು. ಸಂಯುಕ್ತರಾಷ್ಟ್ರ ಶಾಂತಿ, ಮಾನವ ಹಕ್ಕುಗಳು ಮತ್ತು ಸಮಾನತೆ ಕಾಪಾಡುವ ವಿಶ್ವ ವೇದಿಕೆಯಾಗಿದ್ದು, ಪ್ರಜಾಪ್ರಭುತ್ವ ಮಾನವ ಸಮಾಜದ ಅವಿಭಾಜ್ಯ ಅಂಶವೆಂದು ಪರಿಗಣಿಸಿದೆ. ಪ್ರತಿಯೊಬ್ಬ ನಾಗರಿಕನು ತನ ್ಕರ್ತವ್ಯವನ್ನು ಅರಿತು ನಡೆದುಕೊಂಡಾಗ ಮಾತ್ರ ಪ್ರಜಾಪ್ರಭುತ್ವವು ಫಲಪ್ರದವಾಗಲಿದೆ. ಜಗತ್ತಿನಲ್ಲಿ ಹಲವೆಡೆ ತಾನಾಶಾಹಿ, ಭ್ರಷ್ಟಾಚಾರ, ಅಸಮಾನತೆ ಇತ್ಯಾದಿ ಸಮಸ್ಯೆಗಳು ಎದುರಾಗುತ್ತಿದ್ದರೂ ಪ್ರಜಾಪ್ರಭುತ್ವವು ಜನರನ್ನುಒಗ್ಗೂಡಿಸುವ ಶಕ್ತಿ ಹೊಂದಿದೆ ಎಂದರು.

ವೇದಿಕೆಯಲ್ಲಿ ಡಾ.ಎಸ್.ಎನ್. ಮಣಕವಾಡ, ಆರ್.ಎಚ್.ಹಳ್ಳಿ, ಡಾ.ವೈ. ವೈ.ಕೊಕ್ಕನವರ, ಡಾ.ಅರುಣ ಕಾಂಬಳೆ, ಡಾ.ಎಸ್.ಎನ್.ಭಜಂತ್ರಿ, ಡಾ.ಬಿ.ಎನ್. ಜಾಧವ, ಆರ್.ಬಿ.ಶಿತೋಳೆ, ಪುಷ್ಪಾ ಹುಣಶ್ಯಾಳ, ಎಸ್.ಎಸ್.ಪಾಟೀಲ, ಸವಿತಾ ಕಲಗೊಂಡ ಇದ್ದರು. ಇದೇ ಸಂದರ್ಭದಲ್ಲಿ ದಿನಾಚರಣೆಯಲ್ಲಿ ಪ್ರತಿಜ್ಞಾ ವಿಧಿಯನ್ನು ಬೋಧಿಸಲಾಯಿತು.

## ಯಲ್ಲಮ್ಮಾದೇವಿ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

**ಬೆಳಗಾವಿ:** ದಸರಾ ಹಬ್ಬದ ಪ್ರಯುಕ್ತ ಶ್ರೀ ಯಲ್ಲಮ್ಮಾದೇವಿ ಜಾತ್ರೆಯು ಸೆಪ್ಟಂಬರ್ 21 ರಿಂದ ಅಕ್ಟೋಬರ್ 2, 2025 ರವರೆಗೆ ವಿಜೃಂಭಣೆಯಿಂದ ಜರುಗಲಿದ್ದು, ಜಾತ್ರೆಯ ಮುಖ್ಯ ದಿನಗಳು ದಿ: ಸೆಪ್ಟೆಂಬರ್ 23, 26, 28 ಹಾಗೂ 30, 2025 ಗಳಂದು ಇರುತ್ತವೆ. ಸದರಿ ಜಾತ್ರೆಯ ಸಮಯದಲ್ಲಿ ಹೆಚ್ಚಿನ ಜನಸಾಂದ್ರತೆ ಆಗುವುದರಿಂದ ಜಾತ್ರೆಗೆ ಹೋಗಿ ಬರುವ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ವಿಶೇಷ ಬಸ್‌ಗಳನ್ನು ಬೆಳಗಾವಿ ಕೇಂದ್ರ/ನಗರ ಬಸ್ ನಿಲ್ದಾಣ ಹಾಗೂ ಯಲ್ಲಮ್ಮಾ ಗುಡ್ಡದಿಂದ ಬೆಳಗಾವಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ವಾ.ಕ. ರ.ಸಾ.ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಕುರುಬ ಜನಾಂಗದ ಜಾಗೃತಿ ಸಭೆ

**ಬಾಗಲಕೋಟೆ:** ಕರ್ನಾಟಕ ಪ್ರದೇಶ ಕುರುಬರ ಸಂಘ ಬೆಂಗಳೂರು ಹಾಗೂ ಜಿಲ್ಲಾ ಕುರುಬರ ಸಂಘ, ಕಾಳಿದಾಸ ವಿದ್ಯಾವರ್ಧಕ ಸಂಘ ಹಾಗೂ ಜಿಲ್ಲೆಯ ಎಲ್ಲಾ ಕುರುಬ ಸಂಘಟನೆಗಳ ಒಕ್ಕೂಟದ ವತಿಯಿಂದ ಸ.18 ರಂದು ಗುರುವಾರ ಮಧ್ಯಾಹ್ನ 3 ಗಂಟೆಗೆ ಶ್ರೀ ಕಾಳಿದಾಸ ಕಲ್ಯಾಣ ಮಂಟಪದಲ್ಲಿ ಜಾತಿ ಗಣತಿ ಕುರಿತು ಜನಜಾಗೃತಿ ಸಭೆಯನ್ನು ಆಯೋಜಿಸಲಾಗಿದೆ.

ಕರ್ನಾಟಕ ಸರ್ಕಾರ ಹಿಂದುಳಿದ ವರ್ಗಗಳ ಆಯೋಗದಿಂದ ಜಾತಿ ಗಣತಿ ಹಾಗೂ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಂಡಿರುವದರ ಬಗ್ಗೆ ಹಾಗೂ ಕುರುಬ ಜನಾಂಗದ ಬಗ್ಗೆ ಅರಿವು ಮೂಡಿಸುವ ಸಭೆಯನ್ನು ಆಯೋಜಿಸಲಾಗಿದೆ. ಸಭೆಗೆ ರಾಜ್ಯ ಕುರುಬರ ಸಂಘದ ಅಧ್ಯಕ್ಷ ಎಂ.ಈರಣ್ಣ, ರಾಜ್ಯ ಹಿಂದುಳಿದ ವರ್ಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಂ.ರಾಮಚಂದ್ರಪ್ಪ, ರಾಜ್ಯ ಕುರುಬರ ಸಂಘದ ಕಾರ್ಯಾಧ್ಯಕ್ಷ ಬಸವರಾಜ ಬಸಲಿಗುಂದಿ, ಪ್ರಧಾನ ಕಾರ್ಯದರ್ಶಿ ಎಂ.ವಿ.ಸೋಮಶೇಖರ, ಖಜಾಂಚಿ ಕೆ.ಎಂ.ಕೃಷ್ಣಮೂರ್ತಿ, ಆಂತರಿಕ ಲೆಕ್ಕಪರಿಶೋಧಕ ಟಿ.ಇ.ರಘುರಾಮ್, ಸೇರಿದಂತೆ ಪದಾಧಿಕಾರಿಗಳು, ರಾಜ್ಯ ಮಟ್ಟದ ಸಮಾಜದ ಮುಖಂಡರುಗಳು, ಪ್ರದೇಶ ಕುರುಬರ ಸಂಘದ ನಿರ್ದೇಶಕರಾದ ಶ್ರೀಶೈಲ ದಳವಾಯಿ, ಬಾಯಕ್ಕ ಮೇಟಿ ಸೇರಿದಂತೆ ಜಿಲ್ಲೆಯ ಸಮಾಜದ ಹಿರಿಯ ಮುಖಂಡರು/ಚುನಾಯಿತ ಪ್ರತಿನಿಧಿಗಳು/ಜಿಲ್ಲಾ/ ತಾಲೂಕು ಅಧ್ಯಕ್ಷರುಗಳು, ಪದಾಧಿಕಾರಿಗಳು ಹಾಗೂ ಜಿಲ್ಲೆಯ ಎಲ್ಲಾ ಕುರುಬ ಸಮಾಜದ ಸಂಘಟನೆಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸಭೆಯ ಆಗಮಿಸುತ್ತಿದ್ದು, ಸದರಿ ಸಭೆಗೆ ಜಿಲ್ಲೆಯ ಕುರುಬ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ತಮ್ಮ ಸಲಹೆ ಸೂಚನೆಗಳನ್ನು ನೀಡಿ ಈ ಕುರುಬ ಜನಾಂಗದ ಬಗ್ಗೆ ಅರಿವು ಮೂಡಿಸುವ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಪ್ರದೇಶ ಕುರುಬರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಹನಮಂತ ಅಪ್ಪನ್ನವರ ಮತ್ತು ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಡಿ.ಬಿ.ಸಿದ್ದಾಪೂರ ಜಂಟಿ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.

## ಭೂದಾಖಲೆಗಳ ಇಲಾಖಾ ನೌಕರರ ಸಭೆ



**ಬೆಳಗಾವಿ:** ನಗರದ ಭೂದಾಖಲೆಗಳ ಇಲಾಖಾ ನೌಕರರ ಸಹಕಾರಿ ಪತ್ತಿನ ಸಂಘ ನಿಯಮಿತ ಬೆಳಗಾವಿಯ 78 ನೇ ವಾರ್ಷಿಕ ಮಹಾಸಭೆಯು ಶನಿವಾರ ಹಳೆ ಜಿಲ್ಲಾ ಪಂಚಾಯತ ಸಂಭಾಗಣದಲ್ಲಿ ಜರುಗಿತು.

ಸಭೆಯನ್ನು ವೇದಿಕೆಯ ಮೇಲಿನ ಅತಿಥಿಗಳು ಉದ್ಘಾಟಿಸಿದರು. ಭೂದಾಖಲೆಗಳ ಸಹಾಯಕ ನಿರ್ದೇಶಕರಾದ ಎಸ್.ವಿ.ಕುಲಕರ್ಣಿ, ಅಜೇಯ ಹಾದಿಮನಿ ಉದ್ಘಾಟನಾ ಪರ ಮಾತನಾಡಿದರು.

ಅಧ್ಯಕ್ಷತೆಯನ್ನ ಸಂಘದ ಅಧ್ಯಕ್ಷರಾದ ಕೆ.ಜಿ.ಪಾಟೀಲ ವಹಿಸಿ ಮಾತನಾಡಿ, ಸಂಘವು ಒಟ್ಟು 414 ಜನ ಸದಸ್ಯರ ಒಳಗೊಂಡು ಪ್ರಸಕ್ತ ಸಾಲಿನಲ್ಲಿ 48 ನೌಕರರು ಸದಸ್ಯತ್ವ ಪಡೆದುಕೊಂಡಿದ್ದಾರೆ.

88,72,868 ಲಕ್ಷ ಶೇರು ಬಂಡವಾಳದೊಂದಿಗೆ 2024–25ನೇ ಸಾಲಿನಲ್ಲಿ 21,14,476 ನಿವ್ವಳ ಲಾಭವಾಗಿರುತ್ತದೆ. ಮುಂದಿನ ವಾರ್ಷಿಕ ಆಯ–ವ್ಯಯ ಅನುಮೋದನೆ ಹಾಗೂ ಸಂಘದ ಕಾರ್ಯ ಚಟುವಟಿಕೆ ಸದಸ್ಯರ ಸಹಕಾರದಲ್ಲಿ ಸಂಘವು ಬೆಳವಣಿಗೆ ಹೊಂದುತ್ತಿದೆ ಎಂದರು.

ಮುಖ್ಯಅತಿಥಿಯಾಗಿ ಭಾಗವಹಿಸಿದ್ದ ಭೂದಾಖಲೆಗಳ ಉಪನಿರ್ದೇಶಕ ಎ.ಪಿ.ವಿಜಯಕುಮಾರ ಮಾತನಾಡಿ, ಸಹಕಾರ ರಂಗದಲ್ಲಿ ಆರ್ಥಿಕ ಸಬಲತೆ, ಸಕಾಲದಲ್ಲಿ ಸಾಲ ಮರು ಪಾವತಿ, ವಿವಿಧ ಆರ್ಥಿಕ ಯೋಜನೆಗಳ ಕುರಿತು ತಿಳಿಸಿದರು. ಜಿಲ್ಲಾ ನೋಂದಣಿ ಅಧಿಕಾರಿ ಮಹಾಂತೇಶ ಪಟಾತರ ಸಂಘದ ಕಾರ್ಯಗಳ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

ಇದೇ ವೇಳೆ ಇಲಾಖೆಯ ನಿವೃತ್ತ ಹಾಗೂ ಬಡ್ತಿ ನೌಕರರಿಗೆ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸತ್ಕಾರ ಜರುಗಿತು.ಪ್ರಾಸ್ತಾವಿಕವಾಗಿ ಆರ್.ಸಿ.ಪತ್ತಾರ ಮಾತನಾಡಿದರು.ಸಂಘದ ಕಾರ್ಯದರ್ಶಿ ಸಿ.ಎಂ. ಕರಜಗಿ ಜಮಾಖರ್ಚು ವರದಿ ವಾಚಿಸಿದರು. ಶಿಲ್ಪಾ ತೇಲಿ ನಿರೂಪಿಸಿದರು.

ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಡಿ.ಸಿ.ರವೀಂದ್ರ ರೆಡ್ಡಿ, ಪಿ.ಜಿ.ಸತ್ತೀಗೇರಿ, ದತ್ತಾ ಪಾಟೀಲ,

ಆಡಳಿತ ಮಂಡಳಿಯ ಪದಾಧಿಕಾರಿಗಳು, ಸದಸ್ಯರು ಸಿಬ್ಬಂದಿ ಉಪಸ್ಥಿತರಿದ್ದರು.

## ಶಾಲಾ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ




ಗೋಕಾಕ: ವಿದ್ಯಾರ್ಥಿಗಳೊಂದಿಗೆ ಇನ್ನರ್ ವ್ಹೀಲ್ ಸಂಸ್ಥೆಯ ಸದಸ್ಯರು.

**ಗೋಕಾಕ:** ವಿದ್ಯಾರ್ಥಿಗಳಿಗೆ ಇನ್ನರ್ ವ್ಹೀಲ್ ಸಂಸ್ಥೆ ಹಲವಾರು ಸೌಲಭ್ಯಗಳನ್ನು ಕಲ್ಪಿಸಿ ಅವರ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದೆ ಎಂದು ಇನ್ನರ್ ವ್ಹೀಲ್ ಸಂಸ್ಥೆಯ ಜಿಲ್ಲಾ ಚೇರಮನ ಉತ್ಕರ್ಷ ಪಾಟೀಲ ಹೇಳಿದರು.

ಅವರು ಮಂಗಳವಾರದಂದು ಇಲ್ಲಿಯ ಮಾರ್ಕಂಡೇಯ ನಗರದ ಸರಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹ್ಯಾಪಿ ಶಾಲೆ ಕಾರ್ಯಕ್ರಮದಡಿ ನೋಟ್ ಬುಕ್, ಗ್ರೀನ್ ಬೋರ್ಡ, ಊಟದ ತಟ್ಟೆಗಳನ್ನು ವಿತರಿಸಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳು ಅವಕಾಶ ಹಾಗೂ ಸೌಲಭ್ಯಗಳ ಸದುಪಯೋಗದಿಂದ ಪ್ರತಿಭಾನ್ವಿತರಾಗಿರಿ ದೇಶದ ಭಾವಿ ಪ್ರಜೆಗಳಾಗಿರುವ ನೀವು ತಂದೆ, ತಾಯಿ, ಗುರು ಹಿರಿಯರನ್ನು ಗೌರವಿಸಿ ನಾಡಿಗೆ ಕೀರ್ತಿ ತರುವಂತಹ ಉತ್ತಮ ನಾಗರಿಕರಾಗಿರಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಇನ್ನರ್ ವ್ಹೀಲ್ ಸಂಸ್ಥೆಯ ಅಧ್ಯಕ್ಷೆ ಅನುಪಾ ಕೌಶಿಕ, ಕಾರ್ಯದರ್ಶಿ ಗಿರಿಜಾ ಮುನ್ನೋಳಿಮಠ, ಖಜಾಂಚಿ ಸುಮನ ಕಲ್ಯಾಣಶೆಟ್ಟಿ, ಸೀಮಾ ಕಲ್ಯಾಣಶೆಟ್ಟಿ, ವಿದ್ಯಾ ಮಗದುಮ, ವಿದ್ಯಾ ಗುಲ್ಲ, ಮುಖ್ಯೋಪಾಧ್ಯಾಯ ಎಮ್ ಎಮ್ ಅಳಗುಂಡಿ ಸೇರಿದಂತೆ ಅನೇಕರು ಇದ್ದರು.

## ಹಿರಿಯ ನಾಗರೀಕರಿಗಾಗಿ ಸಾಂಸ್ಕೃತಿಕ, ಕ್ರೀಡಾ ಸ್ಪರ್ಧೆ

**ಕಾರವಾರ:** ಪ್ರಸುತ್ತ ಸಾಲಿನ ಜಿಲ್ಲಾ ಮಟ್ಟದ ಹಿರಿಯ ನಾಗರಿಕ ದಿನಾಚರಣೆಯ ಅಂಗವಾಗಿ ಸೆ.23 ರಂದು ಬೆಳಗ್ಗೆ 9.30 ಗಂಟೆಗೆ ಶ್ರೀ ದಿವಂಗತ ಡಿ.ಜಿ ಸಾವಂತ ಸಭಾಭವನದಲ್ಲಿ ಸಾಂಸ್ಕೃತಿಕ ಸ್ಪರ್ಧೆಯನ್ನು ಮತ್ತು ಕ್ರೀಡಾ ಸ್ಪರ್ಧೆಯನ್ನು ಮಾಲಾದೇವಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಭಾಗವಹಿಸಲು ಇಚ್ಛಿಸುವ 60 ವರ್ಷ ಮೇಲ್ಪಟ್ಟ ಹಿರಿಯ ನಾಹರಿಕರು ತಮ್ಮ ವಯಸ್ಸಿನ ಗುರುತು ಚೀಟಿ/ ಆಧಾರಕಾರ್ಡಯೊಂದಿಗೆ ನೊಂದಣಿಯನ್ನು ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ:08382–200758 ನ್ನು ಸಂಪರ್ಕಿಸುವುದು ಮತ್ತು ಜಿಲ್ಲೆಯ ಎಲ್ಲಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ವಿವಿದ್ದೋದೇಶ ಪುನರ್ವಸತಿ ಕಾರ್ಯಕರ್ತರು ಅಂಕೋಲಾ/ಶಿರಸಿ ಹಾಗೂ ತಾಲೂಕಿನ ವಿವಿದ್ದೋದೇಶ ಪುನರ್ವಸತಿ ಕಾರ್ಯಕರ್ತರು ತಾಲೂಕ ಪಂಚಾಯತ್ ಕಾರವಾರ, ಕುಮಟಾ, ಹೊನ್ನಾವರ, ಭಟ್ಕಳ, ಸಿದ್ದಾಪುರ, ಯಲ್ಲಾಪುರ, ಮುಂಡಗೋಡ, ಹಳಿಯಾಳ, ಜೋಯಿಡಾ ರವರನ್ನು ಸೆ.20 ರೊಳಗಾಗಿ ವಯಸ್ಸಿನ ಗುರುತಿನ ಚೀಟಿಯೊಂದಿಗೆ ನೋಂದಣಿ ಮಾಡಲು ಸೂಚಿಸಲಾಗಿದೆ.

ಸ್ಪರ್ಧೆಯಲ್ಲಿ (ಮ್ಯೂಸಿಕಲ್ ಚೇರ್(60–70), ಬಿರುಸಿನ ನಡಿಗೆ, ಬಕೆಟ್‌ನಲ್ಲಿ ಬಾಲ್ ಎಸೆಯುವುದು (60–69 ವರ್ಷಹಾಗೂ ಮೇಲ್ಪಟ್ಟವರು ಮತ್ತು ಸಾಂಸ್ಕೃತಿಕ ಸ್ಪರ್ಧೆ ಮತ್ತು ಏಕಪಾತ್ರಾಭಿನಯ ಸ್ಪರ್ಧೆಗಳನ್ನು (60 ರಿಂದ 69 ಮತ್ತು 70 ವರ್ಷ ಮೇಲ್ಪಟ್ಟವರು) ಗಾಯನ ಸ್ಪರ್ಧೆಗೆ ಯಾವುದೇ ಮ್ಯೂಸಿಕ್, ಕರೋಕೆ ಬಳಸುವಂತಿಲ್ಲ.

ವಯೋಮಿತಿವಾರು ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕವಾಗಿ ಏರ್ಪಡಿಸಲಾಗುವುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ರಾಘವೇಂದ್ರ ಜಿ ಭಟ್ಟ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಠ್ಯಪೂರಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಉಚಿತ ಪುಸ್ತಕ ವಿತರಣಾ ಸಮಾರಂಭ

# ಶಿಕ್ಷಕ ವೃತ್ತಿ ಜಗತ್ತಿನಲ್ಲಯೇ ಅತ್ಯಂತ ಶ್ರೇಷ್ಠ

**ಸಿಂದಗಿ:** ವಿದ್ಯಾರ್ಥಿಗಳಲ್ಲಿ ಗುರಿ ಇರಬೇಕು. ಆ ಗುರಿಯನ್ನ ಇಡೇರಿಸುವ ದಿಸೆಯಲ್ಲಿ ಸತತ ಪರಿಶ್ರಮ ವಹಿಸಬೇಕು. ಶಿಕ್ಷಕ ವೃತ್ತಿ ಜಗತ್ತಿನಲ್ಲಯೇ ಅತ್ಯಂತ ಶ್ರೇಷ್ಠ ಹುದ್ದೆಯಾಗಿದೆ. ಎಂದು ವಿಜಯಪುರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮವಿವಿ ಕುಲಸಚಿವ ಶಂಕರಗೌಡ ಎಸ್.ಸೋಮನಾಳ ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಪದವಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಪಠ್ಯಪೂರಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಉಚಿತ ಪುಸ್ತಕ ವಿತರಣಾ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಸಿ ಮಾತನಾಡಿದ ಅವರು, ಪ್ರಸ್ತುತ ದಿನಮಾನಗಳಲ್ಲಿ ವಿದ್ಯಾದನಕ್ಕಿಂತ ಸಂಸ್ಕಾರ ಜ್ಞಾನ ಬಹಳ ಮುಖ್ಯವಾಗಿದೆ. ಶಿಸ್ತು ಎಂಬುದು ಜೀವನದ ಅಡಿಗಲ್ಲು. ಹಾಗಾಗಿ ವಿದ್ಯಾರ್ಥಿಗಳಿಗೆ ಶಿಸ್ತು, ಸಹನೆ ತುಂಬಾ ಮುಖ್ಯ. ವಿದ್ಯಾರ್ಥಿಗಳು ಜೀವನದಲ್ಲಿ ತಮ್ಮ ಗುರಿಯನ್ನು ತಲುಪಬೇಕಾದರೆ ಮೊಬೈಲ್‌ಗಳಿಂದ ದೂರವಿದ್ದು, ನಿರಂತರ ಓದುವ ಹವ್ಯಾಸ ಬೆಳೆಸಿಕೊಂಡರೆ ಗುರಿ ಮುಟ್ಟಲು ಸಾಧ್ಯ. ಆದಷ್ಟು ಮಕ್ಕಳು ಪತ್ರಿಕೆಗಳನ್ನು ಓದುವ ಹವ್ಯಾಸಗಳನ್ನು ಬೆಳಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ವೇಳೆ ಕಾರ್ಯಕ್ರಮವನ್ನು ಉದ್ಘಾಟಿಸಿದ ಸಂಸ್ಥೆಯ ಚೇರಮನ್ನರು ಹಾಗೂ ಸಾರಂಗಮಠದ ಪೀಠಾಧಿಪತಿ ಡಾ.ಪ್ರಭುಸಾರಂಗದೇವ



ಶಿವಾಚಾರ್ಯರು ಮಾತನಾಡಿ, ಹೆಣ್ಣು ಮಕ್ಕಳು ಎಲ್ಲರೂ ಅಧ್ಯಯನದೆಡೆಗೆ ಗಮನ ಹರಿಸಬೇಕು. ಇಂದಿನ ಕಾರ್ಯಕ್ರಮದ ಮುಖ್ಯ ಅತಿಥಿಗಳ ಮಾತುಗಳು ಬದುಕು ಕಟ್ಟಿಕಳ್ಳುವ ನುಡುಗಳಿದ್ದವು. ಈ ಕಾರ್ಯಕ್ರಮ ಐತಿಹಾಸಿಕ ಕಾರ್ಯಕ್ರಮವಾಗಿದೆ. ಮಕ್ಕಳು ಓದುವ ಹವ್ಯಾಸ ಬೆಳಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಸಾನಿಧ್ಯ ವಹಿಸಿದ ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಆಶೀರ್ಚಜನ ನೀಡಿದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಎಸ್.ಎಂ.ಪೂಜಾರಿ ವಹಿಸಿಕೊಂಡಿದ್ದರು. ವೇದಿಕೆಯ ಮೇಲೆ ಸಂಸ್ಥೆಯ ಸಹ ಕಾರ್ಯದರ್ಶಿ ಅಶೋಕ ವಾರದ, ನಿವೃತ್ತ ದೈಹಿಕ ಉಪನ್ಯಾಸಕ, ಸಾಹಿತಿ ಎಂಜೆಎಫ್ ಲಾಯನ್ ಕೆ.ಹೆಚ್.ಸೋಮಾಪೂರ, ವಿದ್ಯಾರ್ಥಿ ಒಕ್ಕೂಟ ಕಾರ್ಯಾಧ್ಯಕ್ಷೆ ಜಿ.ವಿ.ಪಾಟೀಲ, ಪ್ರಧಾನ ಕಾರ್ಯದರ್ಶಿ ಸಂಗಮ್ಮ ಪೂಜಾರಿ ಇದ್ದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಎಂಜೆಎಫ್ ಲಾಯನ್ ಕೆ.ಹೆಚ್.ಸೋಮಾಪುರ ಅವರು ರಚಿಸಿದ 100 ಕೃತಿಗಳನ್ನು ಉಚಿತವಾಗಿ ವಿತರಣೆ ಮಾಡಿದರು. ಕರಾಅಮವಿವಿ ಕುಲಸಚಿವರಾದ ಶಂಕರಗೌಡ ಸೋಮನಾಳ ಅವರು ಸ್ಪರ್ಧಾತ್ಮಕಕ್ಕೆ ಸಂಬಂಧಿಸಿದ ಅನೇಕ ಪ್ರಶ್ನೆಗಳನ್ನು ಕೇಳುವ ಮೂಲಕ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸಿದರು.

ಈ ವೇಳೆ ಮಹಿಳಾ ಪುಪೂ ಕಾಲೇಜಿನ ನಿವೃತ್ತ ಪ್ರಾಚಾರ್ಯ ಎಮ್.ಎಸ್. ಹೈಯಾಳಕರ, ಪ್ರಾಚಾರ್ಯ ವಿ.ಡಿ.ಪಾಟೀಲ, ಮಹಾಂತೇಶ ನೂಲಾನವರ, ಭೀಮನಗೌಡ ಸಿಂಗನಳ್ಳಿ, ಡಾ.ರವಿ ಗೋಲಾ, ವಿಶ್ವನಾಥ ನಂದಿಕೋಲ, ಮಹಾವಿದ್ಯಾಲಯದ ಸಿಬ್ಬಂದಿಗಳಾದ ನಿಲಮ್ಮ ಬಿರಾದಾರ, ಭಾಗ್ಯಶ್ರೀ ನಂದಿಮಠ, ಭಾಗ್ಯ ಬಬಲೇಶ್ವರ, ಸರೋಜಿನಿ ಹಿರೇಮಠ, ಎಸ್. ಎಸ್.ಕಲಶೆಟ್ಟಿ, ಎಸ್.ಸಿ.ದುದ್ದಗಿ, ಮಂಗಳಾ ಈಳಗೇರ, ಡಿ.ಎಮ್.ಪಾಟೀಲ್, ಮಮತಾ ಹರನಾಳ, ಶಿವಶಂಕರ ಕುಂಬಾರ ಬಸು, ಉಮೇಶ ಪೂಜೇರಿ, ಅನಿಲಕುಮಾರ ರಜಪೂತ, ಗಿರೀಶ ಕುಲಕರ್ಣಿ, ಮುರ್ತುಬಿಬೇಗಂ ಬಿರಾದಾರ, ಹೇಮಾ ಹಿರೇಮಠ, ವಿಜಯಲಕ್ಷ್ಮೀ ಭಜಂತ್ರಿ, ಮತ್ತು ಮುದ್ದು ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಉಪನ್ಯಾಸಕ ಜಿ.ಎ.ನಂದಿಮಠ ಸ್ವಾಗತಿಸಿದರು. ಕಾರ್ಯಾಧ್ಯಕ್ಷೆ ಜಿ.ವಿ.ಪಾಟೀಲ ನೂತನ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ವಿದ್ಯಾರ್ಥಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಸಂಗಮ ಪೂಜಾರಿ ವಂದಿಸಿದರು.

## ಸೈಕ್ಲಿಂಗ್ ಕ್ರೀಡಾಪಟುಗಳ ಗಮನಕ್ಕೆ

**ಬೆಳಗಾವಿ:** ಮೈಸೂರಿನಲ್ಲಿ ಜರುಗುವ 2025–26ನೇ ಸಾಲಿನ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದ ಸೈಕ್ಲಿಂಗ್ ಸರ್ಧೆಯಲ್ಲಿ ಭಾಗವಹಿಸಲು ಬೆಳಗಾವಿ ಜಿಲ್ಲೆಯಿಂದ ಪುರುಷ ಮತ್ತು ಮಹಿಳಾ ಸೈಕ್ಲಿಂಗ್ ಕ್ರೀಡಾಪಟುಗಳನ್ನು ಜಿಲ್ಲಾ ಮಟ್ಟದಲ್ಲಿ ಆಯ್ಕೆ ಮಾಡಿ ಕಳುಹಿಸಬೇಕಾಗಿರುವುದರಿಂದ ಸೆಪ್ಟಂಬರ, 18, 2025 ರಂದು ಬೆಳಗಾವಿ ಜಿಲ್ಲಾ ಮಟ್ಟದ ಸೈಕ್ಲಿಂಗ್ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲು ತೀರ್ಮಾನಿಸಲಾಗಿರುತ್ತದೆ. ಭಾಗವಹಿಸುವ ಬೆಳಗಾವಿ ಜಿಲ್ಲೆಯ ಆಸಕ್ತ ಸೈಕ್ಲಿಂಗ್ ಕ್ರೀಡಾಪಟುಗಳು ಸೆಪ್ಟಂಬರ್, 18, 2025 ರಂದು ಬೆಳಿಗ್ಗೆ 6 ಗಂಟೆಗೆ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ. 0831–2474101 ಅಥವಾ 8748038494 ಗೆ ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗೋಕಾಕ: ತಾಲೂಕಿನ ಕಡಬಗಟ್ಟಿ ಗ್ರಾಮದಲ್ಲಿ ಬಯಲು ಸೀಮೆ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ 25ಲಕ್ಷ ರೂಗಳ ವೆಚ್ಚದ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ಪೂಜೆ ನೆರವೇರಿಸಿ ಚಾಲನೆ ನೀಡಿದರು. ಮುಖಂಡರಾದ ಸದಾನಂದ ಕಲಾಲ, ಗುತ್ತಿಗೇದಾರ ಶಿವಾನಂದ ಪೂಜೇರಿ, ಗ್ರಾಪಂ ಸದಸ್ಯರು, ಜಿಪಂ ಇಲಾಖೆ ಅಧಿಕಾರಿಗಳು ಇದ್ದರು.**

# ರೇಶನ್ ಕಾರ್ಡಗೆ ಅರ್ಹರಿರುವ ಫಲಾನುಭವಿಗಳ ಸರ್ವೆ ನಡೆಸಿ




**ಗದಗ:** ಗದಗ ತಾಲೂಕಿನಲ್ಲಿ ರೇಶನ್ ಕಾರ್ಡಗೆ ಅರ್ಹರಿರುವ ಫಲಾನುಭವಿಗಳ ಸರ್ವೆ ಕಾರ್ಯವನ್ನು ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಗ್ಯಾರಂಟಿ ಸಮಿತಿ ಸದಸ್ಯರು ಜಂಟಿಯಾಗಿ ನಡೆಸುವಂತೆ ತಾಲೂಕಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ವಿಸಿ ಹಾಲ್ ದಲ್ಲಿ ಸೋಮವಾರ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರದಿಂದ ಜಾರಿಯಾಗಿರುವ ಪಂಚಗ್ಯಾರಂಟಿ ಯೋಜನೆಗಳು ಬಡಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸುವ ಉದ್ದೇಶ ಹೊಂದಿದ್ದು ಈ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ಒದಗಿಸುವಲ್ಲಿ ವಿಳಂಬವಾಗಬಾರದು. ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ದೊರಕುವಂತಾಗಬೇಕು. ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಶೇ 100 ರಷ್ಟು ಸಾಧಿಸಲು ಸಂಬಂಧಿತ ಅಧಿಕಾರಿಗಳು ಆಸಕ್ತಿಯಿಂದ ಕಾರ್ಯ ನಿರ್ವಹಿಸಬೇಕು ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ಪ್ರಾಮಾಣಿಕತನವಿರಬೇಕು. ಪಾರದರ್ಶಕ ಆಡಳಿತ ನಡೆಸಿ ಅರ್ಹರು ಇದರ ಲಾಭ ಪಡೆಯುವಂತಾಗಬೇಕು. ಪಂಚಗ್ಯಾರಂಟಿ ಯೋಜನೆಯ ಮಹತ್ವವನ್ನು ಅರ್ಥೈಸಿಕೊಳ್ಳುವುದು ಹಾಗೂ ಅವುಗಳ ಪೂರ್ಣ ಪ್ರಮಾಣದ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ಸಂಬಂಧಿತ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಅಶೋಕ ಮಂದಾಲಿ ಹೇಳಿದರು.

ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ ಮಾತನಾಡಿ ಪಂಚಗ್ಯಾರಂಟಿ ಯೋಜನೆ ಲಭಿಸುವಲ್ಲಿ ಫಲಾನುಭವಿಗಳಿಗೆ ಯಾವುದೇ ಅಡಚಣೆಗಳು ಉಂಟಾದರೆ ಅಂತಹ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಆದ್ದರಿಂದ ಪ್ರತಿ ಮೂರು ಪಂಚಾಯಿತಿ ಸೇರಿಸಿ ಜನಸ್ಪಂದನ ಸಭೆ ಮಾಡಲಾಗುವುದು ಎಂದು ಸಭೆಯ ಗಮನಕ್ಕೆ ತಂದರು. ಗ್ರಾಮೀಣ ಭಾಗದ ಅಧಿಕಾರಿಗಳು ಪಿಡಿಓ ಸೇರಿದಂತೆ ಸ್ಥಳದಲ್ಲಿಯೇ ಸಮಸ್ಯೆಗೆ ಸ್ಪಂದಿಸುವಂತಾಗಬೇಕು. ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ಜಿಲ್ಲೆಯ ವಿವಿಧ ಬಸ್ ನಿಲ್ದಾಣಗಳಿಗೆ ವಾರಕ್ಕೊಮ್ಮೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯ ಸೇರಿದಂತೆ ಸ್ವಚ್ಛತೆಯ ಕುರಿತು ನಿಗಾ ವಹಿಸಬೇಕು ಎಂದು ಸೂಚಿಸಿದರು.

ಪಂಚಗ್ಯಾರಂಟಿ ಯೋಜನೆಯ ಗದಗ ತಾಲೂಕಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಈ ಕೆಳಗಿನಂತೆ ಸಭೆಗೆ ಮಾಹಿತಿ ಒದಗಿಸಿದರು. ಗೃಹಲಕ್ಷ್ಮಿ ಯೋಜನೆಯಡಿ ಜೂನ್ 2025 ರವರೆಗೆ ಗದಗ ತಾಲೂಕಿನಲ್ಲಿ ಯಜಮಾನಿ ಹೆಸರಿನಲ್ಲಿ ಒಟ್ಟು 81959 ಜನರು ಪಡಿತರ ಹೊಂದಿರುತ್ತಾರೆ. 80911 ಅರ್ಜಿಗಳು ನೊಂದಣಿಯಾಗಿದ್ದು ಅದರಲ್ಲಿ 80447 ಅರ್ಜಿಗಳಿಗೆ ಮಂಜೂರಾತಿ ದೊರೆತಿದೆ. ಶೇ 99.42 ರಷ್ಟು ಪ್ರಗತಿ ಸಾಧಿಸಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಗದಗ– ಬೆಟಗೇರಿ ಯಲ್ಲಿ ( ಐಆರ್‌ಎ) ಅಗಸ್ಟ್ 2025 ರ ಮಾಹೆಯಲ್ಲಿ ರಾಜ್ಯ ಸರಕಾರಿ ಅನ್ನಭಾಗ್ಯ ಹಂಚಿಕೆ ಯೋಜನೆಯಡಿ ಒಟ್ಟು 33558 ಪಡಿತರ ಕಾರ್ಡುಗಳಿದ್ದು ( ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುಗಳು) 5536.05 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ. ಅಗಸ್ಟ್ –2025 ಮಾಹೆಯಲ್ಲಿ ( ಕೇಂದ್ರ ಸರ್ಕಾರ ) ಎನ್‌ಎಫ್‌ಎಸ್‌ಎ ಅಕ್ಕಿ ಹಂಚಿಕೆಯಡಿ ಒಟ್ಟು 33558 ಕಾರ್ಡುಗಳಿದ್ದು (ಅಂತ್ಯೋದಯ ಮತ್ತು ಬಿಪಿಎಲ್ ಕಾರ್ಡುಗಳೂ) 2326.76 ಕ್ವಿಂಟಾಲ್ ಅಕ್ಕಿ ಹಂಚಿಕೆ ಮಾಡಲಾಗಿದೆ.

ಗೃಹಜ್ಯೋತಿ ಯೋಜನೆಯಡಿ 31–8–2025 ರವರೆಗೆ ಗದಗ ಶಹರ ಉಪವಿಭಾಗದಲ್ಲಿ 46482 ಸ್ಥಾವರಗಳು ಅರ್ಹವಾಗಿದ್ದು, 46267 ಸ್ಥಾವರಗಳ ನೋಂದಣಿಯಾಗಿದ್ದು ಶೇ 99.54 ಪ್ರಗತಿಯಾಗಿದೆ. ದಿ: 31–8–2025 ರವರೆಗೆ ಗೃಹ ಜ್ಯೋತಿ ಯೋಜನೆಯಡಿ ಗದಗ ಗ್ರಾಮೀಣ ಉಪವಿಭಾಗದಲ್ಲಿ 53268 ಸ್ಥಾವರಗಳು ಅರ್ಹವಾಗಿದ್ದು 53070 ಸ್ಥಾವರಗಳ ನೊಂದಣಿಯಾಗಿವೆ. ಶೇ 99.63 ಪ್ರಗತಿಯಾಗಿದೆ. ಯುವನಿಧಿ ಯೋಜನೆಯಡಿ ಗದಗ ತಾಲೂಕಿನಲ್ಲಿ 31–8–2025 ರವರೆಗೆ 2231 ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ಅದರಲ್ಲಿ 1761 ಅರ್ಹ ಫಲಾನುಭವಿಗಳಿಗೆ ಡಿ.ಬಿ.ಟಿ ಮೂಲಕ ಹಣ ವರ್ಗಾವಣೆಯಾಗಿರುತ್ತದೆ ಎಂದು ಸಂಬಂಧಿತ ಅಧಿಕಾರಿಗಳು ಮಾಹಿತಿ ಒದಗಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿ ಉಪಾಧ್ಯಕ್ಷೆ ನಿಲಮ್ಮ ಬೋಳನವರ, ಸದಸ್ಯರುಗಳಾದ ಈರಣ್ಣ ಹುನಸಿಕಟ್ಟಿ, ಶರೀಫ ಬೆಳೆಯಲಿ, ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ದಯಾನಂದ ಪವಾರ, ಶಂಭು ಕಾಳೆ, ಸಾವಿತ್ರಿ ಹೂಗಾರ, ಸಂಗು ಕೆರಕಲಕಟ್ಟಿ, ಎನ್.ಬಿ.ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿಕಾಯ್ಕರ, ದೇವರಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ ಚಿಂಚಲಿ, ಗಣೇಶ ಸಿಂಗ್ ಮಿಟಾಡೆ, ಮಲ್ಲಪ್ಪ ಎಚ್ ಬಾರಕೇರ , ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಹಾಗೂ ಪಂಚ ಗ್ಯಾರಂಟಿ ಯೋಜನೆಗೆ ಸಂಬಂಧಿತ ಅಧಿಕಾರಿಗಳು ಹಾಜರಿದ್ದರು.

# ವಿದ್ಯಾರ್ಥಿಗಳು ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳಿ

**ಮೂಡಲಗಿ:** ಇಂದಿನ ದಿನಮಾನಗಳಲ್ಲಿ ವಿದ್ಯಾರ್ಥಿಗಳು ವ್ಯಕ್ತಿತ್ವ ಮತ್ತು ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳುವುದು ಮುಂದಿನ ಜೀವನಕ್ಕೆ ದಾರಿ ದೀಪವಾಗಿದೆ ಎಂದು ಬೆಳಗಾವಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಹನುಮಂತರಾಯ ಹೇಳಿದರು,

ತಾಲೂಕಿನ ಕಲ್ಲೋಳಿಯ ಮಂಗಳವಾರ ಶ್ರೀ ಬಸವೇಶ್ವರ ಶಿಕ್ಷಣ ಸಂಸ್ಥೆ ಹಾಗೂ ಕರ್ನಾಟಕ ಲೋಕಾಯುಕ್ತ ಲೋಕಪಾಲ ಸಂಯುಕ್ತ ಆಶ್ರಯದಲ್ಲಿ ಜರುಗಿದ ಜಾಗೃತಿ ಅರಿವು ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸಂಸ್ಥೆಯ ಕಾರ್ಯದರ್ಶಿ ಡಾ ಬೋಜರಾಜ ಬೆಳಕೂಡ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಭ್ರಷ್ಟಾಚಾರ ಅನ್ಯಾಯಗಳು ಸರ್ಕಾರಗಳಲ್ಲಿ ಇಲಾಖೆಗಳಲ್ಲಿ ನಡೆದಿದ್ದು ಇದನ್ನು ತಡೆಯುವ ನಿಟ್ಟಿನಲ್ಲಿ ವಿದ್ಯಾರ್ಥಿಗಳ ವಿದ್ಯಾರ್ಥಿನಿಯರ ಪಾತ್ರ ಬಹಳ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ಲೋಕಾಯುಕ್ತ ಬೆಳಗಾವಿಯ ಪೊಲೀಸ್ ಉಪಾಧ್ಯಕ್ಷಕ ಬಿ ಎಸ್ ಪಾಟೀಲರು ವಿದ್ಯಾರ್ಥಿಗಳಿಗೆ ಜಾಗೃತಿ ಅರಿವಿನ ಪ್ರಮಾಣ ವಚನ ಬೋಧಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ರಮೇಶ್ ಬೆಳಕೂಡ ವಹಿಸಿ ಮಾತನಾಡಿದರು,

ವೇದಿಕೆ ಮೇಲೆ ಮುಖ್ಯ ಅತಿಥಿಗಳಾದ ಕರ್ನಾಟಕ ಲೋಕಾಯುಕ್ತ ಬೆಳಗಾವಿಯ ಮಹಿಳಾ ಪೊಲೀಸ್ ಉಪಾಧ್ಯಕ್ಷಕಿ ಪುಷ್ಪಲತಾ ಎನ್, ಬೆಳಗಾವಿ ಜಿಲ್ಲಾ ಎನ್.ಎಸ್.ಎಸ್ ಪ್ರಭಾರಿ ಸಂಯೋಜನಾಧಿಕಾರಿ ಪ್ರೋ ಪ್ರಕಾಶ್ ಕುರೂಪಿ ಹಾಗೂ ನೂತನ ಕ್ಷೇತ್ರಶಿಕ್ಷಣಾಧಿಕಾರಿ ಬಿಬಿ ಹಿರೇಮಠ್ ಮತ್ತು ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿ ಸಿಎಂ ಮುಗಳಕೋಡ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಕರ್ನಾಟಕ ಲೋಕಾಯುಕ್ತ ಬೆಳಗಾವಿಯ ಎಲ್ಲಾ ಅಧಿಕಾರಿಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ಸಂಸ್ಥೆಯ ವತಿಯಿಂದ ಸನ್ಮಾನಿಸಿದರು,

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್ ಎಸ್ ಹೂಗಾರ್ ಸ್ವಾಗತಿಸಿದರು, ಆಡಳಿತ ಅಧಿಕಾರಿ ಪ್ರಕಾಶ್ ಗರಗಟ್ಟಿ ಪ್ರಾಸ್ತಾವಿಕ ಮಾತನಾಡಿದರು, ಉಪನ್ಯಾಸಕಿ ಉಮಾ ನೀಲನ್ನವರ್ ಕಾರ್ಯನಿರ್ವಹಿಸಿದರು. ಮುಖ್ಯ ಶಿಕ್ಷಕಿ ರಮಿಜ ಅಣ್ಣಿಗೇರಿ ವಂದಿಸಿದರು.



# ಛಾಯಾಚಿತ್ರಗಳು ಇತಿಹಾಸ ಸಾಕ್ಷಿಗಳು



**ಜಮಖಂಡಿ:** ಛಾಯಾಚಿತ್ರ ತೆಗೆಯುವದು ವಿಶಿಷ್ಟ ಕಲೆಯಾಗಿದ್ದು, ಛಾಯಾಚಿತ್ರಗಳು ಇತಿಹಾಸದ ಸಾಕ್ಷಿಗಳಾಗಿವೆ. ಬಹುತೇಕ ಎಲ್ಲ ಕ್ಷೇತ್ರದಲ್ಲಿ ಛಾಯಾಚಿತ್ರಗಳಿಗೆ ವಿಶೇಷವಾದ ಮಹತ್ವವಿದೆ ಎಂದು ಶಾಸಕ ಜಗದೀಶ ಗುಡಗುಂಟಿ ಹೇಳಿದರು.

ನಗರದ ಬಸವಭವನದಲ್ಲಿ ತಾಲೂಕ ಛಾಯಾಚಿತ್ರಗ್ರಾಹಕರ ಸಂಘದ ನೂತನ ಕಚೇರಿ ಉದ್ಘಾಟನೆ ಹಾಗೂ 14ನೇ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿ, ನೈಸರ್ಗಿಕ ವಿಕೋಪಗಳು, ಯುದ್ಧ, ದಂಗೆ ಸಂದರ್ಭದಲ್ಲಿ ಜೀವವನ್ನು ಲೆಕ್ಕಿಸದೇ ಛಾಯಾಗ್ರಾಹಕರು ಸಲ್ಲಿಸುವ ಸೇವೆ ಹೆಮ್ಮೆ ಪಡುವಂತಹದ್ದಾಗಿದೆ ಎಂದರು.

ಸರ್ಕಾರ ಛಾಯಾಗ್ರಾಹಕರ ಸಮಸ್ಯೆಗಳ ಕುರಿತು ಗಮನ ಹರಿಸಸುವ ಮೂಲಕ ಅಗತ್ಯ ಸೌಲಭ್ಯಗಳನ್ನು ಒದಗಿಸಿ ಕೊಡಬೇಕಾಗಿದೆ. ಸಂಘಕ್ಕೆ ವಯಕ್ತಿಕವಾಗಿ 1 ಲಕ್ಷ ಧನ ಸಹಾಯ ನೀಡುವ ಮೂಲಕ ಸಂಘವು ಹೆಮ್ಮರವಾಗಿ ಬೆಳೆಯಲಿ. ತಾಲೂಕ ಛಾಯಾಚಿತ್ರಗ್ರಾಹಕರ ಸಂಘದ ಎಲ್ಲ ರೀತಿ ಸಹಾಯ ಸಹಕಾರ ನೀಡುವದಾಗಿ ಹೇಳಿದರು.

ಮಾಜಿಶಾಸಕ ಆನಂದ ನ್ಯಾಮಗೌಡ ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿ, ಛಾಯಾಚಿತ್ರಗಳು ಹಲವು ಬಾರಿ ಸಾಕ್ಷಿಗಳಾಗುತ್ತವೆ. ಹತ್ತು ಹಲವು ಮಾತುಗಳಿಗಿಂತ ಒಂದು ಚಿತ್ರ ಎಲ್ಲವನ್ನು ಹೇಳಿ ಬಿಡುತ್ತದೆ. ಮನಸ್ಸಿನ ಭಾವನೆ ವ್ಯಕ್ತ ಪಡಿಸುತ್ತವೆ. ಮಧುರ ಕ್ಷಣಗಳು, ದುಖದ ಸನ್ನಿವೇಶಗಳು, ಕೋಪ, ವಿನಂಮ್ರತೆ ಹೀಗೆ ಜೀವನದ ಎಲ್ಲ ಕ್ಷಣಗಳಲ್ಲಿ ಛಾಯಾಚಿತ್ರಗಳು ಸಾಕ್ಷಿಯಾಗಿವೆ. ಸಂಘದ ಅಭಿವೃದ್ಧಿಗೆ ಸಂಪೂರ್ಣ ಸಹಕರಿಸುವದಾಗಿ ಹೇಳಿದರು.

ರಾಜ್ಯಾಧ್ಯಕ್ಷ ಲಕ್ಷ್ಮೀನಾರಾಯಣಭಟ್ ಮಾತನಾಡಿ, ಎಲ್ಲ ಕ್ಷೇತ್ರಗಳು ಮಹತ್ವದ್ದಾಗಿದ್ದು ನಾವು ಪ್ರಾಮಾಣಿಕತೆಯಿಂದ ಮಾಡುವ ಕೆಲಸಕ್ಕೆ ಶ್ರೇಯಸ್ಸು ಸಿಕ್ಕೇ ಸಿಕ್ಕುತ್ತದೆ. ಛಾಯಾಗ್ರಾಹಕರು ದುಶ್ಚಟಗಳಿಂದ ದೂರವಿರಬೇಕು. ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಹೆಚ್ಚಿನ ಆದಾಯ ಪಡೆದು ಆಸಕ್ತಿ ಮತ್ತು ಪ್ರೀತಿಯಿಂದ ಕೆಲಸ ಮಾಡಬೇಕೆಂದರು.

ಸಾನಿಧ್ಯ ವಹಿಸಿದ್ದ ಓಲೇಮಠದ ಆನಂದ ದೇವರು ಮಾತನಾಡಿ, ಜೀವನದ ಪ್ರತಿ ಹಂತದಲ್ಲಿ ಛಾಯಾಚಿತ್ರಗಳು ಅವಶ್ಯವಾಗಿವೆ. ಎಲ್ಲ ಕಾರ್ಯಕ್ರಮದ ಯಶಸ್ಸಿಗೆ ಚಿತ್ರಗಳು ಅವಶ್ಯಕವಾಗಿದೆ. ಪೊಟೋ ತೆಗೆಸಿಕೊಳ್ಳಲು ಬರುವ ಪ್ರತಿ ಗಿರಾಕಿಗೆ ಸ್ಮಲ್ ಪ್ಲೀಸ್ ಎಂದು ಹೇಳುವ ವೃತ್ತಿ ಹೆಮ್ಮೆ ಪಡುವಂತಹದು. ಎಲ್ಲರನ್ನು ನಗುನಗುತ್ತ ಬದುಕಲು ಪ್ರೇರೆಪಿಸುವದು ಒಂದು ಸಮಾಜ ಸೇವೆ ಇದ್ದಂತೆ. ಜೀವನದಲ್ಲಿ ಎಲ್ಲರೂ ನಗುತ್ತಿರಲಿಲೆಂಬ ಭಾವ ಅದರಲ್ಲಿ ಅಡಕ ಆಗಿದೆ ಎಂದರು. ತಾಲೂಕ ಛಾಯಾಚಿತ್ರಗ್ರಾಹಕರ ಸಂಘದ ಈರನಗೌಡ ಪಾಟೀಲ, ರಮೇಶ ಹಲವಾಯಿ, ಹಾಶೀಂ ಜಮಖಂಡಿ, ಆನಂದ ಪುಕಾಳೆ, ಮುಜಾಯಿದ ದಿಲಾವರ, ಶ್ರೀಶೈಲ ಮಾಳಿ, ಸಂಜು ಕಬ್ಬೂರಿ, ಸುಭಾಷ ಕಾಸಿದ, ಶೇಖರ ಹರಕಂಗಿ, ರವೀಂದ್ರ ಜಂಬಗಿ, ಉಮರ ಮುಲ್ಲಾ, ಅನ್ನಪ್ಪ ಮೋಹಿತೆ, ಬಡಕಲ್ಲ ನದಾಪ, ಸಿದ್ದು ಗಡದಿ, ಪ್ರಹ್ಲಾದ ಲೋಗಾವಿ, ರಾಜು ಆಜೂರ, ಜಗದೀಶ ತೆಗ್ಗಿನ ಮಠ ಸಹಿತ ಹಲವರು ಇದ್ದರು.

# ಇಂದು ವಿದ್ಯುತ್ ವ್ಯತ್ಯಯ

**ಜಮಖಂಡಿ:** ತಾಲೂಕಿನ 110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರಗಳಾದ ತೊದಲಬಾಗಿ, ಸಾವಳಗಿ ಮತ್ತು ಗೋಠೆಯಲ್ಲಿ ತ್ರೈಮಾಸಿಕ ನಿರ್ವಹಣೆ ನಿಮಿತ್ತ ಸ.17 ರಂದು ವಿದ್ಯುತ್ ವಿತರಣಾ ಕೇಂದ್ರಗಳಿಂದ ಸಾಗುವ 33 ಮತ್ತು 11 ಕೆವಿ ವಿದ್ಯುತ್ ಮಾರ್ಗಗಳಲ್ಲಿ ಮುಂಜಾನೆ 10 ರಿಂದ ಮದ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

33 ಕೆವಿ ವಿತರಣಾ ಕೇಂದ್ರಗಳಾದ ಹಿರೇಪಡಸಲಗಿ, ಬಿದರಿ, ಜೆ.ಆರ್. ಕೆ.ಸೋಲಾರ, ಕಾಲಬೀಳಗಿ, ಹಿರೇಪಡಸಲಗಿ, ತುಂಗಳ ಎಲ್.ಐ.ಎಸ್. ಮತ್ತು 11 ಕೆವಿ ಮಾರ್ಗಗಳಾದ ಅಡಿಹುಡಿ, ತೊದಲಬಾಗಿ ನಿರಂತರ ಜ್ಯೋತಿ ಮಾರ್ಗಗಳು, ಅಡಿಹುಡಿಮಡ್ಡಿ, ಗೋಠೆ, ಅಡಿಹುಡಿ, ಕನ್ನೊಳ್ಳಿ, ಗದ್ಯಾಳ, ತೊದಲಬಾಗಿಮಡ್ಡಿ, ತೊದಲಬಾಗಿ ಕೆರಿ, ಕಾತ್ರಾಳ, ಕೆಬ್ಬಾಳಟ್ಟಿ, ಬಿದರಿ, ಗೋಠೆ ಕೆರಿ ಮತ್ತು ಕವಟಗಿ ಐಪಿ ಪೀಡರಗಳು, ಬಾಡಗಿ ಕ್ರಾಸ್, ತುಂಗಳ, ಟಕ್ಕೋಡ, ತುಬಚಿ, ಸಾವಳಗಿಮಡ್ಡಿ, ಜಂಬಗಿ ಕೆಡಿ, ಸಾವಳಗಿ, ಶುರಪಾಲಿ, ವಾಟರಸಪ್ಲಾಯ, ಕನ್ನೊಳ್ಳಿ, ಕುರಗೋಡ, ತುಂಗಳ ನಿರಂತರ ಜ್ಯೋತಿ, ಕುರಹಗೋಡ ನಿರಂತರ ಜ್ಯೋತಿ, ಟಕ್ಕಳಕಿ ನಿರಂತರ ಜ್ಯೋತಿ, ಸಾವಳಗಿ ಟೌನ್, ಟಕ್ಕಳಕಿ–1&2, ಶಿವಲಿಂಗೇಶ್ವರ ಪೀಡರಗಳು, ಗೋಠೆ ಟೌನ ನಿರಂತರ ಜ್ಯೋತಿ, ದೊಡ್ಡಕೆರೆ, ದರ್ಗಾ, ಕಾಶೀಲಿಂಗೇಶ್ವರ, ಕಲ್ಮೇಶ್ವರ, ಬಸವೇಶ್ವರ, ಕೋರವಂಜಿ ಮತ್ತು ಕೆಮ್ಮಣಮಡ್ಡಿ ಪೀಡರಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಉಪವಿಭಾಗ ಹೆಸ್ಕಾಂ ಇಲಾಖೆ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದತ್ತಾಂಶ ವಿಶ್ಲೇಷಣೆ ಕುರಿತು ಕಾರ್ಯಾಗಾರ

**ಕಾರವಾರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಸಂಶೋಧನಾ ವಿಧಾನ ಮತ್ತು ದತ್ತಾಂಶ ವಿಶ್ಲೇಷಣೆ ಕುರಿತು ಅಕ್ಟೋಬರ್ 14 ರಿಂದ 18 ರವರೆಗೆ ಐದು ದಿನಗಳ ಕಾರ್ಯಾಗಾರವನ್ನು ಅಕಾಡೆಮಿಯ ಬೆಂಗಳೂರು ಕಚೇರಿಯಲ್ಲಿ ಆಯೋಜಿಸಲಾಗಿದೆ.

ಆಸಕ್ತ ಸ್ನಾತಕೋತ್ತರ ವಿಜ್ಞಾನ, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಭಾಗವಹಿಸಬಹುದಾಗಿದ್ದು, ಅಕ್ಟೋಬರ್ 13 ರೊಳಗಾಗಿ (Google form- https://forms.gle/ UNrBg9wiBzgQBMVD6) ಮೂಲಕ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಗಾರದ ಸಂಯೋಜಕ ಶ್ರೀನಿವಾಸ ವಿ.ಕೆ ಮೊ ಸಂಖ್ಯೆ: 9620767819 ಹಾಗೂ ಅಕಾಡೆಮಿಯ ವೆಬ್‌ಸೈಟ್ https://kstacademy.in ವೀಕ್ಷಿಸಬಹುದೆಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಸರಾ ಕ್ರೀಡಾಕೂಟ: ರಾಜ್ಯಮಟ್ಟಕ್ಕೆ ಆಯ್ಕೆ




**ಕೊಪ್ಪಳ:** ಇಲ್ಲಿನ ಶ್ರೀ ಚೈತನ್ಯ ಸಮೂಹದ ಸ್ವಾಮಿ ವಿವೇಕಾನಂದ ಪ. ಪೂ. ಕಾಲೇಜಿನ ವಿದ್ಯಾರ್ಥಿಗಳು ಹಲವು ಕ್ರೀಡೆಗಳಲ್ಲಿ ಸಾಧನೆ ಮಾಡಿದ್ದು ದಸರಾ ವಿಭಾಗಮಟ್ಟದ ನೆಟ್ ಬಾಲ್ ಕ್ರೀಡಾಕೂಟದಲ್ಲಿ ಪ್ರಥಮ ಸ್ಥಾನ ಪಡೆದು ಸತತ ಎರಡನೇ ಬಾರಿಗೆ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿನಿ ಸಾಹಿತ್ಯ ಎಂ. ಗೊಂಡಬಾಳ ನಾಯಕತ್ವದಲ್ಲಿ ತಂಡ ದಸರಾ ವಿಭಾಗಮಟ್ಟದಲ್ಲಿ ಗೆಲುವು ಸಾಧಿಸಿ ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಅದೇ ರೀತಿ ದಸರಾ ತಾಲೂಕ ಮತ್ತು ಜಿಲ್ಲಾಮಟ್ಟದಲ್ಲಿ ಸಹ ಪ್ರಥಮ ಸ್ಥಾನ ಪಡೆದಿದ್ದಾರೆ. ಇನ್ನು ಇದೇ ತಂಡ ಪದವಿಪೂರ್ವ ಕಾಲೇಜು ಕ್ರೀಡಾಕೂಟದಲ್ಲಿ ಸಹ ತಾಲೂಕ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟದ ಆಯ್ಕೆಯಲ್ಲಿ ಐದು ವಿದ್ಯಾರ್ಥಿನಿಯರು ರಾಜ್ಯಮಟ್ಟಕ್ಕೆ ಆಯ್ಕೆಯಾದರು. ಅಲ್ಲದೇ ಆರು ಜನ ವಿದ್ಯಾರ್ಥಿನಿಯರು ಏರ್ ರೈಫಲ್ ಶೂಟಿಂಗ್ ಓಪನ್ ಮತ್ತು ಪೀಪ್ ಕ್ರಮವಾಗಿ ಮೊದಲ ಮೂರು ಸ್ಥಾನ ಹಾಗೂ ಸಾಹಿತ್ಯ ಎಂ. ಗೊಂಡಬಾಳ ಅವರು ಜಂಪ್ ರೋಪ್ (ಟೀಮ್) ಹಾಗೂ ಕರಾಟೆ 64+ ಕೆ.ಜಿ. ವಿಭಾದಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ತಂಡದಲ್ಲಿ ಕಾಲೇಜಿನ ಸಾಹಿತ್ಯ ಎಂ. ಗೊಂಡಬಾಳ, ಗ್ರೀಷ್ಮಾ ಮಧುಸೂದನ್ ರಡ್ಡಿ, ಸಂಜನಾ ಶ್ರೀನಿವಾಸ ಹೋಟಕರ್, ಬೀಬಿ ಬತುರ್ ಆಫ್ರೀನ್, ಮೊನಿಷಾ ಗಂಗಾಧರ್, ರಂಜಿತಾ ವೀರಭದ್ರಪ್ಪ, ಅಕ್ಷಯ ಯಾದವ್, ವೀಣಾ ವೆಂಕಟೇಶ, ಅಕ್ಷರ ಎಂ. ಗೊಂಡಬಾಳ, ಶಮಾ ಎಸ್. ಬಿಸರಳ್ಳಿ ಇದ್ದರು. ಸಾಧನೆ ಮಾಡಿದ ತಂಡಕ್ಕೆ ಕಾಲೇಜಿನ ಪ್ರಾಚಾರ್ಯ ಸತೀಶ, ನೆಟ್ ಬಾಲ್ ಅಸೋಸಿಯೇಷನ್ ಜಿಲ್ಲಾ ಕಾರ್ಯಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ ಅಭಿನಂದಿಸಿದ್ದಾರೆ. ವಿಜೇತರಿಗೆ ಯುವ ಸಬಲೀಕರಣ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ್, ತರಬೇತುದಾರರಾದ ಯತಿರಾಜ ಇತರರು ಬಹುಮಾನ ನೀಡಿದರು.

# ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

**ಕಾರವಾರ:** ಪ್ರಸಕ್ತ ಸಾಲಿನಲ್ಲಿ ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ಚರ್ಮ ಕುಶಲಕರ್ಮಿಗಳಿಗೆ ವಿವಿಧ ಯೋಜನೆಗಳಡಿ ಅರ್ಜಿಯನ್ನು ಆಹ್ವಾನಿಸಲಾದೆ.

ಚರ್ಮ ಕುಶಲಕರ್ಮಿ ಕುಟುಂಬಗಳ ಯುವಜನರಿಗೆ ಹೊಸ ತಂತ್ರಜ್ಞಾನ, ವಿನ್ಯಾಸಗಳು ಹಾಗೂ ಮಾರುಕಟ್ಟೆ ಬೇಡಿಕೆಗಳ ಬಗ್ಗೆ ದೆಹಲಿ, ತಮಿಳುನಾಡು,ಮಹಾರಾಷ್ಟ್ರ, ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ತರಬೇತಿ ಪಡೆಯಲು ಅಧ್ಯಯನ ಪ್ರವಾಸ ಯೋಜನೆ. **ಚರ್ಮಕಾರರ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ನೇರ ಸಾಲ ಯೋಜನೆ:** ಕಚ್ಚಾ ಮಾಲು ಖರೀದಿ, ಚರ್ಮೋತ್ಪನ್ನಗಳ ಉತ್ಪಾದನೆ, ರಿಪೇರಿ ಮತ್ತು ಮಾರಾಟ ಮಾಡುವ ಅಂಗಡಿ ತೆರೆಯುವುದು/ಲಘು ವಾಹನದ ಮೂಲಕ ವ್ಯಾಪಾರ ಮಾಡುವವರಿಗೆ ಇತ್ಯಾದಿ. ಘಟಕದ ವೆಚ್ಚ ರೂ.1 ಲಕ್ಷ (ರೂ.50 ಸಾವಿರ ಸಹಾಯಧನ ಮತ್ತು ರೂ.50 ಸಾವಿರ ಸಾಲ)

**ಚರ್ಮಕಾರರ ವಸತಿ ಯೋಜನೆ:** ಚರ್ಮ ಕುಶಲಕರ್ಮಿಗಳು ಖಾಲಿ ನಿವೇಶನ ಹೊಂದಿದ್ದಲ್ಲಿ ಚರ್ಮಕಾರರಿಗೆ ವಾಸಕ್ಕೆ ಮತ್ತು ಉದ್ಯೋಗ ಮುಂದುವರೆಸಲು ಅನುಕೂಲವಾಗುವಂತೆ ವಸತಿ ಕಾರ್ಯಗಾರಗಳನ್ನು ನಿರ್ಮಿಸಿಕೊಳ್ಳಲು ನಿಗಮದ ಮೂಲಕ ರೂ.2.20 ಲಕ್ಷ ಧನ ಸಹಾಯ (ಮೆ.ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಯೋಜನೆ ಜಾರಿ)

ಈ ಹಿಂದಿನ ಸಾಲಿನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಅರ್ಜಿಗಳನ್ನು https://sevasindhu.karnataka.gov.in, https://sevasindhuservices.karnataka.gov.in ಪೋರ್ಟಲ್ ಮೂಲಕ ಕರ್ನಾಟಕ ಒನ್ ಮತ್ತು ಗ್ರಾಮ ಒನ್ ಕೇಂದ್ರಗಳಲ್ಲಿ ಅರ್ಜಿಗಳನ್ನು ಸಲ್ಲಿಸಲು ಅ.8 ಕೊನೆಯ ದಿನವಾಗಿದೆ.

ಹೆಚ್ಚಿನ ವಿವರಗಳಿಗಾಗಿ ಕಲ್ಯಾಣಮಿತ್ರ ಎಕೀಕೃತ ಎಸ್.ಸಿ/ಎಸ್.ಟಿ ಸಹಾಯವಾಣಿ 9482300400 ಸಂಪರ್ಕಿಸುವಂತೆ ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತಿಯ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೀಡ್ ಬ್ಯಾಂಕ್ ಸಭೆ

**ಕಾರವಾರ:** ಜಿಲ್ಲಾ ಲೀಡ್ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆಯು ಸೆ.22 ರಂದು ಮಧ್ಯಾಹ್ನ 3 ಗಂಟೆಗೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

# ಹೂಗಾರರ ಸಮುದಾಯ ಸಂಘಟಿತಗೊಳ್ಳಲಿ



**ಸವದತ್ತಿ:** ಸಮುದಾಯ ಸಂಘಟನೆಯಾದಾಗ ಮಾತ್ರ ಬೇಡಿಕೆಗಳು ಈಡೇರುತ್ತವೆ. ಈ ನಿಟ್ಟಿನಲ್ಲಿ ಹೂಗಾರ ಸಮುದಾಯ ಸಂಘಟಿಸಿ ಶಕ್ತಿ ಪ್ರದರ್ಶಿಸಬೇಕು ಎಂದು ಸಂಸದ ಜಗದೀಶ ಶೆಟ್ಟರ ಹೇಳಿದರು.

ಪಟ್ಟಣದ ಮಾಮಾನಿ ಕಲ್ಯಾಣ ಮಂಟಪದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಹೂಗಾರ ಮಾದಯ್ಯ ಜಯಂತಿ ಹಾಗೂ ಜಿಲ್ಲಾ ಹೂಗಾರ ಸಮುದಾಯ ಸಮಾವೇಶದಲ್ಲಿ ಮಾತನಾಡಿದರು.

ಕಾಯಕದ ಮೂಲಕ ಮಾದಯ್ಯನವರು ದೇವರಾಗಿದ್ದಾರೆ. ಸಮುದಾಯದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಸಮಾಜದ ಮುನ್ನೆಲೆಗೆ ತರವ ಕೆಲಸ ಮಾಡಬೇಕು. 2ಎ ಜಾತಿ ಪ್ರಮಾಣ ಪತ್ರ ಹಂಚಿಕೆಯಲ್ಲಿ ಸಮುದಾಯದವರಿಗೆ ತೊಂದರೆ ಆದಲ್ಲಿ ನನ್ನ ಗಮನಕ್ಕೆ ತನ್ನಿ. ಸಂಬಂಧಿಸಿದವರಿಗೆ ಮಾರ್ಗದರ್ಶನ ಮಾಡುತ್ತೇನೆ. ನನ್ನ ಗೆಲುವಿನಲ್ಲಿ ಹೂಗಾರ ಸಮುದಾಯದ ಪಾತ್ರ ದೊಡ್ಡದಿದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಕಾಗವಾಡ ಗುರುದೇವಾಶ್ರಮದ ಯತೀಶ್ವರಾನಂದ ಸ್ವಾಮೀಜಿ ಮಾತನಾಡಿ, ಶಿಕ್ಷಣ. ಮತ್ತು ರಾಜಕೀಯದಿಂದ ಸಮುದಾಯ ಮುನ್ನಲೆಗೆ ಬರಲು ಸಾಧ್ಯ ಹಾಗಾಗಿ ಮಕ್ಕಳಿಗೆ ಗುಣಮಟ್ಟದಲ್ಲಿ ಶಿಕ್ಷಣ ನೀಡಬೇಕು. ರಾಜಕೀಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಸಮಾಜದ ಎಲ್ಲರೊಂದಿಗೆ ಪ್ರೀತಿಯಿಂದ ಬೇರೆಯಬೇಕು ಎಂದು ತಿಳಿಸಿದರು.

ಹರ್ತಿ ಕಾರ್ಖಾನೆ ನಿರ್ದೇಶಕ ಮೃಣಾಲ್ ಹೆಬ್ಬಾಳ್ಕರ್ ಮಾತನಾಡಿ, ಹೂಗಾರ ಸಮುದಾಯ ಅಭಿವೃದ್ಧಿಗೆ ಹೆಬ್ಬಾಳ್ಕರ್ ಕುಟುಂಬ ಸದಾ ಬದ್ಧವಾಗಿದೆ ಎಂದರು. ತಾಲೂಕು ಬಿಜೆಪಿ ಅಧ್ಯಕ್ಷ ವಿರೂಪಾಕ್ಷ ಮಾಮನಿ ಮಾತನಾಡಿ, ಸದಾ ಹೂಗಾರ ಸಮುದಾಯದ ಬೆನ್ನೆಲುಬಾಗಿ ನಿಲ್ಲುತ್ತೇನೆ ಎಂದು ತಿಳಿಸಿದರು. ಚಿಂಚೋಳ್ಳಿಯ ಆನಂದ ಆಶ್ರಮದ ಬಸವ ಶರಣರು, ತಾಲೂಕಾಧ್ಯಕ್ಷ ಶಿವಾನಂದ ಹೂಗಾರ ಮಾತನಾಡಿದರು. ಬೆಳಗ್ಗೆ ಎಪಿಎಂಸಿಯಲ್ಲಿ 300 ಕುಂಭ, ವಿವಿಧ ಕಲಾ ರೂಪಕಗಳು, ವಾದ್ಯಮೇಳದೊಂದಿಗೆ ಮಾದಯ್ಯನವರ ಭಾವಚಿತ್ರದ ಭವ್ಯ ಮೆರವಣಿಗೆ ಜರುಗಿತು. ಸಮುದಾಯದ ಜಿಲ್ಲಾಧ್ಯಕ್ಷ ಶಿವಾನಂದ ಹೂಗಾರ, ಪ್ರಧಾನ ಕಾರ್ಯದರ್ಶಿ ಮೋಹನ ಹೂಗಾರ, ಕಾರ್ಯದರ್ಶಿ ಮಾರುತಿ ಗುರವ, ಖಜಾಂಚಿ ಬಸವರಾಜ ಹೂಗಾರ, ತಾಲೂಕು ಪದಾಧಿಕಾರಿಗಳಾದ ಬಸವರಾಜ ಹೂಗಾರ, ನಾಗಪ್ಪ ಹೂಗಾರ, ಮಲ್ಲಪ್ಪ ಹೂಗಾರ, ಮಾರುತಿ ಹೂಗಾರ ಇತರರು ಇದ್ದರು.

> ಪವಿತ್ರ ಸಮುದಾಯದವರಾದ ಹೂಗಾರರು ಭಗವಂತನಿಗೆ ಹತ್ತಿರವಾದವರಯ. ಹೂಗಾರ ಸಮುದಾಯ ಸಂಘಟಿತವಾಗಿ ಗಟ್ಟಿಗೊಳ್ಳಬೇಕು. ಸಮಯದಾಯ ಜನರ ಬೆನ್ನೆಲುಬಾಗಿ ಅವರ ಕೆಲಸದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತೇನೆ. ಸರ್ಕಾರ ಮಟ್ಟದಲ್ಲಿ ಸಮುದಾಯಕ್ಕೆ ಅನುಕೂಲ ಕಲ್ಪಿಸುವ ಕೆಲಸ ಮಾಡುತ್ತೇನೆ.
>
> **ವಿಶ್ವಾಸ ವೈದ್ಯ**
> **ಶಾಸಕ**

# ಅತಿಥಿ ಶಿಕ್ಷಕರ ನೇಮಕಕ್ಕೆ ಆಗ್ರಹ

**ಮುದ್ದೇಬಿಹಾಳ:** ಕಳೆದ ಒಂದುವರೆ ತಿಂಗಳಿನಿಂದ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳದೆ, ಪಾಠ ಪ್ರವಚನಗಳು ನಡೆಯದೆ ಇರುವುದನ್ನು ಪ್ರತಿಭಟಿಸಿ ಸ್ಥಳೀಯ ಎರಡು ಸರಕಾರಿ ಪದವಿ ಮಹಾ ವಿದ್ಯಾಲಯಗಳ ವಿದ್ಯಾರ್ಥಿಗಳು ಎಬಿವಿಪಿ ನೇತೃತ್ವದಲ್ಲಿ ಮಂಗಳವಾರ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸಿಲ್ದಾರ್ ಕಚೇರಿ ಮುಂದುಗಡೆ ಕಪ್ಪು ಹಲಗೆ ಇಟ್ಟು ಪಾಠವನ್ನು ಮಾಡುವ ಮೂಲಕ ತಮಗೆ ಆಗುತ್ತಿರುವ ತೊಂದರೆಯನ್ನು ವ್ಯಕ್ತಪಡಿಸಿದರು.

ರಾಜ್ಯದ ಸರಕಾರಿ ಪದವಿ ಮಹಾ ವಿದ್ಯಾಲಯಗಳಲ್ಲಿ ಅಗಸ್ಟ್ ತಿಂಗಳನಿಂದ ಸರ್ಕಾರ ರಾಜ್ಯದ ಎಲ್ಲಾ ಅತಿಥಿ ಮತ್ತೊಮ್ಮೆ ಹೊಸದಾಗಿ ಕೌನ್ಸಿಲಿಂಗ್ ನಡೆಸಲು ಮುಂದಾಗಿರುವುದನ್ನು ಖಂಡಿಸಿದ ವಿದ್ಯಾರ್ಥಿ ಮುಖಂಡ ಶಿವನಗೌಡ ಬಿರಾದಾರ, ರಾಜ್ಯ ಸರ್ಕಾರ ಶೇ 70 ಇರುವ ಅತಿಥಿ ಉಪನ್ಯಾಸಕರನ್ನು ಸೇವಾ ಭದ್ರತೆ ನೀಡದೆ, ಇಲ್ಲಿಯವರೆಗೆ ಕೆಲಸ ಮಾಡಿಸಿಕೊಂಡು ಅವರ ಸೇವೆಯನ್ನು ಕಡೆಗಣಿಸುತ್ತಿದೆ. ಎಲ್ಲಾ ಸರ್ಕಾರಿ ಕಾಲೇಜುಗಳ ಅಧಾರಸ್ತಂಭ ಆಗಿದ್ದ ಅವರು ಕಡಿಮೆ ವೇತನ ಪಡೆದು ಖಾಯಂ ನೌಕರರಂತೆ ಕೆಲಸ ಮಾಡುತ್ತಿದ್ದರು. ಹಲವಾರು ವರ್ಷ ದುಡಿದವರಿಗೆ ಸೇವಾ ಭದ್ರತೆ ಕೊಡದೆ ಇರುವುದು ಶಿಕ್ಷಣ ವ್ಯವಸ್ಥೆಗೆ ಮಾರಕವಾಗಿದೆ. ಈಗ ವರ್ಗಗಳು ನಡೆಯದೇ ಇರುವುದರಿಂದ ತಮ್ಮ ಪಾಠ ಪ್ರವಚನಕ್ಕೆ ತೊಂದರೆಯಾಗಿದ್ದು ಪರೀಕ್ಷೆಗಳು ಬಂದರು ಸರಕಾರ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಮಾತನಾಡಿದರು.

ವಿದ್ಯಾರ್ಥಿಗಳು ಪದವಿ ಕಾಲೇಜಿನಿಂದ ಬಸವೇಶ್ವರ ಸರ್ಕಲ್ ಮಾರ್ಗವಾಗಿ ತಹಸೀಲ್ದಾರ್ ಕಚೇರಿಯ ಆಡಳಿತ ಸೌಧದ ಮುಂದೆ ಆಗಮಿಸಿ, ಕಪ್ಪು ಹಲಗೆ ಇಟ್ಟು ಕುವೆಂಪು ಅವರ ಕುರಿತು ಅಣಕು ಪಾಠವನ್ನು ಮಾಡಿದರು. ಶೀಘ್ರ ನೇಮಕ ಮಾಡಬೇಕು ಎಂದು ಘೋಷಣೆ ಕೂಗಿ. ಈ ಮೂಲಕ ತಮಗೆ ಆಗುತ್ತಿರುವ ತೊಂದರೆಯನ್ನು ವ್ಯಕ್ತಪಡಿಸಿದರು. ನಗರ ಕಾರ್ಯದರ್ಶಿ ಮಲ್ಲಮ್ಮ ಪಾಟೀಲ್ ಮುಖಂಡರಾದ ಓಂಕಾರ್ ಪವಾರ,

ರಮೇಶ್ ಹೂಗಾರ, ರೇವಣಸಿದ್ದ ಹರಿಂದ್ರಾಳ ಸೇರಿದಂತೆ ವಸತಿ ಪದವಿ ಕಾಲೇಜು ಹಾಗೂ ಸಾಮಾನ್ಯ ಕಾಲೇಜಿನ ವಿದ್ಯಾರ್ಥಿ ವಿದ್ಯಾರ್ಥಿನಿಯರು ಎಬಿವಿಪಿ ಧ್ವಜವನ್ನು ಹಿಡಿದುಕೊಂಡು ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ತಾಲೂಕು ದಂಡಾಧಿಕಾರಿ ಕೀರ್ತಿ ಚಾಲಕ್ ಮನವಿ ಸ್ವೀಕರಿಸಿದರು, ಎಎಸ್‌ಐ ಅಸ್ಕಿ ಮತ್ತು ಮನ್ನಾಬಾಯಿ ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದರು.



# ನಿರಾಣಿ ಫೌಂಡೇಷನದಿಂದ ಶೈಕ್ಷಣಿಕ ದತ್ತು ಯೋಜನೆ

**ಜಮಖಂಡಿ:** ಎಂಆರ್‌ಎನ್ ನಿರಾಣಿ ಫೌಂಡೇಷನ ದಿಂದ ಶೈಕ್ಷಣಿಕ ದತ್ತು ಯೋಜನೆ ಅಡಿಯಲ್ಲಿ ಪ್ರತಿವರ್ಷ ಪಂಚಮಸಾಲಿ ಸಮಾಜದ ಬಡ ಮತ್ತು ಪ್ರತಿಭಾವಂತ ಮಕ್ಕಳನ್ನು ದತ್ತು ಪಡೆದು 8ನೇ ತರಗತಿಯಿಂದ ಪದವಿ ವರೆಗಿನ ಶಿಕ್ಷಣದ ಸಂಪೂರ್ಣ ವೆಚ್ಚವನ್ನು ಭರಿಸಲಾಗುವುದು ಎಂದು ನಿರಾಣಿ ಉದ್ಯಮ ಸಮೂಹ ಸಂಸ್ಥೆಗಳ ನಿರ್ದೇಶಕ ಸಂಗಮೇಶ ನಿರಾಣಿ ಹೇಳಿದರು.



ನಗರದ ಮೈಗೂರ ರಸ್ತೆಯಲ್ಲಿನ ಪಂಚಮಸಾಲಿ ಸಮುದಾಯ ಭವನದಲ್ಲಿ ತಾಲೂಕ ಪಂಚಮಸಾಲಿ ಸಮಾಜ ಮತ್ತು ರಾಣಿ ಚೆನ್ನಮ್ಮಾ ಸೊಸೈಯಿಸಿ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಮತ್ತು ಸಾಧಕರ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪಂಚಮಸಾಲಿ ಸಮಾಜದವರು ಸರ್ಕಾರದ ಹಿರಿಯ ಅಧಿಕಾರಿಗಳು, ಉದ್ಯಮಿದಾರರು, ವ್ಯಾಪಾರಸ್ಥರು, ರೈತರು, ಆಧ್ಯಾತ್ಮಿಕ ಮತ್ತು ಧಾರ್ಮಿಕ ಗುರುಗಳು ಬಹುತೇಕ ಎಲ್ಲ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸಮಾಜದಲ್ಲಿ ಶ್ರೀಮಂತರಷ್ಟು ಬಡವರು ಸಹ ಇದ್ದಾರೆ. ಆದರೆ, ಎಷ್ಟೇ ಬಡತನವಿದ್ದರೂ ಸ್ವಾಭಿಮಾನವನ್ನು ಎಂದಿಗೂ ಬಿಟ್ಟು ಕೊಡುವವರಲ್ಲ ಎಂದರು.

ಕೃಷಿ ಮತ್ತು ಶಿಕ್ಷಣಕ್ಷೇತ್ರಕ್ಕೆ ಪಂಚಮಸಾಲಿ ಸಮಾಜದ ಹಿರಿಯರ ಕೊಡುಗೆ ಬಹಳವಿದೆ. ಅಂದಾಜು 50 ವರ್ಷಗಳ ಹಿಂದೆ ಶಿಕ್ಷಣ ಕೊಡಿಸಿದವರು ನಮ್ಮ ಹಿರಿಯರು. ಜಮಖಂಡಿ ಭಾಗ ಶ್ರೀಮಂತವಾಗಲು ಹಿಡಕಲ್ ಜಲಾಶಯ ಕಾರಣ. ಅದರ ನಿರ್ಮಾಣಕ್ಕೆ ಬಾಳೇಕುಂದ್ರಿ ಅವರೇ ಪ್ರಮುಖರಾಗಿದ್ದು ಅವರನ್ನು ಸದಾಕಾಲ ಸ್ಮರಿಸಬೇಕು. ಪಂಚಮಸಾಲಿಗರು ಅತ್ಯಂತ ಸೌಮ್ಯವಾದಿಗಳೂ ಹೌದು, ಪ್ರಸಂಗ ಮತ್ತು ಅವಕಾಶ ಬಂದರೆ ಖಡ್ಗ ಹಿಡಿಯಲು ಕೂಡ ಸಿದ್ಧರಿದ್ದಾರೆ ಎಂದರು.

ಪೊಲೀಸ್ ಇಲಾಖೆ ನಿವೃತ್ತ ಎಸ್.ಪಿ. ಎಂ.ಬಿ.ಸಂಕದ ಸನ್ಮಾನ ಸ್ವೀಕರಿಸಿ ಮಾತನಾಡಿ, ಜಮಖಂಡಿಯಲ್ಲಿ ಸಿಪಿಐ ಆಗಿ 16 ವರ್ಷಗಳ ಹಿಂದೆ ಸೇವೆ ಸಲ್ಲಿಸಿದ್ದೆ. ನಾನು ಒಂದೆಡೆ ಸೇವೆ ಸಲ್ಲಿಸಿದ ಗರಿಷ್ಠ ಅವಧಿಯಾಗಿದೆ. ಜಮಖಂಡಿ ತಾಲೂಕಿನಗೆ ನನಗೆ ಅವಿನಾಭಾವ ಸಂಬಂಧವಿದೆ. ಜಮಖಂಡಿಯನ್ನು ನನ್ನ ಕರ್ಮಭೂಮಿ ಎಂದು ಭಾವಿಸುತ್ತೇನೆ ಎಂದರು.

ಪಂಚಮಸಾಲಿ ಸಮಾಜ ಸಂಘದ ತಾಲೂಕ ಘಟಕದ ಅಧ್ಯಕ್ಷ ಪಿ.ಎನ್.ಪಾಟೀಲ ಮಾತನಾಡಿ, ಪಂಚಮಸಾಲಿ ಸಮುದಾಯ ಭವನದ ನಿರ್ಮಾಣ ಕಾಮಗಾರಿ ಪೂರ್ಣಗೊಳ್ಳಲು ನಿರಾಣಿ ಕುಟುಂಬ ಕೊಡುಗೆ ಅಪಾರವಾಗಿದೆ. ಬಡ ಮತ್ತು ಪ್ರತಿಭಾವಂತ ಮಕ್ಕಳ ಶೈಕ್ಷಣಿಕ ದತ್ತುಪಡೆಯುವ ಎಂಆರ್‌ಎನ್ ಫೌಂಡೇಷನ್‌ನ ಸೇವೆ ಶ್ಲಾಘನೀಯ ಎಂದರು. ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಅತಿಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿಶೇಷ ಸಾಧಕರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.ಥಿ ಆಲಗೂರಿನ ಧರಿದೇವರಮಠದ ಲಕ್ಷ್ಮಣಮುತ್ಯಾ, ಸಿದ್ದಲಿಂಗೇಶ್ವರ ಕಮರಿಮಠದ ಸಿದ್ದಲಿಂಗಶ್ರೀ ದಿವ್ಯ ಸಾನ್ನಿಧ್ಯ ವಹಿಸಿದ್ದರು.

ವೇದಿಕೆಯಲ್ಲಿ ಭೀಮಸಿ ಮಗದುಮ, ಬಸವರಾಜ ದಲಾಲ, ಪಿ.ಎಂ.ಝುಲಪಿ, ಪ್ರಭು ಜನವಾಡ, ಸಂಗಮೇಶ ಕೌಜಲಗಿ, ಶಶಿಕಲಾ ಬಿರಾದಾರ, ಜಯಶ್ರೀ ಬಾಡಗಿ, ಸುನಿತಾ ಬಳಗಾರ, ಬಸವರಾಜ ಬಳಗಾರ, ಮಹಾಂತೇಶ ನರಸನಗೌಡ್ರ, ಗುತ್ತಿಗೆದಾರ ಸುನಿಲ ಕಡಪಟ್ಟಿ

ಈಶ್ವರ ನ್ಯಾಮಗೌಡ ಪ್ರಾರ್ಥಿಸಿದರು. ದರು. ವಿಮಲಾ ಕುಬಕಡ್ಡಿ, ಗಿರೀಶ ಮನಗೂಳಿ ನಿರೂಪಿಸಿದರು. ಸಿ.ಎಂ. ನೇಮಗೌಡ ವಂದಿಸಿದರು.

> ಉದ್ಯಮಿದಾರ ಮುರುಗೇಶ ನಿರಾಣಿ ಅವರು 25 ವರ್ಷಗಳ ಹಿಂದೆ ಆರಂಭಿಸಿದ್ದ 500 ಟನ್ ಕಬ್ಬು ಅರೆಯುವ ಸಕ್ಕರೆ ಕಾರ್ಖಾನೆ ಇಂದು ದೇಶದಲ್ಲಿಯೇ ದೊಡ್ಡ ಸಕ್ಕರೆ ಕಾರ್ಖಾನೆಯಾಗಿ ಬೆಳೆದಿದೆ. ಕಬ್ಬಿನಿಂದ ವಿಮಾನ ಇಂಧನ 'ಏವಿಯೇಷನ್ ಪೆಟ್ರೋಲ್' ತಯಾರಿಸುವ ಘಟಕವನ್ನು ಸ್ಥಾಪಿಸಲಾಗುತ್ತಿದ್ದು, ಅದರ ಭೂಮಿಪೂಜೆ ಸಮಾರಂಭಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ಸೆ.30 ರಂದು ಆಗಮಿಸಲಿದ್ದಾರೆ.
>
> **– ಸಂಗಮೇಶ ನಿರಾಣಿ, ಉದ್ದಿಮೆದಾರ**



**ಬೈಲಹೊಂಗಲ; ಉತ್ತರ ಪ್ರದೇಶದ ಲಕ್ನೋದಲ್ಲಿ ಈಚೆಗೆ ನಡೆದ ರಾಷ್ಟ್ರೀಯ ಮಟ್ಟದ ಪ್ಯಾರಾ ಬ್ಯಾಡ್ಮಿಂಟನ್ ನಲ್ಲಿ ಕರ್ನಾಟಕದಿಂದ ಪ್ರತಿನಿಧಿಸಿ ಕಂಚಿನ ಪದಕ ಪಡೆದ ಬೈಲಹೊಂಗಲದ ಕಿತ್ತೂರು ರಾಣಿ ಚೆನ್ನಮ್ಮ ಶಿಕ್ಷಣ ಸಂಸ್ಥೆಯ ಎಂ. ವಿ. ಉಪ್ಪಿನ & ಏನ್. ಏನ್ ಹಣಮಂಗಡ ಸೆಕೆಂಡರಿ ಇಂಗ್ಲಿಷ್ಟ ಮೀಡಿಯಂ ಸ್ಕೂಲದ ಹತ್ತನೇ ವರ್ಗದ ವಿದ್ಯಾರ್ಥಿ ಪ್ರಜ್ವಲ ಅಂಬಡಗಟ್ಟಿ ಅವರನ್ನು ಇಂಚಲ ರಸ್ತೆಯ ಶಿವಾನಂದ ಭಾರತಿ ನಗರದ ಅವರ ನಿವಾಸದಲ್ಲಿ ಭಕ್ತ ಸೇನಾ ಸಮಿತಿಯಿಂದ ಈಚೆಗೆ ಸನ್ಮಾನಿಸಲಾಯಿತು.**

## ಕಿರು ಸಾಲ ಪಡೆಯಲು ಅರ್ಜಿ ಆಹ್ವಾನ

**ಕಾರವಾರ:** ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಪಂಗಡ ಮಹಿಳೆಯರ ಗುಂಪಿನ ಸದಸ್ಯರನ್ನು ಗುಂಪು ಚಟುವಟಿಕೆಗಳ ಮೂಲಕ ಆರ್ಥಿಕವಾಗಿ ಸಬಲರನ್ನಾಗಿ ಮಾಡಲು "ಕಿರುಸಾಲ ಯೋಜನೆ" ಯನ್ನು ಜಾರಿಗೆ ತರಲಾಗಿದ್ದು, ಈ ಯೋಜನೆಯಡಿಯಲ್ಲಿ ಅರ್ಹರಾಗಿ ಆಯ್ಕೆಯಾಗಿರುವ ಪರಿಶಿಷ್ಟ ಪಂಗಡ ಗುಂಪಿಗೆ ಗರಿಷ್ಠ ರೂ. 20 ಲಕ್ಷ ಸಾಲವನ್ನು ನಿಗಮದಿಂದ ಮಂಜೂರು ಮಾಡಲಾಗುತ್ತದೆ.

ಉತ್ತರ ಕನ್ನಡ ಜಿಲ್ಲೆಗೆ 2025-26 ನೇ ಸಾಲಿನಲ್ಲಿ 1 ಗುಂಪಿಗೆ ರೂ. 20 ಲಕ್ಷ ಸಾಲ ಮಂಜೂರಿ ಮಾಡಲು ಗುರಿ ಹೊಂದಿದ್ದು. ಆದ ಕಾರಣ ಜಿಲ್ಲೆಯಲ್ಲಿರುವ ರೂ. 20 ಲಕ್ಷಕ್ಕಿಂತ ಮೇಲ್ಪಟ್ಟು ಉಳಿತಾಯ ಹೊಂದಿರುವ ತಾಲೂಕಾ ಒಕ್ಕೂಟದಲ್ಲಿ ನೋಂದಣಿಯಾಗಿರುವ ಪರಿಶಿಷ್ಟ ಪಂಗಡ ಸದಸ್ಯರನ್ನೊಳಗೊಂಡ ಸ್ತ್ರೀ ಶಕ್ತಿ ಗುಂಪುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

# ಮನರೇಗಾ ಕಾಮಗಾರಿ ಪರಿವೀಕ್ಷಣೆ

**ಕಾರವಾರ:** ಅರಣ್ಯ ಪ್ರದೇಶದಲ್ಲಿ ಟ್ರೆಂಚ್‌ಗಳನ್ನು ನಿರ್ಮಿಸುವುದರಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆಯಾಗುವುದರಿಂದ ಮನರೇಗಾ ಯೋಜನೆಯಡಿ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರು ಹಾಗೂ ಮುಂಡಗೋಡ ತಾಲೂಕು ಪಂಚಾಯತಿಯ ಆಡಳಿತಾಧಿಕಾರಿ ಕರೀಂ ಅಸದಿ ಹೇಳಿದರು.

ಅವರು ಮಂಗಳವಾರ, ಮುಂಡಗೋಡ ಕಾತೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮುಡಸಾಲಿ ಗ್ರಾಮದ ಕಣವಿಕಾತೂರು ಅರಣ್ಯ ಪ್ರದೇಶದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕಾಂಟೂರು ಟ್ರಂಚ್ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾಮಗಾರಿ ಪರಿಶೀಲಿಸಿ, ಮಾತನಾಡಿದರು.

ಗ್ರಾಮೀಣ ಜನತೆಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸುವ ಮತ್ತು ಸಮಾಜಕ್ಕೆ ಇಂತಹ ಅತ್ಯುತ್ತಮ ಕೊಡುಗೆ ನೀಡುವ ಯೋಜನೆಯಡಿ ಜನರು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕು. ನಿಗದಿಪಡಿಸಿದಂತೆ ಕೆಲಸ ಮಾಡದಿದ್ದರೆ ಯೋಜನೆ ಸಫಲವಾಗುದಿಲ್ಲ ಮತ್ತು ಕೆಲಸದ ಪ್ರಮಾಣದಲ್ಲಿ ರಾಜಿಯಾದರೆ ಕೂಲಿ ಹಣವನ್ನು ಅಳತೆಯನುಸಾರ ಕಡಿತ ಮಾಡಿ ನೀಡಬೇಕಾಗುತ್ತದೆ. ಆದ್ದರಿಂದ ಕಾಮಗಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಅವರು ಕೂಲಿಕಾರರಿಗೆ ಸೂಚನೆ ನೀಡಿದರು.

ಮುಡಸಾಲಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಮನರೇಗಾ ಯೋಜನೆಯಡಿ ನಿರ್ಮಿಸಿರುವ ಶೌಚಾಲಯ ವೀಕ್ಷಿಸಿ, ಅಡುಗೆ ಕೋಣೆ, ಆಹಾರ ದಾಸ್ತಾನು, ಸಿಬ್ಬಂದಿ ಹಾಜರಾತಿ, ವೈದ್ಯಕೀಯ ತಪಾಸಣಾ ವಹಿ ಸೇರಿದಂತೆ ಪ್ರಮುಖ ಕಡತಗಳನ್ನು ಪರಿಶೀಲಿಸಿದರು. ಇದೇ ವೇಳೆ ವಿದ್ಯಾರ್ಥಿಗಳಿಗೆ ಪ್ರಶ್ನೋತ್ತರಗಳನ್ನು ಕೇಳಿ, ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಟಿ.ವಾಯ್. ದಾಸನಕೊಪ್ಪ, ಸಹಾಯಕ ನಿರ್ದೇಶಕ (ಗ್ರಾಉ) ಸೋಮಲಿಂಗಪ್ಪ ಛಬ್ಬಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ ಕಡಪಟ್ಟಿ, ಮನರೇಗಾ ತಾಂತ್ರಿಕ ಸಿಬ್ಬಂದಿ, ಕಾಯಕ ಬಂಧು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

# ಕುರುಹಿನಶೆಟ್ಟಿ ಸೊಸಾಯಿಟಿಗೆ 5.85 ಕೋಟಿ ಲಾಭ

**ಮೂಡಲಗಿ:** ಯಾರು ನಮ್ಮಲ್ಲಿ ಸಾಲ ಪಡೆದಿದ್ದಾರೆ ಅವರು ಸಾಲ ತಿರಿಸುವಷ್ಟು ಪ್ರಬುದ್ದವಾಗಿ ಅವರ ಜೀವನಲ್ಲಿ ಪ್ರಗತಿ ಕಾಣುತ್ತಿದ್ದಾರೆ ಎಂದರೆ ಅದು ನಮ್ಮ ಸಂಘದ ಪ್ರತಿಯೊಬ್ಬರ ಸದಸ್ಯರ ಶಕ್ತಿಯಾಗಿದೆ. ಸಂಘಕ್ಕೆ ಪ್ರಶಸ್ತಿಗಳು ಅರಿಸಿ ಬಂದರೆ ಅದು ಸರ್ವ ಸದಸ್ಯರ ಶ್ರೀರಕ್ಷೆ ಎಂದು ಅಧ್ಯಕ್ಷ ಸುಭಾಸ ಬೆಳಕೂಡ ಹೇಳಿದರು.



ಅವರು ಸೋಮವಾರ ಸಂಘದ ಸಭಾಭವನದಲ್ಲಿ ಜರುಗಿದ ಕುರುಹಿನಶೆಟ್ಟಿ ಅರ್ಬನ ಕೋ-ಆಪ್ ಕ್ರೇಡಿಟ ಸೊಸಾಯಿಟಿಯ 30ನೇ ವಾರ್ಷಿಕ ಸರ್ವ ಸಾಧಾರಣ ಸಭೆಯು ಅಧ್ಯಕ್ಷತೆ ವಹಿಸಿ ಮಾತನಾಡಿದರು, ನಮ್ಮ ಸಂಘವು ಪ್ರತಿ ವರ್ಷ ಪ್ರಗತಿ ಕಾಣುತ್ತಿರುವದಕ್ಕೆ ಎಲ್ಲ ಆಡಳಿತ ಮಂಡಳಿಯ ಸಹಕಾರ, ಸಿಬ್ಬಂದಿಯ ಕಾರ್ಯಕ್ಷಮತೆ,ಶೇರುದಾರ ಹಾಗೂ ಠೇವುದಾರರ ಬೆಂಬಲ ಕಾರಣ ಎಂದ ಅವರು ಸಂಘವು ಮಾರ್ಚ ಅಂತ್ಯಕ್ಕೆ 229 ಕೋಟಿ ಠೇವುಗಳು.193 ಕೋಟಿ ಸಾಲ ವಿತರಣೆ. 345 ಕೋಟಿ. ದುಡಿಯುವ ಬಂಡವಾಳ, 27.34 ಕೋಟಿ. ನಿಧಿಗಳನ್ನು ಹೊಂದಿ 5.85 ಕೋಟಿ. ನಿವ್ವಳ ಲಾಭ ಹೊಂದಿದೆ ಎಂದರು

ನಿವೃತ್ತ ಪ್ರಾಚಾರ್ಯ ಸಂಗಮೇಶ ಗುಜಗೊಂಡ ಮಾತನಾಡಿ. ಕುರುಹಿನಶೇಟ್ಟಿ ಸೊಸಾಯಿಟಿಯು ಗ್ರಾಮಿಣ ಪ್ರದೇಶಗಳ ಅಭಿವೃದ್ಧಿ ದೃಷ್ಟಿಯನ್ನು ಇಟ್ಟುಕೊಂಡು ಶಾಖೆಗಳನ್ನು ಅಂತಂತ್ಯ ಹಿಂದುಳಿದ ಹಳ್ಳಿಯಲ್ಲಿ ಪ್ರಾರಂಭಿಸುವ ಮೂಲಕ ಸೊಸಾಯಿಟಿಯ ದೂರದರ್ಶಿತ್ವನ್ನು ಪ್ರದರ್ಶನ ಮಾಡುತ್ತಿದೆ, ಬಸವಣ್ಣ ತತ್ವದಂತೆ ಸಂಪೂರ್ಣ ಸಮಾಜ ಮುಖಿಯಾಗಿ ಕಾಯಕದ ಜೊತೆಗೆ ಸಾಹ್ಯಿತಿಕ, ಧಾರ್ಮಿಕ, ಶೈಕ್ಷಣಿಕ ಚಟುವಟಿಕೆಗಳಿಗೆ ದಾಸೋಹಿಯಾಗಿ ನೆರವು ನೀಡುತ್ತಾ ಆದರ್ಶಪ್ರಾಯವಾಗಿ ಗುರುತಿಸಿಕೊಂಡಿದೆ. ಇದೆ ಕಾರಣಕ್ಕೆ ಅತ್ಯುತ್ತಮ ಗ್ರಾಹಕ ಸ್ನೇಹಿ ಸಂಸ್ಥೆ ಎಂದು ಗುರುತಿಸಿಕೊಂಡಿದೆ ಎಂದು ಶ್ಲಾಘಿಸಿದರು.

ಹುಕ್ಕೇರಿಯ ಸಾಹಿತಿ ಪ್ರೋ ಚನಗೌಡ ಪಾಟೀಲ. ಲೆಕ್ಕ ಪರಿಶೋಧಕ ಸೈದಪ್ಪ ಗದಾಡಿ ಮಾತನಾಡಿದರು. ಹುಕ್ಕೆರಿಯ ಸಾಹಿತಿ ಪ್ರೋ ಚನಗೌಡ ಪಾಟೀಲ ಅವರ ಸಾಂಸ್ಕೃತಿಕ ನಾಯಕ ಬಸವಣ್ಣವರು ಕೃತಿ ಬಿಡುಗಡೆ ಮಾಡಿದರು.ಈ ಸಮಾರಂಭದಲ್ಲಿ ವಿವಿದ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು, ಶ್ರೀಗಳನ್ನು, ಶಾಖಾ ಸಲಹಾ ಸಮಿತಿಯ ಅಧ್ಯಕ್ಷರನ್ನು ಸನ್ಮಾನಿಸಿದರು, ವೇದಿಕೆಯ ಮೇಲೆ ಉಪಾಧ್ಯಕ್ಷ ಇಸ್ಮಾಯಿಲ್ ಕಳ್ಳಿಮನಿ, ನಿರ್ದೇಶಕರಾದ ಬಸವರಾಜ ಮುಗಳಖೋಡ, ಲಕ್ಕಪ್ಪ ಪೂಜೇರಿ ಗೊಡಚೆಪ್ಪ ಕ ಮುರಗೋಡ, ಬಸವರಾಜ ಬೆಳಕೂಡ, ವಿಶಾಲ ಶೀಲವಂತ,ರಾಮಪ್ಪ ಬಳಿಗಾರ, ರುಕ್ಮವ್ವ ಪೂಜೇರಿ, ಮಾಲಾ ಬೆಳಕೂಡ,ಉಮಾ ಬೆಳಕೂಡ, ಶಾಂತವ್ವ ಬೋರಗಲ್, ಶ್ಯಾಲನ್ ಕೊಡತೆ ಇದ್ದರು

ನಿಲಕಂಠ ಮಠದ ಶ್ರೀ ಶಿವಾನಂದ ಸ್ವಾಮಿಜಿಗಳು ಸಾನಿಧ್ಯವಹಿಸಿ ಮಾತನಾಡಿದರು, ಸಿಬ್ಬಂದಿಗಳಾದ ಮಲ್ಲಿಕಾರ್ಜುನ ಗೋಲಬಾವಿ, ಪ್ರಶಾಂತ ಬೆಳಕೂಡ. ಮಂಜುನಾಥ ನೇರ್ಲಿ, ಶಿವಬಸು ಮುಗಳಖೋಡ ಕ್ರೋಡಿಕೃತ ಅಡಾವೆ. ಲಾಭ ಹಾನಿ ಅಂದಾಜು ಲಾಭಹಾನಿ.ಲಾಭ ವಿಭಾಗಣೆ. ಮಂಡಿಸಿದರು. ಚಂದ್ರಕಾಂತ ಕೊಡತೆ ನಿರೂಪಿಸಿದರು, ಪ್ರಧಾನ ಕಾರ್ಯದರ್ಶಿ ರಮೇಶ ವಂಟಗೊಡಿ ಸ್ವಾಗತಿಸಿದರು ಶಿವಾನಂದ ಮುರಗೋಡ ವಂದಿಸಿದರು

## ಸಲಕರಣೆಗಳ ವಿತರಣೆ

**ಬೆಳಗಾವಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಸೆ.16) ನಗರದ ಗಾಂಧೀ ಭವನದಲ್ಲಿ ಹಮ್ಮಿಕೊಳ್ಳಲಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ "ಪೋಷಣ್ ಮಾಸಾಚರಣೆ" ಕಾರ್ಯಕ್ರಮದಲ್ಲಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಬೆಳಗಾವಿ ಗ್ರಾಮೀಣ ಮತಕ್ಷೇತ್ರದ ವಿಕಲಚೇತನ ಫಲಾನುಭವಿಗಳಿಗೆ ವಿವಿಧ ಬಗೆಯ ಸಾಧನ ಸಲಕರಣೆಗಳನ್ನು ವಿತರಿಸಿದರು.

ಸದರಿ ಕಾರ್ಯಕ್ರಮದಲ್ಲಿ ಯಂತ್ರಚಾಲಿತ ದ್ವಿಚಕ್ರ ವಾಹನಗಳು, ಹೊಲಿಗೆ ಯಂತ್ರ, ಬ್ಯಾಟರಿ ವ್ಹೀಲ್‌ಚೇರ್, ಟಾಕಿಂಗ್ ಲ್ಯಾಪ್‌ಟಾಪ್, ಬ್ರೈಲ್‌ಕಿಟ್ ಸೇರಿದಂತೆ 51 ಸೌಲಭ್ಯಗಳನ್ನು ವಿಕಲಚೇತನ ಫಲಾನುಭವಿಗಳಿಗೆ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರು ಚನ್ನರಾಜ್ ಹಟ್ಟಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಇಲಾಖೆಯ ಸಿಬ್ಬಂದಿಯವರು ಉಪಸ್ಥಿತರಿದ್ದರು.

# ರೈತ ಹಾಗೂ ವ್ಯಾಪಾರಸ್ಥರ ಗಮನಕ್ಕೆ

**ಬೆಳಗಾವಿ:** ರೈತ ಬಾಂಧವರಿಗೆ ಮತ್ತು ವ್ಯಾಪಾರಸ್ಥರಿಗೆ ತಿಳಿಸುವುದೇನೆಂದರೆ ದಿನಾಂಕ:15/09/2025ರ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಬೆಂಗಳೂರು ಇವರ ಆದೇಶ ಸಂ:ಕೃಮಾಇ/ನಿಯವಿ/ಎಂಐಎಸ್ ಸಿ/164/2021-22(ಭಾಗ-ಖಗಿ) ರ ಮೂಲಕ ಮೆ:ಜೈ ಕಿಸಾನ್ ಹೋಲ್ ಸೇಲ್ ವೆಜಿಟೆಬಲ್, ಮರ್ಚೆಂಟ್ಸ್ ಅಸೋಸಿಯೇಷನ್, ಆರ್.ಎಸ್. ನಂ.697/2, ಎನ್. ಹೆಚ್-4(48), ಸೋಮನಾಥ ನಗರ, ಬೆಳಗಾವಿ ಇವರಿಗೆ ನೀಡಲಾಗಿದ್ದ ಖಾಸಗಿ ತರಕಾರಿ ಮಾರುಕಟ್ಟೆ ಲೈಸನ್ಸ್‌ನ್ನು ವಿವಿಧ ಕಾರಣಗಳಿಂದಾಗಿ ರದ್ದುಪಡಿಸಲಾಗಿದೆ.

ರೈತರಿಂದ ಕಮಿಷನ್ ಪಡೆಯುವುದು, ರೈತರ ಹಿತಾಸಕ್ತಿ ಕಾಪಾಡುವಲ್ಲಿ ಕ್ರಮಕೈಗೊಂಡಿರುವುದಿಲ್ಲ, ಕೃಷಿ ಉತ್ಪನ್ನಗಳ ವ್ಯವಹಾರದ ದಾಖಲಾತಿಗಳನ್ನು ನಿರ್ವಹಿಸಿರುವುದಿಲ್ಲ, ಕೃಷಿ ಉತ್ಪನ್ನಗಳ ಪಾರದರ್ಶಕ ಮಾರಾಟ ಪದ್ಧತಿ ಅಳವಡಿಸಿರುವುದಿಲ್ಲ, ರೈತರ ಮಾಹಿತಿಗಾಗಿ ದರಗಳ ಬೋರ್ಡಗಳನ್ನು ಪ್ರದರ್ಶಿಸಿರುವುದಿಲ್ಲ, ಮಾರಾಟವಾದ ನಂತರ ಕೃಷಿ ಉತ್ಪನ್ನಗಳಿಗೆ ನಿಗದಿಯಾದ ದರಗಳ ಮಾಹಿತಿಯನ್ನು ರೈತರಿಗೆ ನೀಡುತ್ತಿರುವುದಿಲ್ಲ, ರೈತರ ಉತ್ಪನ್ನಗಳನ್ನು ಶೇಖರಿಸಿಡಲು ಶೈತ್ಯಾಗಾರದ ವ್ಯವಸ್ಥೆ ಇಲ್ಲದಿರುವುದು, ರೈತರಿಗೆ ಅನುಕೂಲವಾಗಲು ರಾಷ್ಟ್ರೀಕೃತ/ಶೆಡ್ಯೂಲ್ ಬ್ಯಾಂಕ್ ಗಳು ಇರುವುದಿಲ್ಲ, ರೈತರಿಗೆ ತಂಗಲು ರೈತ ಭವನದಲ್ಲಿ ಯಾವುದೇ ಸೌಲಭ್ಯಗಳನ್ನು ಕಲ್ಪಿಸಿರುವುದಿಲ್ಲ, ತರಕಾರಿ ವ್ಯಾಪಾರದ ಲೆಕ್ಕಪತ್ರ ನಿರ್ವಹಣೆ ಮಾಡಿರುವುದಿಲ್ಲ ಹೀಗಾಗಿ ಖಾಸಗಿ ತರಕಾರಿ ಮಾರುಕಟ್ಟೆ ಲೈಸನ್ಸ್ ನ್ನು ರದ್ದುಪಡಿಸಲಾಗಿರುತ್ತದೆ. ಖಾಸಗಿ ಮಾರುಕಟ್ಟೆ ಜಾಗದಲ್ಲಿ ವ್ಯಾಪಾರ ವಹಿವಾಟ ನಡೆಸುವುದು ಕಾನೂನಿಗೆ ವಿರುದ್ಧ ಅಥವಾ ಶಿಕ್ಷಾರ್ಹ ಅಪರಾಧವಾಗಿದ್ದು, ಇಲ್ಲಿ ವ್ಯಾಪಾರ ನಡೆಸುವ ವ್ಯಾಪಾರಸ್ಥರ ವಿರುದ್ಧ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ರಡಿ ನಿಷೇಧಿಸಲಾಗಿದೆ.

ಆದ್ದರಿಂದ ರೈತ ಬಾಂಧವರು ಕಂಗ್ರಾಳಿ ರಸ್ತೆಯಲ್ಲಿರುವ ಬೆಳಗಾವಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರ್ಕೇಟ್ ಯಾರ್ಡ್ ನಲ್ಲಿ ತಮ್ಮ ತರಕಾರಿ ಉತ್ಪನ್ನಗಳನ್ನು ಮತ್ತು ಇತರೆ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ವಿನಂತಿಸಲಾಗಿದೆ ಎಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರ ದಿನಾಚರಣೆ: ಪೂರ್ವಭಾವಿ ಸಭೆ

**ಬೆಳಗಾವಿ:** ವಿಶ್ವ ಹಿರಿಯ ನಾಗರಿಕರ ದಿನಾಚರಣೆ-2025 ರ ಅಂಗವಾಗಿ ಬೆಳಗಾವಿ ಜಿಲ್ಲೆಯ ಹಿರಿಯ ನಾಗರಿಕರಿಗಾಗಿ ಜಿಲ್ಲಾ ಮಟ್ಟದಕ್ರೀಡೆ ಮತ್ತು ಸಾಂಸ್ಕೃತಿ ಸ್ಪರ್ದೆಗಳನ್ನು ಹಾಗೂ ಜಿಲ್ಲಾ ಮಟ್ಟದ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಕುರಿತು ಜಿಲ್ಲೆಯ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು, ಜಿಲ್ಲಾ ಮತ್ತು ತಾಲೂಕು ಮಟ್ಟದ ನಿವೃತ್ತ ನೌಕರರ ಸಂಘಗಳ ಪದಾಧಿಕಾರಿಗಳು ಮತ್ತು ಹಿರಿಯ ನಾಗರಿಕರೊಂದಿಗೆ ಚರ್ಚಿಸಲು ಸೆಪ್ಟಂಬರ್, 20, 2025 ರಂದು ಮದ್ಯಾಹ್ನ 12 ಗಂಟೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಾನ್ಯ ಉಪನಿರ್ದೇಶಕರು ಅವರ ಅಧ್ಯಕ್ಷತೆಯಲ್ಲಿ ಉಪನಿರ್ದೇಶಕರವರ ಕಛೇರಿ ಶಿವಾಜಿನಗರ ಬೆಳಗಾವಿ ಇಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿರುತ್ತದೆ.

ಜಿಲ್ಲೆಯ ಎಲ್ಲಾ ಸ್ವಯಂ ಸೇವಾ ಸಂಸ್ಥೆಯವರು, ತಾಲೂಕು ಮಟ್ಟದ ನಿವೃತ್ತ ನೌಕರರ ಸಂಘಗಳ ಪದಾಧಿಕಾರಿಗಳು ಮತ್ತು ಹಿರಿಯ ನಾಗರಿಕರು ಸಭೆಯಲ್ಲಿ ಪಾಲ್ಗೊಂಡು ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಇಲಾಖೆಯ ವತಿಯಿಂದಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿದೂರವಾಣಿ ಸಂಖ್ಯೆ: 0831-2476096/7 ಅಥವಾ ಮೋ.ಸಂಖ್ಯೆ: 8050609098 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಬೃಹತ್ ರಕ್ತದಾನ ಶಿಬಿರ

**ಬೆಳಗಾವಿ:** ಖ್ಯಾತ ವೈದ್ಯರಾದ ಡಾ. ಗಿರೀಶ ಸೋನವಾಲ್ಕರ್ ಅವರ ಹುಟ್ಟುಹಬ್ಬದ ಪ್ರಯುಕ್ತ ಡಾ. ಗಿರೀಶ ಸೋನವಾಲ್ಕರ್ ಫೌಂಡೇಶನ್, ಡಾ. ಗಿರೀಶ ಸೋನವಾಲ್ಕರ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘ ಹಾಗೂ ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ ಸಂಯುಕ್ತಾಶ್ರಯದಲ್ಲಿ ಸೆ. 17 ರಂದು ಬೆಳಗಾವಿ ಸಿವಿಲ್ ಆಸ್ಪತ್ರೆಯ ಐಎಮ್‌ಎ ಆವರಣದಲ್ಲಿ ಬೃಹತ್ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣೆ ಶಿಬಿರ ನಡೆಯಲಿದೆ.

ಬೆಳಗಾವಿ ರಕ್ತದಾನ ಕೇಂದ್ರ ಹಾಗೂ ಲೇಕವ್ಯೂ ಆಸ್ಪತ್ರೆಯ ಸಹಯೋಗದೊಂದಿಗೆ ಸೆ. 17 ರಂದು ಮುಂಜಾನೆ 9.30 ವೇಳೆಗೆ ಬೆಳಗಾವಿ ಸಿವಿಲ್ ಆಸ್ಪತ್ರೆಯ ಐಎಮ್‌ಎ ಆವರಣದಲ್ಲಿ ಬೃಹತ್ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ರಕ್ತದಾನಿಗಳು ಮತ್ತು ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಅಭಿಮಾನಿ ಬಳಗ ವಿನಂತಿಸಿದೆ.

# ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ

**ಬೆಳಗಾವಿ:** ಸರಕಾರದಿಂದ ವಿವಿಧ ಕಾಮಗಾರಿಗಳಿಗಾಗಿ ಸಾಕಷ್ಟು ಅನುದಾನ ನೀಡಲಾಗುತ್ತಿದೆ. ವಿನಾಕಾರಣ ಸಬೂಬುಗಳನ್ನು ನೀಡದೆ ಬಿಡುಗಡೆಗೊಂಡಂತಹ ಅನುದಾನದಡಿ ಕಾಮಗಾರಿಗಳನ್ನು ಕಾಲಮಿತಿಯೊಳಗಾಗಿ ಪೂರ್ಣಗೊಳಿಸಿ ಪ್ರಗತಿ ಸಾಧಿಸಲು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಕಾಗವಾಡ ಶಾಸಕರಾದ ಭರಮಗೌಡ ಕಾಗೆ ಅವರು ತಿಳಿಸಿದರು.



ಕಳೆದ ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ನಿರ್ದೇಶನದಂತೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ (ಸೆ.16) ಜರುಗಿದ ಪ್ರತ್ಯೇಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಗುಣಾತ್ಮಕ ಶಿಕ್ಷಣ ಹೆಚ್ಚಿಸಲು ವಿವಿಧ ಶೈಕ್ಷಣಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ, ಕಲಿಕೆಗಾಗಿ ಅನುಷ್ಠಾನಾಧಿಕಾರಿಗಳು ನಿರಂತರ ಸಭೆ, ಶಾಲಾ ಸಂದರ್ಶನ ನಡೆಸಬೇಕು. ವಿಶೇಷ ತರಗತಿಗಳ ಆಯೋಜನೆ ಮೂಲಕ ಮಕ್ಕಳ ನೈಜ ಕಲಿಕಾ ಕೊರತೆ ಗುರುತಿಸಿ ಮಾರ್ಗದರ್ಶನ ನೀಡಬೇಕು. ಶಾಲೆಗಳಿಗೆ ಬೆಂಚ್ ಹಂಚಿಕೆ ತ್ವರಿತ ಗತಿಯಲ್ಲಿ ಒದಗಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಬೇಕು. ಹೊಸದಾಗಿ ಕಟ್ಟಲಾಗುವ ಶಾಲಾ ಕೊಠಡಿಗಳಲ್ಲಿ ಎಲ್ಲ ದಿನಗಳಲ್ಲಿ ಸಮರ್ಪಕ ಬೆಳಕು ಇರುವಂತೆ ನೀಲನಕ್ಷೆ ತಯಾರಿಸಬೇಕು. ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ವ್ಯಾಪ್ತಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸದೆ ಇರುವಂತಹ ಶಾಲಾ ಶಿಕ್ಷಕರ ವಿರುದ್ಧ ಕ್ರಮ ವಹಿಸಲು ಸೂಚಿಸಿದರು.

ವಿವಿಧ ಇಲಾಖೆಗಳಿಂದ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕ್ರಿಯಾ ಯೋಜನೆಗೆ ಅನುಮೋದನೆ ಹಾಗೂ ಬದಲಿ ಕಾಮಗಾರಿಗಳ ಅನುಷ್ಠಾನದಲ್ಲಿ ತುಂಬ ವಿಳಂಬವಾಗುತ್ತಿರುವ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿ ಕಾಮಗಾರಿಗಳನ್ನು ಶೀಘ್ರವೆ ಪ್ರಾರಂಭಿಸಿ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನರೇಗಾ ಯೋಜನೆಯಡಿ ಪಾರದರ್ಶಕತೆಯಿಂದ ಕಾರ್ಯನಿರ್ವಹಿಸಬೇಕು. ನರೇಗಾ ಯೋಜನೆಯಡಿ ಕೈಗೊಳ್ಳಬಹುದಾದಂತಹ ಕಾಮಗಾರಿಗಳನ್ನು ಮಾತ್ರ ಕೈಗೊಳ್ಳಲು ಸೂಚಿಸಿ ಅವುಗಳ ಪಟ್ಟಿಯನ್ನು ಒದಗಿಸಲು ತಿಳಿಸಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿಯಲ್ಲಿ ಬಡತನ, ಕಡು ಬಡವರು, ದುರ್ಬಲ ವರ್ಗದವರನ್ನು ಗುರುತಿಸಿ ಸದರಿ ಯೋಜನೆಗೆ ಸೇರ್ಪಡೆಗೊಳಿಸಬೇಕು ಎಂದರು.

ಸರ್ಕಾರದ ವಿಶೇಷ ಪ್ರತಿನಿಧಿ-2 ನವದೆಹಲಿ ಪ್ರಕಾಶ ಹುಕ್ಕೇರಿ ಅವರು ಮಾತನಾಡಿ ಜಿಲ್ಲೆಯ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಬಿಡುಗಡೆ ಆಗುವ ಅನುದಾನ ಸಮರ್ಪಕವಾಗಿ ಬಳಕೆ ಮಾಡಿಕೊಂಡು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಅಗತ್ಯದ ಔಷಧಗಳ ಕೊರತೆ ಆಗದಂತೆ ನಿಗಾವಹಿಸಲು ಸೂಚಿಸಿದರು. ಯಕ್ಸಂಬಾ ಪ್ರಾಥಮಿಕ ಆರೋಗ್ಯ ಕೇಂದ್ರ ದುರಸ್ತಿಗೆ ಕೂಡಲೆ ಕ್ರಮವಹಿಸಬೇಕು. ಗ್ರಾಮೀಣ ಭಾಗದಲ್ಲಿ ಕಳೆದ ಕೆಲ ತಿಂಗಳುಗಳಿಂದ ಚಿಕ್ಕ ಮಕ್ಕಳಲ್ಲಿ ಜ್ವರ ಹಾಗೂ ಕೆಮ್ಮು ಬರುತ್ತಿದ್ದು ಯಕ್ಸಂಬಾ ಪ್ರಾಥಮಿಕ ಕೇಂದ್ರಕ್ಕೆ ನುರಿತ ವೈದ್ಯರ ಜೊತೆಗೆ ಮಕ್ಕಳ ತಜ್ಞರನ್ನು ಶೀಘ್ರವೆ ನಿಯೋಜಿಸಬೇಕು ತಜ್ಞ ವೈದ್ಯರ ವೇತನಕ್ಕೆ ಸಂಬಂಧಿಸಿದಂತೆ ವೈಯಕ್ತಿಕವಾಗಿ ಅಗತ್ಯದ ಅನುದಾನವನ್ನು ನೀಡುವುದಾಗಿ ತಿಳಿಸಿದರು.

ಶಿಕ್ಷಣ ಇಲಾಖೆಗೆ ಅಗತ್ಯದ ಅನುದಾನವನ್ನು ಒದಗಿಸಲಾಗುವುದು ಎಂದರು. ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಪದವಿ ಪೂರ್ವ ಶಿಕ್ಷ ಇಲಾಖೆ ಕಚೇರಿ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡಲಾಗಿದ್ದು ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಬೇಕು. ಸದಲಗಾದಲ್ಲಿನ ಕೇಂದ್ರಿಯ ವಿದ್ಯಾಲಯದಲ್ಲಿ ಮಕ್ಕಳ ಹಾಜರಾತಿಯನ್ನು ಹೆಚ್ಚಿಸಲು ಕ್ರಮ ವಹಿಸುವಂತೆ ತಿಳಿಸಿದರು. ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರು ಮಾತನಾಡಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಹುದ್ದೆಗಳ ಭರ್ತಿಗೆ ತ್ವರಿತವಾಗಿ ಕ್ರಮ ವಹಿಸಲು ತಿಳಿಸಿದರು.

ಪ್ರತ್ಯೇಕ ಪ್ರಗತಿ ಪರಿಶೀಲನಾ ಸಭೆಯ ನೇತೃತ್ವ ವಹಿಸಿ ಮಾತನಾಡಿದ ಜಿಲ್ಲಾಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಅವರು ಮಾತನಾಡಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿನ ಸರಕಾರಿ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಗ್ರಾಮ ಪಂಚಾಯತ ವತಿಯಿಂದ ಅಂದಾಜು 1000 ಶಾಲೆಗಳಿಗೆ ಇನ್ವರ್ಟರ, ಬ್ಯಾಟರಿಗಳನ್ನು ಪೂರೈಸಲಾಗುತ್ತಿದೆ ಎಂದರು. ಜಿಲ್ಲೆಯ ಶಾಲಾ ಕಟ್ಟಡಗಳ ಉನ್ನತೀಕರಣಕ್ಕೆ ಸಂಬಂಧಿಸಿದ ಪ್ರಸ್ತಾವನೆಯನ್ನು ಶೀಘ್ರವೆ ಕಳುಹಿಸುವುದರ ಜೊತೆಗೆ ಜಿಲ್ಲೆಯ ಆಯಾ ಶಾಸಕರುಗಳ ಗಮನಕ್ಕೆ ತರುವಂತೆ ಅಧಿಕಾರಿಗಳಿಗೆ ತಿಳಿಸಿದರು. ಎಲ್ಲ ತಾಲೂಕುಗಳಲ್ಲಿ ಅಕ್ಕ ಕೆಫೆ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. ದಸರಾ ಕ್ರೀಡಾಕೂಟಗಳನ್ನು ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಆಯೋಜನೆ ಮಾಡುವಂತೆ ತಿಳಿಸಿದರು.

ಸಭೆಯಲ್ಲಿ ಶಾಸಕರಾದ ಆಸೀಫ್(ರಾಜು) ಸೇಠ, ಪೋಲಿಸ್ ಆಯುಕ್ತರಾದ ಭೋರಸೆ ಭೂಷಣ ಗುಲಾಬರಾವ್, ನಾಮನಿರ್ದೇಶಿತ ಸದಸ್ಯರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಈ ರೀತಿಯಲ್ಲಿ ಪ್ರತ್ಯೇಕ ಪ್ರಗತಿ ಪರಿಶೀಲನಾ ಸಭೆ ನಡೆಸುರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಶಾಸಕರು, ಇಂತಹ ಸಭೆಗಳಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಅನುಕೂಲವಾಗಲಿದೆ ಎಂದು ಅಭಿಪ್ರಾಯಪಟ್ಟರು. ಸಭೆಯ ಬಳಿಕ ಅನುಕಂಪದ ಆಧಾರದಡಿಯಲ್ಲಿ ಗ್ರಾಮ ಪಂಚಾಯತಿಗಳಲ್ಲಿ ನೇಮಕಗೊಂಡ ಫಲಾನುಭವಿಗಳು ನೇಮಕಾತಿ ಆದೇಶ ಪತ್ರ ಹಾಗೂ ತಾಲೂಕು ಸಂಜೀವಿನಿ ಯೋಜನೆಯಡಿ ಎನ್.ಆರ್.ಎಲ್.ಎಂ ಸಿಬ್ಬಂದಿಗಳಿಗೆ ಲ್ಯಾಪ್ ಟಾಪ್‌ಗಳನ್ನು ವಿತರಿಸಲಾಯಿತು.


**ಕರ್ನಾಟಕ ಸರ್ಕಾರ**
**ಕಾರ್ಯನಿರ್ವಾಹಕ ಅಭಿಯಂತರರು,**
**ಪಂಚಾಯತ್‌ರಾಜ್ ಇಂಜಿನೀರಿಂಗ್ ವಿಭಾಗ, ಬೆಳಗಾವಿ**

ಕ್ರ.ಸಂ.:ಪಂರಾಇಂ/ವಿಬೆ/ಪಿಬಿ-1,2/ಟೆಂಡರ್-37/2025-26/3675 ದಿನಾಂಕ 16-9-2025

**ಗುತ್ತಿಗೆ ಆಹ್ವಾನ ಪ್ರಕಟಣೆ (ಇ-ಪ್ರೊಕ್ಯೂರ್‌ಮೆಂಟ್)**

ಕಾರ್ಯನಿರ್ವಾಹಕ ಅಭಿಯಂತರರು, ಪಂಚಾಯತ್‌ರಾಜ್ ಇಂಜಿನೀಯರಿಂಗ್ ವಿಭಾಗ ಬೆಳಗಾವಿ ಅಡಿಯಲ್ಲಿ ಐಟಂವಾರು ಗುತ್ತಿಗೆಗಳನ್ನು ಇ-ಪ್ರೊಕ್ಯೂರ್‌ಮೆಂಟ್ ವೇದಿಕೆ ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆಯ ಚಾಲ್ತಿ ನೋಂದಾಯಿತ ಗುತ್ತಿಗೆದಾರರಿಗಾಗಿ ಸ್ಟ್ಯಾಂಡರ್ಡ ಟೆಂಡರ ಡಾಕ್ಯೂಮೆಂಟ್ ಕೆ.ಡಬ್ಲ್ಯೂ-1,2 ರಲ್ಲಿ ಒಟ್ಟು 7 (18846, 18848, 18869, 18932, 18854, 11171, 18933,) ಕಾಮಗಾರಿಯ ಟೆಂಡರ್ ಗುತ್ತಿಗೆಯನ್ನು ಕರೆಯಲಾಗಿದ್ದು ಗರಿಷ್ಠ ಹಾಗೂ ಕನಿಷ್ಠ ಅಂದಾಜು ಮೊತ್ತ ಅನುಕ್ರಮವಾಗಿ ರೂ. 22.00 ಹಾಗೂ ರೂ. 1.25 ಲಕ್ಷಗಳು ಗರಿಷ್ಠ ಹಾಗೂ ಕನಿಷ್ಠ ಮುಂಗಡ ಠೇವಣಿ ಮೊತ್ತ ಅನುಕ್ರಮವಾಗಿ ರೂ. 44,000/- ಹಾಗೂ 3125/- ಗಳು ಇರುತ್ತದೆ. ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಕಚೇರಿಗೆ ಹಾಜರಾಗಿ ಸಲ್ಲಿಸುವ ಕೊನೆಯ ದಿನಾಂಕ: 30-09-2025 ಸಂಜೆ 17:28 ರೊಳಗಾಗಿ, ಗುತ್ತಿಗೆದಾರರಿಂದ ಅರ್ಜಿಗಳನ್ನು ಆನ್ ಲೈನ್ ಮೂಲಕ ಮನವಿ ಮಾಡಿಕೊಳ್ಳುವ ಕೊನೆಯ ದಿನಾಂಕ: 30-09-2025 ಸಂಜೆ 17.30 ಗಂಟೆಯವರೆಗೆ, ತಾಂತ್ರಿಕ ಬಿಡ್‌ನ್ನು ತೆರೆಯುವ ದಿನಾಂಕ: 03-10-2025 ಮುಂಜಾನೆ 11:00 ಗಂಟೆಯ ನಂತರ ಹಾಗೂ ಆರ್ಥಿಕ ಬಿಡ್ ತೆರೆಯುವ ದಿನಾಂಕ: 03-10-2025 ರಂದು ಮುಂಜಾನೆ 11.30 ಗಂಟೆಗೆ ಇರುತ್ತದೆ. ಪರಿಷ್ಕೃತ ವೇಳಾಪಟ್ಟಿ/ತಿದ್ದುಪಡಿಗಳು/ ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಹಾಗೂ ಅಂತರ್‌ಜಾಲದ www.kppp.karnataka.gov.inರಲ್ಲಿ ಪಡೆಯಬಹುದು.

ಸಹಿ
ಕಾರ್ಯನಿರ್ವಾಹಕ ಅಭಿಯಂತರು,
ಎಂ.ರಾ.ಇಂ. ವಿಭಾಗ, ಬೆಳಗಾವಿ,

DIPR/BGM/RO-NO-1031/2024-25


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :189, Postal Reg No. PMG/KA/NK/BM/135/25-27 / POST AT Vantamury Colony Post Office